ಸಂಪುಟ: ೦೬/ ಸಂಚಿಕೆ: ೨೬೨/ರವಿವಾರ ದಿನಾಂಕ : ೧೫-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 262/ SUNDAY Date : 15-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ವಕ್ಫ ಆಸ್ತಿ ಕಬಳಿಕೆ: 150 ಕೋಟಿ ವಿಜಯೇಂದ್ರರಿಂದ ಆಮಿಷ ಎಂದ ಮುಖ್ಯಮಂತ್ರಿ



ಬೆಂಗಳೂರು: ವಕ್ಫ ಆಸ್ತಿ ಕಬಳಿಕೆಯ ಬಗ್ಗೆ ಮೌನವಾಗಿರಲು ಬಿ.ವೈ.ವಿಜಯೇಂದ್ರ ಬಿಜೆಪಿ ಸರ್ಕಾರದಲ್ಲಿ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷರಾಗಿದ್ದ ಅನ್ವರ್ ಮಾಣಿಪ್ಪಾಡಿ ಅವರಿಗೆ ರೂ. 150 ಕೋಟಿ ಆಮಿಷವೊಡ್ಡಿದ್ದರು ಎಂಬುದು ಬಯಲಾಗಿದೆ. ಈ ಆರೋಪವನ್ನು ಪ್ರಧಾನ ಮಂತ್ರಿ ಗಂಭೀರವಾಗಿ ಪರಿಗಣಿಸಿ ತಕ್ಷಣ ಸಿಬಿಐ ತನಿಖೆಗೆ ಆದೇಶಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಿದ್ದರಾಮಯ್ಯ, 'ಬಿ.ಎಸ್ ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಕಾಲದಲ್ಲಿಯೇ ವಿಜಯೇಂದ್ರ ನಮ್ಮ ಮನೆಗೆ ಬಂದು ವಕ್ಸ್ ಆಸ್ತಿ ಕಬಳಿಕೆಯ ತನಿಖೆ ನಡೆಸಿ ನೀಡಿರುವ ವರದಿ ಬಗ್ಗೆ ಮೌನವಹಿಸುವಂತೆ ಕೇಳಿಕೊಂಡಿದ್ದು ಮಾತ್ರವಲ್ಲ ಇದಕ್ಕಾಗಿ ರೂ. 150 ಕೋಟಿ ಆಮಿಷವೊಡ್ಡಿದ್ದರು. ನಾನು ಅವರಿಗೆ ಗದರಿಸಿ ಮನೆಯಿಂದ ಓಡಿಸಿದ್ದೆ. ಅದರ ನಂತರ ಈ ಎಲ್ಲ ಘಟನೆಗಳನ್ನು ಉಲ್ಲೇಖಿಸಿ ಪ್ರಧಾನಿ ನರೇಂದ್ರ ಮೋದಿ ಮತ್ತು ಪಕ್ಷದ ರಾಷ್ಟ್ರೀಯ ಅಧ್ಯಕ್ಷರಿಗೆ ಪತ್ರ ಬರೆದಿದ್ದೆ ಎಂದು ಸಾಕ್ಷಾತ್ ಅನ್ವರ್ ಮಾಣಿಪ್ಪಾಡಿಯವರೇ ಮಾಧ್ಯಮದ ಮುಂದೆ ಹೇಳಿಕೊಂಡಿದ್ದರು. 'ನಾ ಖಾವೂಂಗಾ, ನಾ ಖಾನೆ ದೂಂಗಾ' ಎಂದು ಊರೆಲ್ಲ ಡಂಗೂರ ಹೊಡ್ಕೊಂಡು ತಿರುಗಾಡುವ ನರೇಂದ್ರ ಮೋದಿಯವರು ಈ ಆರೋಪದ ಬಗ್ಗೆ ಮೌನವಾಗಿರುವುದು ಸಂಶಯವನ್ನು ಮಾತ್ರವಲ್ಲ, ಅನೇಕ ಪ್ರಶ್ನೆಗಳನ್ನು ಹುಟ್ಟುಹಾಕಿದೆ? ಎಂದು ಹೇಳಿದ್ದಾರೆ.

'ವಕ್ಫ ಆಸ್ತಿ ವಿಚಾರದಲ್ಲಿ ವಿಜಯೇಂದ್ರ ಅವರು ವಹಿಸುತ್ತಿರುವ ಆಸಕ್ತಿಯನ್ನು ನೋಡಿದರೆ ಅವರು ಮತ್ತು ಅವರ ಕುಟುಂಬ ವರ್ಗ ವಕ್ಫ ಆಸ್ತಿ ಕಬಳಿಕೆಯಲ್ಲಿ ನೇರವಾಗಿ ಶಾಮೀಲಾಗಿರುವಂತೆ ಕಾಣುತ್ತಿದೆ. ಅವರ ಜೊತೆ ರಾಜ್ಯ ಬಿಜೆಪಿ ಪಕ್ಷದ ಮಹಾಮಹಿಮರೆಲ್ಲರೂ ಶಾಮೀಲಾಗಿರುವ ಸಂಶಯ ಇದೆ. ಬಿ.ಎಸ್.ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದ ಕಾಲದಲ್ಲಿಯೇ ವಕ್ಫ ಆಸ್ತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಗರಿಷ್ಠ ಸಂಖ್ಯೆಯಲ್ಲಿ ನೋಟಿಸ್ ನೀಡಿರುವುದನ್ನು ಈಗಾಗಲೇ ಮಾಧ್ಯಮಗಳು ವ್ಯಾಪಕವಾಗಿ ವರದಿ ಮಾಡಿವೆ. ಮಾಣಿಪ್ಪಾಡಿ ಅವರ ಬಾಯಿಮುಚ್ಚಿಸುವ ಷಡ್ಯಂತ್ರದಲ್ಲಿ ಯಾರೆಲ್ಲ ಶಾಮೀಲಾಗಿದ್ದಾರೆ? ವಕ್ಫ ಆಸ್ತಿ ಲೂಟಿಯಲ್ಲಿ ಬೇರೆ ಯಾರೆಲ್ಲ ಪಾಲುದಾರರಿದ್ದಾರೆ? ಎನ್ನುವ ಬಗ್ಗೆಯೂ ತನಿಖೆಯಾಗಬೇಕಾಗಿದೆ' ಎಂದು ಆಗ್ರಹಿಸಿದ್ದಾರೆ.

'ಆಶ್ಚರ್ಯದ ಸಂಗತಿಯೆಂದರೆ, ಒಂದೆಡೆ ಇಂತಹ ಗಂಭೀರ ಆರೋಪ ಹೊತ್ತುಕೊಂಡಿರುವ ವಿಜಯೇಂದ್ರ ಅವರು ಬಿಜೆಪಿಯ ರಾಜ್ಯಾಧ್ಯಕ್ಷರಾಗುತ್ತಾರೆ, ಇನ್ನೊಂದೆಡೆ ಪಕ್ಷದ ಹೈಕಮಾಂಡ್‌ಗೆ ಎರಡು ಸಾವಿರ ಕೋಟಿ ರೂಪಾಯಿ ಸಂದಾಯ ಮಾಡಿ ವಿಜಯೇಂದ್ರ ಅವರು ತಮ್ಮ ತಂದೆ ಯಡಿಯೂರಪ್ಪನವರನ್ನು ಮುಖ್ಯಮಂತ್ರಿ ಮಾಡಿದ್ದಾರೆ ಎಂದು ಬಿಜೆಪಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ ಆರೋಪಿಸುತ್ತಾರೆ. ಈ ಎಲ್ಲ ಬೆಳವಣಿಗೆಗಳನ್ನು ಒಂದು ಕ್ರಮದಲ್ಲಿ ಜೋಡಿಸಿ ನೋಡಿದರೆ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರ, ಕರ್ನಾಟಕವನ್ನು ಎಟಿಎಂ ಮಾಡಿಕೊಂಡಿತ್ತು ಎಂದು ಆರೋಪಿಸಬೇಕಾಗುತ್ತದೆ' ಎಂದು ಹೇಳಿದ್ದಾರೆ. 'ಪ್ರಧಾನಿ ನರೇಂದ್ರ ಮೋದಿ ಅವರೇ, ಕೋವಿಡ್ ಸಲಕರಣೆಗಳ ಖರೀದಿ ಭ್ರಷ್ಟಾಚಾರದಿಂದ ಹಿಡಿದು ವಕ್ಫ ಆಸ್ತಿ ಕಬಳಿಕೆಯಲ್ಲಿನ ಲೂಟಿವರೆಗೆ ರಾಜ್ಯ ಬಿಜೆಪಿಯ ಕಪಾಟಿನಿಂದ ಒಂದೊಂದೇ ಅಸ್ಥಿ ಪಂಜರಗಳು ಉರುಳಿಬೀಳುತ್ತಲೇ ಇದೆ. ಈ ಹಗರಣಗಳಿಂದ ತಪ್ಪಿಸಿಕೊಳ್ಳುವ ಉದ್ದೇಶದಿಂದಲೇ ರಾಜ್ಯದ ಬಿಜೆಪಿ ನಾಯಕರು ನಮ್ಮ ಪಕ್ಷ ಮತ್ತು ನಾಯಕರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿ ಜನರ ಗಮನ ಬೇರೆ ಕಡೆ ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ' ಎಂದು ಹೇಳಿದ್ದಾರೆ.

## ಬಿಡಿಎ ಮಾದರಿಯಲ್ಲಿ ಮುಡಾ ಪ್ರತ್ಯೇಕ ಕಾಯ್ದೆಗೆ ಸರ್ಕಾರ ಚಿಂತನೆ



ಬೆಂಗಳೂರು: ಬಿಡಿಎ ಮಾದರಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ಕ್ಕೆ ಪ್ರತ್ಯೇಕ ಕಾಯ್ದೆ ರಚನೆಗೆ ರಾಜ್ಯ ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ತಿಳಿದು ಬಂದಿದೆ.

ಬೆಳಗಾವಿ ಸುವರ್ಣಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದ್ದು, ಮುಂದಿನ ವಾರ ಅಧಿವೇಶನದಲ್ಲಿ ಬಿಲ್ ಮಂಡನೆಯಾಗಲಿದೆ ಎಂದು ತಿಳಿದು ಬಂದಿದೆ.

ಇದೂವರೆಗೂ ಮುಡಾ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧೀನದಲ್ಲಿದ್ದತ್ತು. ಈಗ ಬಿಡಿಎ ಮಾದರಿಯಲ್ಲೇ ಮುಡಾಗೆ ಪ್ರತ್ಯೇಕ ಕಾಯ್ದೆ ರಚನೆಗೆ ಸರಕಾರ ಮುಂದಾಗಿದೆ.

12 ಏಕಲವ್ಯ ಮಾದರಿ ವಸತಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು 54.66 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ತಿಳಿದು ಬಂದಿದೆ.

ಪರಿಶಿಷ್ಟ ಪಂಗಡಗಳ 14 ವಿದ್ಯಾರ್ಥಿ ನಿಲಯಗಳಿಗೆ 72 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಹೇಳಲಾಗಿದೆ.

ಕರ್ನಾಟಕ ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ) ವಿಧೇಯಕ–2024 ಹಾಗೂ ಕರ್ನಾಟಕ ಜಲಸಾರಿಗೆ ಅಭಿವೃದ್ಧಿ ನೀತಿ–2024ಕ್ಕೆ ಅನುಮೋದನೆ ನೀಡಲಾಗಿದೆ ಎಂದು ತಿಳಿದು ಬಂದಿದೆ. **ಎಸ್.ಎಂ.ಕೃಷ್ಣಗೆ ಮರಣೋತ್ತರ ಕರ್ನಾಟಕ ರತ್ನ?**

ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ನೀಡುವ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗಿದೆ ಎಂದು ತಿಳಿದು ಬಂದಿದೆ.

## ತ್ರಿವಳಿ ಮಕ್ಕಳಿಗೆ ಜನ್ಮ ನೀಡಿದ ಮಹಿಳೆ

### ಮೂರು ಶಿಶುಗಳ ಜೊತೆಗೆ ತಾಯಿಯ ಕಾಳಜಿ ಮಾಡಿದ ವೈದ್ಯೆ



ಮೂಡಲಗಿ : ಸಮೀಪದ ಕಂಕನವಾಡಿ ಗ್ರಾಮದ ಪೂಜಾ ಸುರೇಶ್ ಕಾಲತಿಪ್ಪಿ ಎಂಬ 23 ವರ್ಷದ ಮಹಿಳೆಯೊಬ್ಬಳು ತ್ರಿವಳಿ ಮಕ್ಕಳಿಗೆ ಜನ್ಮ ನೀಡಿದ ಘಟನೆ ಮೂಡಲಗಿಯ ಕಡಾಡಿ ಆರೋಗ್ಯ ಆಧಾರ ಹಾಸ್ಪಿಟಲನಲ್ಲಿ ನಡೆದಿದೆ

ರಾಯಬಾಗ ತಾಲೂಕಿನ ಕಂಕನವಾಡಿ ಗ್ರಾಮದ ಪೂಜಾ ಸುರೇಶ್ ಕಾಲತಿಪ್ಪಿ ದಂಪತಿಗಳಿಗೆ ಎರಡು ಗಂಡು ಮಗು, ಒಂದು ಹೆಣ್ಣು ಮಗು ಮೊದಲನೆಯ ಗಂಡ ಮಗು 2 ಕೆಜಿ 200ಗ್ರಾಂ, ಎರಡನೆಯ ಗಂಡು ಮಗು 2ಕೆಜಿ 100ಗ್ರಾಂ, ಮೂರನೆಯ ಹೆಣ್ಣುಮಗು 2ಕೆಜಿ ಇದ್ದು ಉತ್ತಮ ಆರೋಗ್ಯ ಹೊಂದಿವೆ,

ಖ್ಯಾತ ಸ್ತ್ರೀರೋಗ ತಜ್ಞೆ ಡಾಕ್ಟರ್ ಮಯೂರಿ ಮ ಕಡಾಡಿ ಅವರಲ್ಲಿ ಮೊದಲಿನಿಂದಲೂ ಪೂಜಾ ವೈದ್ಯಕೀಯ ಆರೈಕೆಯಲ್ಲಿದ್ದರು, ಮೂರು ಮಕ್ಕಳು ಇರುವದನ್ನು ಗಮನಿಸುತ್ತಾ ಬಂದ ಡಾ ಮೈಯೂರಿ ಅವರು ಯಾವದೇ ತೊಂದರೆಯಾಗದ ರೀತಿಯಲ್ಲಿ ಔಷದೋಪಾಚಾರ ಮಾಡುತ್ತಾ ಮೋನ್ನೆ ನವಮಾಸಗಳು ಪೂರ್ಣಗೊಂಡ ನಂತರ ಹೆರಿಗೆ ಮಾಡಿಸಿಕೊಂಡು ಮೂರು ಮಕ್ಕಳು ತಾಯಿ ಕ್ಷೇಮವಾಗಿರುವಂತೆ ಆರೈಕೆ ಮಾಡಿದರು,

ಮೂರು ನವಜಾತ ಶಿಶುಗಳನ್ನು ಪರಿಶೀಲಿಸಿ ಆರೋಗ್ಯವಾಗಿ ಉತ್ತಮವಾಗಿ ಇವೆ ಎಂದು ಖ್ಯಾತ ಚಿಕ್ಕ ಮಕ್ಕಳ ತಜ್ಞ ಡಾಕ್ಟರ್ ಮಹಾಂತೇಶ್ ಕಡಾಡಿ, ಡಾ. ವಿಜಯ್ ಬೆನಕಟ್ಟಿ ತಿಳಿಸಿದರು,

ವೈದ್ಯರಾದ ಡಾಕ್ಟರ್ ಬಸವರಾಜ್ ಹೊನ್ನ, ಡಾಕ್ಟರ್ ಪ್ರಜ್ವಲ್ (ಸ್ತ್ರೀರೋಗ ತಜ್ಞರು) ಡಾ. ಪ್ರತಿಮಾ ಗಿಣಿಮೂಗಿ ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಇದ್ದರು.



ಹಳ್ಳೂರ 14.ಗ್ರಾಮದಲ್ಲಿ ನೆಲೆಸಿರುವ ಹಳ್ಳೂರ, ಕಪ್ಪಲಗುದ್ದಿ, ಶಿವಾಪೂರ ಮೂರೂರು ಗ್ರಾಮದ ಆರಾಧ್ಯ ದೇವತೆಯಾದ ಶ್ರೀ ಮಹಾಲಕ್ಷ್ಮೀ ದೇವಿ ಕಾರ್ತಿಕೋತ್ಸವ ಕಾರ್ಯಕ್ರಮವು ಅತೀ ವಿಜೃಂಭಣೆಯಿಂದ ನಡೆಯಿತು. ಪಲ್ಲಕ್ಕಿ ಉತ್ಸವ, ಡೊಳ್ಳು ಕುಣಿತ ನಡೆದು ಪಲ್ಲಕ್ಕಿ ಮೇಲೆ ಭಕ್ತಾದಿಗಳ ಇಷ್ಟಾರ್ಥಗಳನ್ನು ಈಡೇರಿಸುವ ಸಲುವಾಗಿ ಬೆಂಡು ಬತ್ತಾಸು ಖಾರಿಕು ಹಾರಿಸಿ ಹರಕೆ ತೀರಿಸಿದರು. ಭಕ್ತರು ಬಂಡಾರದಲ್ಲಿ ಭಂಡಾರದಲ್ಲಿ ಮಿಂದೆದಿದ್ದರು.ಸರ್ವರಿಗೂ ಮಹಾಪ್ರಸಾದ ವ್ಯವಸ್ಥೆ ನಡೆಯಿತು.

## ರೈತರ ವಿವಿಧ ಬೇಡಿಕೆಗಳಿಗೆ ಪ್ರತಿಭಟನೆ ಹಾಗೂ ಬೃಹತ್ ಸಮಾವೇಶ



ರಾಮದುರ್ಗ : ರಾಜ್ಯರೈತ ಸಂಘಟನೆಗಳ ಒಕ್ಕೂಟ, ಕರ್ನಾಟಕರಾಜ್ಯರೈತ ಸಂಘ, ರಾಜ್ಯಕಬ್ಬು ಬೆಳೆಗಾರರ ಸಂಘಗಳ ನೇತೃತ್ವದಲ್ಲಿ ಡಿ–23 ರಂದು ಮೈಸೂರಿನ ಮುಕ್ತ ವಿಶ್ವವಿದ್ಯಾಲಯದ ಶತಮಾನೋತ್ಸವ ಭವನದಲ್ಲಿರಾಜ್ಯ ಮಟ್ಟದರೈತಬೃಹತ್‌ಸಮಾವೇಶ, 2024ನೇ ಸಾಲಿನ ವಿಶ್ವರೈತ ದಿನಾಚರಣೆ, ರೈತರ ಹಬ್ಬಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದುಕಬ್ಬು ಬೆಳೆಗಾರರ ಸಂಘದಜಿಲ್ಲಾಧ್ಯಕ್ಷ ಗುರುಸಿದ್ದಪ್ಪ ಕೋಟಗಿ ಹೇಳಿದರು.

ಪಟ್ಟಣದ ಪ್ರೆಸ್‌ಕ್ಲಬ್‌ನ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದಅವರು,ರೈತರ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ನಡೆಯುವರಾಜ್ಯ ಮಟ್ಟದ ಸಮಾವೇಶದಲ್ಲಿರೈತರ ಸಮಸ್ಯೆಗಳ ಕುರಿತುಚರ್ಚಿಸಲಾಗುತ್ತಿದೆ.ಸಮಾವೇಶಕ್ಕೂ ಮೊದಲು ಡಿ–16 ರಂದು ಸೋಮವಾರ ಬೆಳಗಾವಿಯಲ್ಲಿ ರೈತರ ಬೇಡಿಕೆಗಳ ಇಡೇರಿಕೆಗೆ ಪ್ರತಿಭಟನೆ ನಡೆಸಿ, ಸಂಸದಜಗದೀಶ ಶೆಟ್ಟರಅವರಿಗೆ ಮನವಿ ಸಲ್ಲಿಸಲಾಗುತ್ತಿದೆ.

ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿ, ಕೃಷಿ ಸಾಲ ಸಂಪೂರ್ಣ ಮನ್ನಾ, ಕೃಷಿ ಸಾಲ ನೀತಿ ಬದಲಾವಣೆ, ಭೂಮಿ ಮೌಲ್ಯಕ್ಕೆಅನುಗುಣ ಸಾಲ ಸೌಲಭ್ಯಕಲ್ಪಿಸುವುದು.ಕೃಷಿ ಸಾಲಕ್ಕೆ ಸಿಬಿಲ್ ಸ್ಕೋರ್ ಪರಿಗಣಿಸದೇಇರುವುದು. ಕೃಷಿ ಭೂಮಿ ಮುಟ್ಟುಗೋಲುಕಾಯಿದೆ ಬದಲಾಣೆ, ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗಧಿ, ಕೃಷಿಗೆ ಬಳಕೆ ಮಾಡುವ ಸರಗೊಬ್ಬರ ಸೇರಿದಂತೆಇತರೆ ಉತ್ಪನ್ನಗಳ ಮೇಲೆ ವಿಧಿಸಿರುವ ಜಿಎಸ್‌ಟಿ ಸುಂಕ ರದ್ದು ಸೇರಿದಂತೆ ಹಲವಾರು ಬೇಡಿಕೆಗಳ ಹಕ್ಕೊತ್ತಾಯಗಳ ಕುರಿತು ಸಮಾವೇಶದಲ್ಲಿ ನಿರ್ಣಯುತೆಗೆದುಕೊಂಡುಉಭಯ ಸರಕಾರಗಳ ಗಮನ ಸೆಳೆಯುವ ಉದ್ದೇಶ ಸಮಾವೇಶ ಹೊಂದಿದೆಎಂದು ಹೇಳಿದರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಪ್ರತಿಭಟನೆ ಹಾಗೂ ಮೈಸೂರಿನಲ್ಲಿ ನಡೆಯುವ ಬೃಹತ್‌ರೈತಸಮಾವೇಶದಲ್ಲಿ ಬೆಳಗಾವಿ ಜಿಲ್ಲೆ ಮತ್ತುರಾಮದುರ್ಗತಾಲೂಕಿನರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿಕಬ್ಬು ಬೆಳೆಗಾರರ ಸಂಘದಜಿಲ್ಲಾ ಕಾರ್ಯದರ್ಶಿ ಎಸ್.ಬಿ. ಸಿದ್ನಾಳ, ಸದಸ್ಯ ಮಲ್ಲಪ್ಪ ಮನಿಹಾಳ ಸೇರಿದಂತೆಇತರರಿದ್ದರು.

## ಕಲಾಭವನದಲ್ಲಿ ಸಿರಿಧಾನ್ಯ – ಸಾವಯವ ಮೇಳ

### ಪ್ರಾಚೀನ ಆಹಾರ ಪದ್ದತಿ ಮುನ್ನೆಲೆಗೆ ಬರಲಿದೆ : ಪಿ.ಎಚ್.ಪೂಜಾರ




ಬಾಗಲಕೋಟೆ: : ಹಿಂದೆ ಬಡವರ ಆಹಾರವಾಗಿದ್ದ ಸಜ್ಜೆ, ಜೋಳ, ನವಣೆ ಪದಾರ್ಥಗಳು ಇಂದು ಸಿರಿವಂತರ ಆಹಾರವಾಗುತ್ತಿದ್ದು, ಪ್ರಾಚೀನ ಕಾಲದ ಆಹಾರ ಪದ್ದತಿ ಮತ್ತೆ ಮರುಕಳುಹಿಸುತ್ತಿದೆ ಎಂದು ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆ, ಧಾರವಾಡ ಕೃಷಿ ವಿಜ್ಞಾನ ಕೇಂದ್ರ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕೃಷಿ ತಂತ್ರಜ್ಞಾನ ಸಹಯೋಗದಲ್ಲಿ ಆಹಾರ ಮತ್ತು ಪೌಷ್ಠಿಕ ಭದ್ರತೆ ಯೋಜನೆಯಡಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಸಿರಿಧಾನ್ಯ ಹಾಗೂ ಸಾವಯವ ಮೇಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಆಧುನಿಕತೆಯ ಭರಾಟೆಯಲ್ಲಿ ಪ್ರತಿಯೊಬ್ಬರ ಜೀವನ ಶೈಲಿ ಜೊತೆಗೆ ಆಹಾರ ಪದ್ದತಿಗಳು ಬದಲಾಗುತ್ತಿದೆ ಎಂದರು.

ವರ್ಷದಿಂದ ವರ್ಷಕ್ಕೆ ಬದಲಾಗುತ್ತಿರುವ ಆಹಾರ ಪದ್ದತಿಯಿಂದ ಅದಕ್ಕೆ ಅನುಗುಣವಾಗಿ ರೋಗಗಳ ಸಂಖ್ಯೆಯು ಹೆಚ್ಚಾಗುತ್ತಿವೆ. ಕೆಲವೊಂದು ರೋಗಗಳು ವಿಜ್ಞಾನಿ ಹಾಗೂ ವೈದ್ಯರಿಗೂ ತಿಳಿಯದಂತಾಗಿರುವುದು ವಿಪರ್ಯಾಸ ಎಂದ ಅವರು ಹಿಂದೆ ನಿಯಮಿತವಾದ ಆಹಾರ ಕಲಬರಕೆ ರಹಿತ ಆಹಾರ, ರಾಸಾಯನಿಕ ಬಳಸದ ಕೃಷಿ ಬೆವರು ಸುರಿಸ ಶ್ರಮದಿಂದಾಗಿ ಉತ್ತಮ ಆರೋಗ್ಯದೊಂದಿಗೆ ದೀರ್ಘಾಯುಷಿ ಆಗತ್ತಿದ್ದರು. ಆದರೆ ಇಂದು ಬಣ್ಣ ಹಾಗೂ ನಾಲಿಗೆ ಋಚಿಗಾಗಿ, ಪೌಷ್ಠಿಕಾಂಶಗಳಿಲ್ಲದ ಆಹಾರ ತಿಂದು ಅಲ್ಪಾಯಿಗಳಾಗುತ್ತಿದ್ದಾರೆ. ಆದ್ದರಿಂದ ಸಿರಿಧಾನ್ಯಗಳ ಬಳಕೆ ಪ್ರಚಲಿತವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ, ಸಿರಿಧಾನ್ಯ ಉತ್ಪನ್ನಗಳ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಅವರು ಬಾಗಲಕೋಟೆ ಜಿಲ್ಲೆಯ ಬಾದಾಮಿ, ಹುನಗುಂದ ಹಾಗೂ ಬಾಗಲಕೋಟೆಗಳಲ್ಲಿ ಸಿರಿಧಾನ್ಯಗಳನ್ನು ಅಧಿಕ ಪ್ರಮಾಣದಲ್ಲಿ ಬೆಳೆಯಲಾಗುತ್ತಿದ್ದು, ಮುಂದೆ ಇವುಗಳಿಗೆ ಉತ್ತೇಜನ ನೀಡಿ ಹೆಚ್ಚು ಉತ್ಪನ್ನ ಬರುವಂತೆ ಮಾಡುವುದು ಅವಶ್ಯವಾಗಿದೆ. ಮಳೆಯ ಆಶ್ರಿತ ಸಿರಿಧಾನ್ಯವಾಗಿದ್ದರಿಂದ ಹೆಚ್ಚಿನ ನೀರಿನ ಅವಶ್ಯಕತೆ ಇರುವದಿಲ್ಲ. ಕೃಷಿಗೆ ಹೆಚ್ಚಿನ ಖರ್ಚು ಇಲ್ಲ. ಆದ್ದರಿಂದ ಕಬ್ಬು ಸೇರಿದಂತೆ ಕೇವಲ ವಾಣಿಜ್ಯ ಬೆಳೆಗಳನ್ನು ಬೆಳೆಯದೇ ಉತ್ತಮ ಜೀವನಕ್ಕಾಗಿ ಬದುಕಲು ಅವಶ್ಯವಾಗಿರುವ ಪೌಷ್ಠಿಕಾಂಶಗಳನ್ನು ಹೆಚ್ಚು ಸಿರಿಧಾನ್ಯಗಳನ್ನು ಹೆಚ್ಚಾಗಿ ಬೆಳೆಯಲು ತಿಳಿಸಿದರು.

ಜನಪದ ಆಶುಕವಿ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಿದ್ದಪ್ಪ ಬಿದರಿ ಮಾತನಾಡಿ ನಮ್ಮ ದೇಶ ಕೃಷಿ ಪ್ರಧಾನವಾಗಿದ್ದು, ಇಂದಿನ ಯುವಕರು ಕೃಷಿಯತ್ತ ಒಲವು ತೋರಬೇಕಾಗಿರುವುದು ಅವಶ್ಯವಾಗಿದೆ. ಅಕ್ಷರ ಜ್ಞಾನದ ಜೊತೆಗೆ ಸಾಮಾನ್ಯ ಜ್ಞಾನ ಅವಶ್ಯವಾಗಿದ್ದು, ಮಕ್ಕಳಿಗೆ ಶಿಕ್ಷಣದ ಜೊತೆ ಕೃಷಿ ಚಟುವಟಿಕೆಗಳ ಬಗ್ಗೆ ಪೋಷಕರು ಆಸಕ್ತಿ ಮೂಡಿಸಬೇಕು. ಗುರು–ಹಿರಿಯ ಬಗ್ಗೆ ಗೌರವ ಕೊಡುವ ನೈತಿಕತೆ ಪಾಠಗಳು ಇಂದು ಅವಶ್ಯವಾಗಿವೆ. ಹಿರಿಯರು ಮಾಡಿಟ್ಟ ಆಸ್ತಿಯನ್ನು ಉಪಯೋಗಿಸಿಕೊಳ್ಳದೇ ಬೆಂಗಳೂರಿನತ್ತ ಪ್ರಯಾಣ ಮಾಡುತ್ತಿದ್ದಾರೆ. ಇಂತಹ ಪರಿಸ್ಥಿತಿ ಉಂಟಾಗದಂತೆ ಮುಂದಿನ ಜನಾಂಗಕ್ಕೆ ಎಚ್ಚರಿಕೆ ಮೂಡಿಸುವ ಕೆಲಸವಾಗಬೇಕು ಎಂದರು.

ಪರಿಣಿತ ತಜ್ಞರಾದ ಡಾ.ಚಂದ್ರಶೇಖರ ಬಿರಾದಾರ ಖುಷ್ಕಿ ಬೆಳೆಗಳಲ್ಲಿ ಸಿರಿಧಾನ್ಯಗಳ ಮಹತ್ವ ತಿಳಿಸಿಕೊಟ್ಟರೆ, ಸಿರಿಧಾನ್ಯಗಳ ಬಳಕೆ ಕುರಿತು ಡಾ.ಕಾಶಿಬಾಯಿ ಖ್ಯಾದಗಿ, ಸಾವಯವ ಕೃಷಿ ಸಿರಿಧಾನ್ಯ ಬೆಳೆಗಳ ಪೋಷಕಾಂಶಗಳ ಮಹತ್ವ ಕುರಿತು ಡಾ.ಭುವನೇಶ್ವರಿ ಹೇಳಿದರು. ಪ್ರಾರಂಭದಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿ.ಪಂ ಸಿಇಓ ಶಶಿಧರ ಕುರೇರ, ಕೃಷಿ ಇಲಾಖೆಯ ಉಪನಿರ್ದೇಶಕರಾದ ಎಲ್.ಆಯ್.ರೂಢಗಿ, ಕೆ.ಎನ್.ಅಗಸನಾಳ, ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಡಾ.ಆರ್.ಎ.ನಂದಗಾವಿ, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಹಾರಾಷ್ಟ್ರ ವಿದ್ಯುತ್ ನೀತಿ ವರದಿ ಕೊಡಿ

### ಅಧಿಕಾರಿಗಳಿಗೆ ಜವಳಿ ಸಚಿವ ಶಿವಾನಂದ ಪಾಟೀಲ ನಿರ್ದೇಶನ

ಬೆಳಗಾವಿ: ಮಹಾರಾಷ್ಟ್ರ ಸರ್ಕಾರ ಜವಳಿ ಉದ್ಯಮಿಗಳಿಗೆ ವಿದ್ಯುತ್ ಪೂರೈಕೆ ಮಾಡುತ್ತಿರುವ ನೀತಿ ಅಧ್ಯಯನ ಮಾಡಿ ವರದಿ ಕೊಡಿ ಎಂದು ಜವಳಿ ಸಚಿವ ಶಿವಾನಂದ ಪಾಟೀಲ ಅವರು ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ?

ಹುಕ್ಕೇರಿ ತಾಲೂಕಿನ ಕುರ್ಣೆ ಟೆಕ್ಸ್ಟೈಲ್ ಪಾರ್ಕ್ಗೆ ಶನಿವಾರ ಭೇಟಿ ನೀಡಿ ಪರಿಶೀಲನೆ ಮಾಡಿ ಪವರ್ಲೂಮ್ ಮಾಲೀಕರ ಅಹವಾಲು ಸ್ವೀಕರಿಸಿದ ನಂತರ ಮಾತನಾಡಿದ ಅವರು, ವಿದ್ಯುತ್ ಬದಲಿಗೆ ಸೋಲಾರ್ ಅಳವಡಿಸಿಕೊಂಡರೆ ಅದರ ಸಾಧಕ ಬಾಧಕಗಳೇನು ಎಂಬ ಬಗ್ಗೆಯೂ ವರದಿ ಕೊಡಿ ಎಂದು ಸೂಚನೆ ನೀಡಿದರು.

ಜವಳಿ ಉದ್ಯಮ ಅಭಿವೃದ್ಧಿ ಮತ್ತು ನೇಕಾರರ ಹಿತ ಗಮನದಲ್ಲಿರಿಸಿಕೊಂಡು ಹೊಸ ಜವಳಿ ನೀತಿ ರೂಪಿಸಲಾಗುತ್ತಿದೆ? ಉದ್ಯಮಕ್ಕೆ ಪೂರಕವಾಗಿ ನೀತಿಯಲ್ಲಿ ಸೇರ್ಪಡೆ ಮಾಡಬೇಕಾದ ಅಂಶಗಳ ಬಗ್ಗೆ ಪರಿಣಿತರಿಂದ ಸಲಹೆ ಪಡೆಯಲಾಗುತ್ತಿದೆ ಎಂದು ಹೇಳಿದರು?

ಬೆಳಗಾವಿ ಜಿಲ್ಲೆಯಲ್ಲಿ ಜವಳಿ ಉದ್ಯಮವನ್ನು ಬೆಳೆಸಬೇಕಾದರೆ ಮಹಾರಾಷ್ಟ್ರ ಸರ್ಕಾರದ ವಿದ್ಯುತ್ ನೀತಿಯನ್ನು ಕರ್ನಾಟಕದಲ್ಲೂ ಜಾರಿಗೆ ತರಬೇಕು? ಹಾಗೂ ಬಂಡವಾಳ ಸಬ್ಸಿಡಿಯನ್ನು ಸಕಾಲಕ್ಕೆ ಬಿಡುಗಡೆ ಮಾಡಬೇಕು ಎಂದು ಜವಳಿ ಉದ್ಯಮಿಗಳು ಸಚಿವರಿಗೆ ಮನವಿ ಮಾಡಿದರು?

ಮಹಾರಾಷ್ಟ್ರದಲ್ಲಿ ವಿದ್ಯುತ್ನೀತಿ ಜವಳಿ ಉದ್ಯಮ ಬೆಳವಣಿಗೆಗೆ ಪೂರಕವಾಗಿದೆ ವಿದ್ಯುತ್ ಸಬ್ಸಿಡಿಯನ್ನು 25 ವರ್ಷಗಳವರೆಗೆ ಮುಂದುವರಿಸಬೇಕು? ಆಗ ಈ ಭಾಗದಲ್ಲಿ ಸುಮಾರು ಒಂದು ಸಾವಿರ ಕೋಟಿ ಹೂಡಿಕೆ ನಿಶ್ಚಿತ ಆಗ ಸುಮಾರಿ ಮೂರು ಸಾವಿರ ಉದ್ಯೋಗ ಸೃಷ್ಟಿಯಾಗಲಿವೆ ಎಂದು ಹೇಳಿದರು.

ವಿದ್ಯುತ್ ಸಬ್ಸಿಡಿ ಬಿಲ್ನಲ್ಲೇ ಕಡಿತ ಮಾಡುವ ಪದ್ಧತಿ ಸೂಕ್ತ. ವಿದ್ಯುತ್ ಬಿಲ್ ಪಾವತಿ ಮಾಡಿದ ನಂತರ ಸರ್ಕಾರ ಸಬ್ಸಿಡಿಯನ್ನು ಮರುಪಾವತಿ ಮಾಡುವ ವ್ಯವಸ್ಥೆ ಉದ್ಯಮಪೂರಕವಲ್ಲ ಎಂದು ಹೇಳಿದರು.

ಅಹವಾಲು ಕೇಳಿದ ಸಚಿವರು, ನಮ್ಮ ಸರ್ಕಾರ ಜವಳಿ ಉದ್ಯಮ ಬೆಳೆಸುವ ನಿಟ್ಟಿನಲ್ಲಿ ಪ್ರಯತ್ನ ನಡೆಸಿದೆ. ಹೀಗಾಗಿ ಅಭಿಪ್ರಾಯಗಳನ್ನು ಸಂಗ್ರಹ ಮಾಡಲಾಗುತ್ತದೆ. ಪೂರಕವಾಗಿರುವ ಅಂಶಗಳನ್ನು ಪರಿಗಣಿಸಿ ಜಾರಿಗೆ ತರಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಮಹಾರಾಷ್ಟ್ರ ಸರ್ಕಾರಕ್ಕೆ ಹೋಲಿಕೆ ಮಾಡಿದರೆ ಕರ್ನಾಟಕ ಸರ್ಕಾರ ಜವಳಿ ಉದ್ಯಮಕ್ಕೆ ಹೆಚ್ಚು ಪ್ರೋತ್ಸಾಹ ನೀಡುತ್ತಿದೆ. ಆದರೂ ಸಹ ಇನ್ನೂ ಹೆಚ್ಚಿನ ಬೆಳವಣಿಗೆ ದೃಷ್ಟಿಯಿಂದ ಮಹಾರಾಷ್ಟ್ರದ ನೀತಿಯನ್ನೂ ಅಧ್ಯಯನ ಮಾಡಿ ಸಾಧ್ಯವಿರುವ ಅಂಶಗಳನ್ನು ಅಳವಡಿಸಿಕೊಳ್ಳಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಪಶುಪತಿನಾಥ ಟೆಕ್ಸ್ಟೈಲ್ಸ್ ಘಟಕಕ್ಕೆ ಭೇಟಿ ನೀಡಿ ಏರ್ಜೆಟ್ ಮಗ್ಗ ಕಾರ್ಯನಿರ್ವಹಣೆ ಬಗ್ಗೆ ಸಚಿವರು ಮಾಹಿತಿ ಪಡೆದರು. ಸ್ಪರ್ಧಾತ್ಮಕ ಜವಳಿ ಉದ್ಯಮದಲ್ಲಿ ಪೈಪೋಟಿ ನೀಡಲು ಏರ್ಜೆಟ್ ಮಗ್ಗಗಳು ಸೂಕ್ತವಾಗಿವೆ ಎಂದು ಟೆಕ್ಸ್ಟೈಲ್ ಅಡ್ವೈಸರ್ ರಮಾನಂದ ಕುಲಕರ್ಣಿ ತಿಳಿಸಿದರು. ಜವಳಿ ಇಲಾಖೆ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಡಾ. ಶಿವರಾಜ ಕುಲಕರ್ಣಿ ಅವರು ಕುರ್ಣೆ ಟೆಕ್ಸ್ಟೈಲ್ ಪಾರ್ಕ್ ಯೋಜನೆ ಬಗ್ಗೆ ವಿವರಿಸಿದರು. ಪ್ರಶಾಂತ್ ಗೌಡರ್ ಹರ್ಷವರ್ಧನ್ ಕುರಣೆ, ದಯಾನಿಧಿ ಕುರಣೆ, ಅಂಕಿತ್ ಬಹೆಟಿ, ಕೃಷ್ಣ ಗಿಲಾದ, ಪ್ರಶಾಂತ್ ಗೌಡರ್ ಉಪಸ್ಥಿತರಿದ್ದರು.

> ರಾಜ್ಯದಲ್ಲಿ ಜವಳಿ ಉದ್ಯಮದ ಬೆಳವಣಿಗೆಗೆ ಪೂರಕವಾಗಿ ಹೊಸ ನೀತಿಯನ್ನು ರೂಪಿಸಲಾಗುತ್ತಿದ್ದು, ಪರಿಣಿತರಿಂದ ಸಲಹೆ ಪಡೆಯಲಾಗುತ್ತದೆ ಜೊತೆಗೆ ನೆರೆಯ ಮಹಾರಾಷ್ಟ್ರ ಸರ್ಕಾರ ಅನುಸರಿಸುತ್ತಿರುವ ನೀತಿಯ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ.
>
> **ಶಿವಾನಂದ ಪಾಟೀಲ**
> **ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು**



**ಟೆಕ್ಸ್ಟೈಲ್ ಪಾರ್ಕ್ ಮಾಹಿತಿ**

* ಪಾರ್ಕ್ ವಿಸ್ತೀರ್ಣ – 18 ಎಕರೆ
* ಯೋಜನಾ ವೆಚ್ಚ – 5035.77 ಲಕ್ಷ ರೂ
* ಸಂಸ್ಥೆಯ ವಂತಿಗೆ – 2860.875 ಲಕ್ಷ ರೂ.
* ಸರ್ಕಾರದ ವಂತಿಗೆ – 1907.24 ಲಕ್ಷ ರೂ.
* ನಿವೇಶನಗಳು – 95

ಕಾನಿಕೇರಿ-ಬಿಜ್ಜೂರ ಸರ್ಕಾರಿ ಶಾಲೆಗೆ ಇಒ ಎನ್.ಎಸ್. ಮಸಳಿ ದಿಢೀರ್ ಬೇಟಿ

# ಶಾಲೆಯ ಸ್ಥಿತಿಗತಿ ಕುರಿತು ಪರಿಶೀಲನೆ



ಮುದ್ದೇಬಿಹಾಳ: ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಎಸ್.ಮಸಳಿ ಅವರು ತಾ ಬಿಜ್ಜೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾನಿಕೇರಿ–ಬಿಜ್ಜೂರ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಶುಕ್ರವಾರ ದಿಢೀರ್ ಬೇಟಿ ನೀಡಿ ಶಾಲೆಯ ಸ್ಥಿತಿಗತಿಯ ಬಗ್ಗೆ ಪರಿಶೀಲಿಸಿದರು.

ಶಾಲಾ ಸ್ವಚ್ಛತೆ, ಅಗತ್ಯ ಮೂಲ ಸೌಕರ್ಯ ಹಾಗೂ ಮಕ್ಕಳ ಹಾಜರಾತಿ ಬಗ್ಗೆ ಮುಖ್ಯ ಶಿಕ್ಷಕ ಅಶೋಕ ನರಸಲಗಿ ಜೊತೆ ಚರ್ಚಿಸಿದರು. ಹೆಣ್ಣು ಮಕ್ಕಳಿಗೆ ಶೌಚಾಲಯ ಹಾಗೂ ಬಿಸಿಯೂಟ ಅಡುಗೆಕೋಣೆ ಅಗತ್ಯವಿದೆ ಎಂದು ಮುಖ್ಯ ಶಿಕ್ಷಕರು ತಿಳಿಸಿದರು.

ಈ ಬಗ್ಗೆ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಕೆ.ಹೆಚ್. ಕುಂಬಾರ ಜೊತೆ ಚರ್ಚಿಸಿ ನರೇಗಾ ಯೋಜನೆಯಡಿ ಬಿಸಿಯೂಟ ಅಡುಗೆಕೋಣೆ ಹಾಗೂ ಹೆಣ್ಣು ಮಕ್ಕಳಿಗೆ ಸುಸಜ್ಜಿತ ಶೌಚಾಲಯ ನಿರ್ಮಾಣ ಮಾಡುವಂತೆ ಸೂಚಿಸಿದರು.

ಗ್ರಾ.ಪಂ.15ನೇ ಹಣಕಾಸು ಯೋಜನೆಯಡಿ ವಿತರಿಸಲಾದ 4 ಕಂಪ್ಯೂಟರ್, 1 ಲ್ಯಾಪ್‌ಟಾಪ್, 1 ಪ್ರೋಜೆಕ್ಟರ್ ಗಳನ್ನು ವೀಕ್ಷಿಸಿ ಗ್ರಾಮ ಪಂಚಾಯತಿ ಕಾರ್ಯ ಕುರಿತು ಪ್ರಸಂಶೆ ವ್ಯಕ್ತಪಡಿಸಿದರು.

ನಂತರ ಬಿಸಿಯೂಟ ಅಡುಗೆ ಕೋಣೆ ವೀಕ್ಷಿಸಿ ಮಕ್ಕಳಿಗೆ ವಿತರಿಸುವ ಆಹಾರ ಹಾಗೂ ಕೇಂದ್ರದ ಸ್ವಚ್ಛತೆ ಬಗ್ಗೆ ಪರಿಶೀಲಿಸಿದರು. ವೇಳಾಪಟ್ಟಿಗನುಣವಾಗಿ ಸರಿಯಾದ ಸಮಯಕ್ಕೆ ಮಕ್ಕಳಿಗೆ ರುಚಿ–ಶುಚಿಯಾದ ಅಡುಗೆ ಮಾಡುವಂತೆ ಬಿಸಿಯೂಟ ಸಿಬ್ಬಂದಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಎಸ್ ಡಿಎಂಸಿ ಸದಸ್ಯರ ಗುರು ಬಿರಾದಾರ,ಶಾಲಾ ಸಹ ಶಿಕ್ಷಕ ಮುನ್ನಾ ನದಾಫ್, ತಾ.ಪಂ.ವಿಷಯ ನಿರ್ವಾಹಕ ಶಾಂತಪ್ಪ ಬಂಗಾರಗುಂಡ, ಶಾಲಾ ಸಿಬ್ಬಂದಿ ಹಾಗೂ ಗ್ರಾ.ಪಂ.ಸಿಬ್ಬಂದಿ ಸೇರಿದಂತೆ ಉಪಸ್ಥಿತರಿದ್ದರು.

ಎಲೆ ಚುಕ್ಕೆ ರೋಗ : 53,977 ಹೆಕ್ಟೇರ್ ಅಡಿಕೆ ಬೆಳೆ ಹಾನಿ

# ರೋಗ ನಿಯಂತ್ರಣ ಸಂಶೋಧನೆಗೆ ರೂ.50 ಲಕ್ಷ ಅನುದಾನ -ಸಚಿವ ಎಸ್.ಎಸ್.ಮಲ್ಲಿಕಾರ್ಜುನ್

ಬೆಳಗಾವಿ ಸುವರ್ಣಸೌಧ, : ಎಲೆ ಚುಕ್ಕೆ ರೋಗದಿಂದ ರಾಜ್ಯದಲ್ಲಿ ಸುಮಾರು 53,977 ಹೆಕ್ಟೇರ್ ಪ್ರದೇಶದಲ್ಲಿ ಬೆಳೆದಿರುವ ಅಡಿಕೆ ಬೆಳೆಗೆ ಹಾನಿಯಾಗಿದೆ. ರೋಗ ಹರಡದಂತೆ ನಿಯಂತ್ರಣ ಮಾಡಲು ಸರ್ಕಾರ ಶಿವಮೊಗ್ಗ ತೋಟಗಾರಿಕೆ ವಿಶ್ವ ವಿದ್ಯಾಲಯದ ತಜ್ಞರ ನೇತೃತ್ವದ ತಂಡ ರಚನೆ ಮಾಡಿದ್ದು, ಸಂಶೋಧನೆಗೆ ರೂ.50 ಲಕ್ಷ ಅನುದಾನ ಒದಗಿಸಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾ–ರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮಾಹಿತಿ ನೀಡಿದರು. ಬೆಳಗಾವಿ ಸುವರ್ಣಸೌಧಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಶುಕ್ರವಾರ ವಿಧಾನ ಸಭೆ ಪ್ರಶ್ನೋತ್ತರ ಕಲಾಪದಲ್ಲಿ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಅವರು ಉತ್ತರಿಸಿದರು.

ಎಲೆಚುಕ್ಕೆ ರೋಗವು 3 ವಿಧದ ಶಿಲೀಂಧ್ರಗಳಿಂದ ಹರಡುತ್ತಿದೆ. ನೆಲಕ್ಕೆ ಬಿದ್ದ ಗರಿಗಳಲ್ಲಿ ಶಿಲೀಂದ್ರ ಬೆಳವಣಿಯಾಗುತ್ತದೆ. ಮಳೆ ಹನಿಗಳ ಚಿಮ್ಮುವಿಕೆಯಿಂದ ಶಿಲೀಂಧ್ರದ ಕಣಗಳು ಗಾಳಿಯಲ್ಲಿ ಸೇರಿ ಇತರೆ ಗಿಡಗಳು ಹಾಗೂ ತೋಟಗಳಿಗೆ ಹರಡುತ್ತವೆ. ತೇವ ಭರಿತ ಬಿಸಿಲಿನ ವಾತಾವರಣ, 18 ಡಿಗ್ರಿ ಸೆಲಿಯಸ್ ನಿಂದ 24 ಡಿಗ್ರಿ ಕಡಿಮೆ ಉಷ್ಣಾಂಶ ಹಾಗೂ ಹೆಚ್ಚಿನ ಆದ್ರತೆಯ ವಾತಾವರಣದಲ್ಲಿ ರೋಗ ತೀವ್ರವಾಗಿ ಹರಡುತ್ತಿದೆ ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಸರ್ಕಾರ ಎಲೆಚುಕ್ಕೆ ರೋಗದಿಂದ ಹಾನಿಯಾದ ಅಡಿಕೆ ಬೆಳೆಯುವ ರೈತರಿಗೆ ಸಸ್ಯ ಸಂರಕ್ಷಣಾ ಔಷಧಿಗಳಾದ ರೋಗ ನಿಯಂತ್ರಣಕ್ಕಾಗಿ ಹೆಕ್ಸೋಕೋನೊಜೋಲ್, ಟೆಬುಕೊನೊಜೋಲ್ ಮತ್ತು ಪ್ರೋಪಿಕೊನೊಜೋಲ್ ನೀಡಲಾಗುತ್ತಿದೆ. ಇದಕ್ಕಾಗಿ 2023–24ನೇ ಸಾಲಿನಲ್ಲಿ 6,250 ಹೆಕ್ಟೇರ್ ಪ್ರದೇಶದ 12,300 ಅಡಿಕೆ ಬೆಳೆಗಾರ–ರಿಗೆ ರೂ.2.50 ಕೋಟಿ ಅನುದಾನವನ್ನು ನೀಡಲಾಗಿದೆ. ಸಂಪ್ರದಾಯಕವಾಗಿ ಅಡಿಕೆ ಬೆಳೆಯುವ ಪ್ರದೇಶದಲ್ಲಿ ಅಡಿಕೆ ಬೆಳೆ ಕಟಾವು ಹಾಗೂ ಸಿಂಪರಣೆಗಾಗಿ ದೋಟಿ ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವ–ರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಶೇ.50 ರಷ್ಟು ಸಹಾಯಧನ ನೀಡಲಾಗುತ್ತಿದೆ. ಈ ಯೋಜನೆಯಡಿ 2023–24ನೇ ಸಾಲಿಗೆ 1,201 ಫಲಾನುಭವಿಗಳಿಗೆ ರೂ.3.66 ಕೋಟಿ ಸಹಾಯಧನ ನೀಡಲಾಗಿದೆ. ರೋಗದ ನಿಯಂತ್ರಣ ಕುರಿತು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನ ವಿಶ್ವ ವಿದ್ಯಾಲಯದ ತಜ್ಞರ ಸಹಯೋಗದಲ್ಲಿ ರೈತರಿಗೆ ತರಬೇತಿ, ಪ್ರಾತ್ಯಕ್ಷತೆಗಳನ್ನು ನೀಡಿ, ಮಾಹಿತಿ ಹಾಗೂ ಪ್ರಚಾರ ಕಾರ್ಯ ಮಾಡಲಾಗುತ್ತಿದೆ. ರೋಗದ ಅಧ್ಯಯನಕ್ಕಾಗಿ ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡ ಚಿಕ್ಕಮಗಳೂರು, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಭೇಟಿ ನೀಡಿ ಅಧ್ಯಯನ ನಡೆಸಿ, ತಾಂತ್ರಿಕ ಸಲಹೆಗಳನ್ನು ನೀಡಿದೆ. ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ ಅವರ ಮೂಲಕ ಕೇಂದ್ರ ಸರ್ಕಾರಕ್ಕೆ ರೂ.225.73 ಕೋಟಿ ಪರಿಹಾರ ನೀಡಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದರು.

ಶಾಸಕರಾದ ಭೀಮಣ್ಣ ಟಿ ನಾಯಕ್, ಆರಗ ಜ್ಞಾನೇಂದ್ರ ಸೇರಿದಂತೆ ಮಲೆನಾಡು ಹಾಗೂ ಕರಾವಳಿ ಭಾಗದ ಇತರೆ ಶಾಸಕರು, ಸರ್ಕಾರ ರೋಗ ತಡೆಗೆ ಉಚಿತವಾಗಿ ಔಷಧೋಪಚಾರಗಳನ್ನು ನೀಡಬೇಕು. ಅಡಕೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಹರಿಹರ ನಗರದ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿ ಹೊಸ ಕಟ್ಟ ನಿರ್ಮಾಣಕ್ಕೆ ರೂ.45 ಲಕ್ಷ ಅನುದಾನ ನೀಡಲಾಗಿದೆ ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ಶಾಸಕ ಹ–ರೀಶ್.ಬಿ.ಪಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ಶಾಸಕ ಅವಿನಾಶ್ ಉಮೇಶ್ ಜಾದವ್ ಅವರು, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾ–ರಿಕೆ ಇಲಾಖೆಯಿಂದ 2 ಹೆಕ್ಟೇರ್ ಭೂಮಿ ಹೊಂದಿರುವ ಎಲ್ಲಾ ವರ್ಗದ ರೈತರಿಗೆ ಶೇ.90 ರಷ್ಟು ಹಾಗೂ 2 ಹೆಕ್ಟೇರ್ ನಿಂದ 5 ಹೆಕ್ಟೇರ್ ವರೆಗಿನ ಜಮೀನು ಹೊಂದಿರುವ ರೈತರಿಗೆ ಶೇ.45 ರಷ್ಟು ಸಹಾಯಧನ ನೀಡುತ್ತಿರುವುದಕ್ಕೆ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದರು. ಶಾಸಕ ರವಿಕುಮಾರ್ ಗೌಡ ತೋಟಗಾರಿಕೆ ಇಲಾಖೆಯಿಂದ ರೈತ–ರಿಗೆ ಉಚಿತವಾಗಿ ತೆಂಗಿನ ಸಸಿಗಳನ್ನು ನೀಡುವಂತೆ ಮನವಿ ಮಾಡಿದರು.

# ಗ್ರಾಮ ಪಂಚಾಯತ್‌ಗಳ 5,257.70 ಕೋಟಿ ರೂ ವಿದ್ಯುತ್ ಶುಲ್ಕ ತೀರುವಳಿ: ಸಚಿವ ಪ್ರಿಯಾಂಕ್ ಖರ್ಗೆ

ಬೆಳಗಾವಿ ಸುವರ್ಣಸೌಧ, ಡಿ.13 : ರಾಜ್ಯದ ಗ್ರಾಮ ಪಂಚಾಯತ್ ಗಳು ಏಪ್ರಿಲ್ 2015 ರಿಂದ ಮಾರ್ಚ್ 2023 ರ ವರೆಗೆ ವಿದ್ಯುತ್ ಸರಬರಾಜು ಕಂಪೆನಿಗಳಿಗೆ ಪಾವತಿಸಬೇಕಾಗಿರುವ ಕುಡಿಯುವ ನೀರು ಮತ್ತು ಬೀದಿ ದೀಪ ಸ್ಥಾವರಗಳ ಬಾಕಿ ವಿದ್ಯುತ್ ಶುಲ್ಕದ ಒಟ್ಟು ಮೊ ತ್ತ ರೂ.6,509,90 ಕೋಟಿಗಳಲ್ಲಿ ಅಸಲು ಮೊತ್ತ ರೂ.5,257.70 ಕೋಟಿಗಳನ್ನು ಸರ್ಕಾರದ ಖಾತರೀಕರಣ ಮೂಲಕ ತೀರುವಳಿ ಮಾಡಿ ಹಾಗೂ ಬಡ್ಡಿ ಮೊತ್ತ ರೂ.1,252.20 ಕೋಟಿಗಳನ್ನು ಮನ್ನಾ ಮಾಡಿ ಆದ–ೇಶ ಹೊರಡಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಡಾ.ತಿಮ್ಮಯ್ಯ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತ–ರಿಸಿದರು.

ಎಪ್ರಿಲ್ 2023 ರಿಂದ ಸೆಪ್ಟೆಂಬರ್ 2024 ರ ವರೆಗೆ ಗ್ರಾಮ ಪಂಚಾಯತಿಗಳ ಕುಡಿಯುವ ನೀರು ಮತ್ತು ಬೀದಿ ದೀಪ ಸ್ಥಾವರಗಳ ವಿದ್ಯುತ್ ಶುಲ್ಕದ ಒಟ್ಟು ಮೊತ್ತ ರೂ.3,719.20 ಕೋಟಿಗಳು ಬಾಕಿ ಇರುತ್ತದೆ. ಈ ಮೊತ್ತದಲ್ಲಿ ಅಸಲು ಮೊತ್ತ ರೂ.2,749.54 ಕೋಟಿಗಳು ಮತ್ತು ಬಡ್ಡಿ ಮೊತ್ತ ರೂ.969.66 ಕೋಟಿಗಳು ಒಳಗೊಂಡಿದ್ದು, ಸದರಿ ಮೊತ್ತವನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಬೇಕಾಗಿರುತ್ತದೆ.

ಗ್ರಾಮ ಪಂಚಾಯತಿಗಳಿಗೆ ರಾಜ್ಯ ಹಣಕಾಸು ಆಯೋಗದ ಅಭಿವೃದ್ಧಿ ಅನುದಾನ / ಗ್ರಾಮ ಪಂಚಾಯತಿಗಳಿಗೆ ಸಹಾಯ ಹೆಸ–ರಿನಲ್ಲಿ ಒಟ್ಟು 1202.18 ಕೋಟಿಗಳ ಅನುದಾನವನ್ನು 2024–25 ನೇ ಸಾಲಿನಲ್ಲಿ ಒದಗಿಸಿದ್ದು, ಈ ಪೈಕಿ ರೂ. 391.79 ಕೋಟಿಗಳ ಅನುದಾನವನ್ನು ಗ್ರಾಮ ಪಂಚಾಯತಿಗಳ ವಿದ್ಯುತ್ ಶುಲ್ಕದ ಮೊತ್ತ ಭ–ರಿಸಲು ಬಿಡುಗಡೆ ಮಾಡಲಾಗುತ್ತಿದೆ. ಅಲ್ಲದೆ, ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲದಿಂದ ವಿದ್ಯುತ್ ಶುಲ್ಕದ ಮೊತ್ತವನ್ನು ಭರಿಸಬಹುದಾಗಿದೆ ಎಂದರು.

2024–25ನೇ ಸಾಲಿನ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳ ಗೌರವ ಧನಕ್ಕಾಗಿ 273.78 ಕೋಟಿಗಳ ಅನುದಾನ ಒದಗಿಸಲಾಗಿದ್ದು, ಡಿಸೆಂಬರ್ 2024 ರವರೆಗಿನ ಗೌರವಧನವನ್ನು ಬಿಡುಗಡೆ ಮಾಡಲಾಗಿದೆ . ಗ್ರಾಮಾಂತರದಲ್ಲಿರುವ ಪಂಚಾಯತ್ ಗಳಿಗೆ ಅನುದಾನ ಹೆಚ್ಚಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ ಎಂದರು.

# ಅತಿವೃಷ್ಟಿಯಿಂದಾದ ಹಾನಿಗೆ 297 ಕೋಟಿ ರೂ. ಪರಿಹಾರ:ಕೃಷ್ಣ ಭೈರೇಗೌಡ

ಬೆಳಗಾವಿ ಸುವರ್ಣ ವಿಧಾನಸೌಧ.ಡಿ.13:–ಈ ವರ್ಷ ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ಉಂಟಾದ ಬೆಳೆ, ಜೀವಹಾನಿ, ಮನೆ ಹಾನಿ ಸೇರಿದಂತೆ ವಿವಿಧ ಹಾನಿಗೆ ಸಂಬಂಧಿಸಿದಂತೆ ಒಟ್ಟು 297 ಕೋಟಿ ರೂ. ಪರಿಹಾರ ಪಾವತಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದರು.

ಬೆಳಗಾವಿ ಸುವರ್ಣ ಸೌಧದಲ್ಲಿ ಜರುಗುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಶುಕ್ರವಾರ ವಿಧಾನಸಭೆಯಲ್ಲಿ ಶೂನ್ಯವೇಳೆ ಚರ್ಚೆಯ ಸಂದರ್ಭದಲ್ಲಿ ರಾಜ್ಯದಲ್ಲಿ ಉಂಟಾದ ಮಳೆಹಾನಿ ಹಾಗೂ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಸದನಕ್ಕೆ ಸರ್ಕಾರದ ಪರವಾಗಿ ಹೇಳಿಕೆ ನೀಡಿದರು.

ರಾಜ್ಯದಲ್ಲಿ ಈ ವರ್ಷ ಅತಿವೃಷ್ಟಿಯಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆ, ಮನುಷ್ಯ ಹಾಗೂ ಜಾನುವಾರುಗಳ ಜೀವ ಹಾನಿ, ರಸ್ತೆ–ಸೇತುವೆ, ಇತರೆ ಮೂಲಭೂತ ಸೌಕರ್ಯಗಳಿಗೆ ಹಾನಿ ಉಂಟಾಗಿದೆ. ಕಳೆದ 20 ವರ್ಷಗಳಲ್ಲಿ ಸುಮಾರು 10 ರಿಂದ 15 ವರ್ಷ ಒಂದಲ್ಲ ಒಂದು ರೀತಿಯ ಪ್ರಕೃತಿ ವಿಕೋಪವನ್ನು ರಾಜ್ಯ ಎದು–ರಿಸಿದೆ. 2000 ರಿಂದ ಈವರೆಗೆ ಸುಮಾರು 17 ವರ್ಷ ಬರ ಪರಿಸ್ಥಿತಿಯನ್ನು ಎದುರಿಸಿದ್ದರೆ, 2019, 2022 ಹಾಗೂ 2024 ರಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ರಾಜ್ಯದಲ್ಲಿ ಆಗಿದೆ.

ರಾಜ್ಯದಲ್ಲಿ ಕೇವಲ ಮಳೆಯಿಂದ ಮಾತ್ರವಲ್ಲ, ಆಲಿಕಲ್ಲು ಮಳೆ, ಸಿಡಿಲು, ಮನೆ ಕುಸಿತ ಸಂದರ್ಭದಲ್ಲಿಯೂ ಹಾನಿ ಉಂಟಾಗಿದೆ, ಇದರ ಜೊತೆಗೆ 2018, 2019 ಮತ್ತು 2024 ರಲ್ಲಿ ಭೂ ಕುಸಿತ ಕೂಡ ಸಂಭವಿಸಿ ಹಾನಿಯಾಗಿದೆ. ಹೀಗಾಗಿ ಸರ್ಕಾರ ಇದನ್ನು ತಡೆಗಟ್ಟಲು ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳುತ್ತಿದ್ದೇವೆ. ತೀವ್ರ ಬರ ಪರಿಸ್ಥಿತಿ ಬಂದರೂ, ಎನ್‌ಡಿಆರ್‌ಎಫ್ ನಿಂದ ನಿಗದಿತ ಪ್ರಮಾಣದಲ್ಲಿ ಕೇಂದ್ರದಿಂದ ಪರಿಹಾರ ಹಣ ಬಾರದೇ ಇದ್ದಾಗ ನ್ಯಾಯಾಲಯದ ಮೊರೆ ಹೋಗಿ ಪರಿಹಾರ ಹಣ ಕೂಡ ಪಡೆದು, ಸುಮಾರು 45 ಲಕ್ಷ ರೈತರಿಗೆ 4200 ಕೋಟಿ ರೂ. ಪರಿಹಾರ ಕೊಟಿದ್ದೇವೆ ಎಂದರು.

ರೈತರಿಗೆ ಬೆಳೆ ನಷ್ಟ ಪರಿಹಾರ ಪಾವತಿ : ಈ ವರ್ಷ 852 ಮಿ.ಮೀ. ಮುಂಗಾರು ವಾಡಿಕೆ ಮಳೆ ಬದಲಿಗೆ 978 ಮಿ.ಮೀ. ಅಂದರೆ ಶೇ. 20 ರಷ್ಟು ಹೆಚ್ಚು ಮಳೆಯಾಗಿದೆ. ಹೀಗಾರಿನಲ್ಲಿ ಕೂಡ 173 ಮಿ.ಮೀ. ವಾಡಿಕೆ ಮಳೆ ಬದಲಿಗೆ 213 ಮಿ.ಮೀ. ಅಂದರೆ ಶೇ. 23 ರಷ್ಟು ಹೆಚ್ಚು ಮಳೆಯಾಗಿದೆ. ಕೆಲವು ಜಿಲ್ಲೆಗಳಲ್ಲಿ ವಾಡಿಕೆಗಿಂತಲೂ ಕಡಿಮೆ ಮಳೆ ಆಗಿದೆ. ಪ್ರಸಕ್ತ ಮುಂಗಾರು ಅವಧಿಯಲ್ಲಿ 1,59,718 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದ್ದು, ಒಟ್ಟು ರೂ.94.94 ಕೋಟಿ ಪರಿಹಾರ ವಿತರಿಸಲಾಗಿದೆ. ಹಿಂಗಾರು ಹಂಗಾಮಿನಲ್ಲಿ 1,45,254 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದ್ದು, ರೂ.01.12 ಕೋಟಿ ಹಣವನ್ನು ರೈತ–ರಿಗೆ ಪರಿಹಾರವಾಗಿ ಮಂಜೂರು ಮಾಡಲಾಗಿದೆ. ಕೆಲವು ಭಾಗದಲ್ಲಿ ರೈತರಿಗೆ ಪರಿಹಾರ ಹಣ ಖಾತೆಗೆ ಜಮಾ ಆಗಿದೆ. ಮುಂದಿನ ಒಂದೆರಡು ವಾರದಲ್ಲಿ ಎಲ್ಲಾ ರೈತರ ಖಾತೆಗಳಿಗೂ ಪರಿಹಾರ ಹಣ ಸಂದಾಯವಾಗಲಿದೆ" ಎಂದರು.

133 ಮೃತ ಕುಟುಂಬಕ್ಕೆ 6.64 ಕೋಟಿ ರೂ. ಪರಿಹಾರ : ನಮ್ಮ ರಾಜ್ಯದಲ್ಲಿ 10 ಹವಾಮಾನ ವಲಯಗಳಿವೆ (ಆಗ್ರೋ ಕ್ಲೈಮ್ಯಾಟಿಕ್ ಝೋನ್). ಇಲ್ಲಿ 450 ಮಿ.ಮೀ ರಿಂದ 4,000 ಮಿ.ಮೀ ವರೆಗೆ ವಾಡಿಕೆ ಮಳೆಯಾಗುವ ವೈವಿಧ್ಯತೆಯ ಪ್ರದೇಶಗಳು ಕರ್ನಾಟಕದಲ್ಲಿದೆ. ದೇಶದ ಯಾವ ರಾಜ್ಯದಲ್ಲೂ ಈ ವೈವಿಧ್ಯತೆ ಇಲ್ಲ. ಇದರಿಂದ ರಾಜ್ಯದಲ್ಲಿ ಕೆಲ ಪ್ರಾಣಹಾನಿಯೂ ಸಂಭವಿಸಿದೆ. ಕೆಲವರು ಹೊಳೆ ಉಕ್ಕಿಹರಿಯುವ ಸಂದರ್ಭದಲ್ಲಿ ನೀರಿನಲ್ಲಿ ಇಳಿದು ಕೊಚ್ಚಿಹೋಗಿದ್ದಾರೆ. ಕೆರೆ ತುಂಬಿದೆ ಎಂದು ಗೊತ್ತಿದ್ದರೂ ಈಜಲು ಹೋಗಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಸಿಡಿಲು ಬಡಿತದಿಂದ ಮೃತಪಟ್ಟವರೂ ಸೇರಿ ಈ ವರ್ಷ ಒಟ್ಟಾರೆ 133 ಜನ ಪ್ರಾಣ ಕಳೆದುಕೊಂಡಿದ್ದಾರೆ. ಸರ್ಕಾರದ ಕಡೆಯಿಂದ ಇಂತಹ ಘಟನೆಗಳಿಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಅಲ್ಲದೆ, ಈ ಎಲ್ಲಾ 133 ಮೃತರ ಕುಟುಂಬಗಳಿಗೆ ಈಗಾಗಲೇ ತಲಾ 5 ಲಕ್ಷ ದಂತೆ 6.64 ಕೋಟಿ ರೂ. ಪಾವತಿಸಲಾಗಿದೆ ಎಂದರು.

ಎಲ್ಲೆಲ್ಲಿ ಮಳೆಹಾನಿ..?: ಈ ವರ್ಷ ಮಹಾರಾಷ್ಟ್ರದಲ್ಲಿ ಹೆಚ್ಚು ಮಳೆಯಾದ ಕಾರಣ ಕೃಷ್ಣಾ ನದಿ ಉಕ್ಕಿ ಹರಿದು ನದಿಪಾತ್ರದ ಜನರಿಗೆ ಹಾನಿಯಾಗಿತ್ತು. ತುಂಗಭದ್, ಭೀಮಾ, ಕಬಿನಿ ಕಾವೇರಿಯಲ್ಲೂ ಹೆಚ್ಚು ನೀರು ಬಂದು ಹಾನಿಯಾಗಿ–ತ್ತು. ಧಾರವಾಡದ ಬೆಣ್ಣೆಹಳ್ಳ ಬಾಗಲಕೋಟೆ ಬಳ್ಳಾರಿ, ದಾವಣಗೆರೆ, ಶಿವಮೊಗ್ಗ ಭಾಗದಲ್ಲೂ ಮಳೆಯಿಂದಾಗಿ ನದಿಗಳು ಉಕ್ಕಿಹರಿದು ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ. ರಸ್ತೆ, ಸೇತುವೆ, ಶಾಲಾ ಕೊಠಡಿ, ಅಂಗನವಾಡಿ, ಆರೋಗ್ಯ ಕೇಂದ್ರ ಸೇರಿದಂತೆ ಮಲೆನಾಡು ಪ್ರದೇಶಗಳಲ್ಲಿ ಕೆಲ ವಿದ್ಯುತ್ ಸಂಪರ್ಕ ಕಟ್ಟಡಗಳಿಗೆ ಹಾನಿ ಉಂಟಾಗಿದೆ. ರಿಪೇರಿ ಕೆಲಸಗಳಿಗೆ ರೂ.80.47 ಕೋಟಿ ಅನುಧಾನ ನೀಡಲಾಗಿದೆ. ಈ ಪೈಕಿ ರೂ. 60.16 ಕೋಟಿ ಹಣ ಈಗಾಗಲೇ ಬಿಡುಗಡೆ ಮಾಡಿದ್ದು, ಪ್ರಸ್ತುತ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರ ಖಾತೆಯಲ್ಲಿ ಮುಂದಿನ ತುರ್ತು ಪರಿಹಾರಕ್ಕಾಗಿ ಸುಮಾರು ರೂ 579 ಕೋಟಿ ಅನುದಾನ ಲಭ್ಯವಿದೆ ಎಂದರು.

ಭೂ ಕುಸಿತ ತಡೆಗೆ ಶಾಶ್ವತ ಪರಿಹಾರ ಯೋಜನೆ: ಈ ವರ್ಷ ಭೂ ಕುಸಿತ ಪ್ರಕರಣ ನಿರೀಕ್ಷೆಗಿಂತ ಹೆಚ್ಚಾಗಿದೆ. ಕಾರವಾರದ ಘಟನೆ ಆಘಾತಕಾರಿಯಾಗಿದೆ. ಮಲೆನಾಡು ಭಾಗದಲ್ಲೂ ಸಣ್ಣಪುಟ್ಟ ಭೂ ಕುಸಿತದ ಘಟನೆ ಸಂಭವಿಸಿದೆ. ಈ ನಿಟ್ಟಿನಲ್ಲಿ ಭೂ ಕುಸಿತವನ್ನು ತಡೆಗಟ್ಟಲು ಶಾಶ್ವತ ಯೋಜನೆ ರೂಪಿಸಲಾಗಿದೆ ಎಂದು ಸದನಕ್ಕೆ ಸಚಿವ ಕೃಷ್ಣ ಬೈರೇಗೌಡ ಅವರು ಮಾಹಿತಿ ನೀಡಿದರು. "ಭೂ ಕುಸಿತ ತಡೆಗೆ ಶಾಶ್ವತ ಪರಿಹಾರ ನೀಡುವ ನಿಟ್ಟಿನಲ್ಲಿ ಸಿಎಂ ಜೊತೆ ಚರ್ಚಿಸಿ ಅವರ ಸೂಚನೆ ಹಿನ್ನೆಲೆ ಎರಡೂವರೆ ವರ್ಷದ ಅವಧಿಗೆ ರೂ.400 ಕೋಟಿ ರೂಪಾಯಿ ವೆಚ್ಚದಲ್ಲಿ ಭೂ ಕುಸಿತ ತಡೆಗಟ್ಟುವ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ತೀರ್ಮಾನಿಸಿದ್ದೇವೆ. ಭೂ ಕುಸಿತಕ್ಕೆ ಒಳಗಾಗಬಹುದಾದ ಪ್ರದೇಶಗಳ ಬಗ್ಗೆ ನ್ಯಾಷನಲ್ ಜಿಯೋಲಾಜಿಕಲ್ ಸರ್ವೇ ಎಂಬ ಕೇಂದ್ರ ಸರ್ಕಾರದ ಸಂಸ್ಥೆಯಿಂದ ವರದಿ ತ–ರಿಸಲಾಗಿದೆ. ಆ ವರದಿಯಲ್ಲಿ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಸೇರಿದಂತೆ 06 ಜಿಲ್ಲೆಗಳ 863 ಗ್ರಾಮ ಪಂಚಾಯಿತಿಗಳನ್ನು ಭೂ ಕುಸಿತ ಉಂಟಾಗಬಹುದಾದ ಪ್ರದೇಶಗಳು ಎಂದು ಗುರುತಿಸಲಾಗಿದೆ. ಈ ಜಿಲ್ಲೆಗಳಲ್ಲಿ ಭೂ ಕುಸಿತ ತಡೆಯುವ ಸಂಬಂಧಿ ಯೋಜನೆಗಳ ಕುರಿತು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಂದ ವರದಿ ತರಿಸಿಕೊಳ್ಳಲಾಗಿದೆ. ರೂ. 425 ಕೋಟಿ ವೆಚ್ಚದ ಯೋಜನೆಗಳಿಗೆ ಜಿಲ್ಲಾಧಿಕಾ–ರಿಗಳು ಪ್ರಸ್ತಾವನೆ ಸಲ್ಲಿಸಿದ್ದಾರೆ. ಭೂ ಕುಸಿತ ತಡೆಗಟ್ಟುವ ಕಾಮಗಾರಿಗೆ ಹಣ ನೀಡಲು ಸರ್ಕಾರ ಒಪ್ಪಿಗೆ ಸೂಚಿಸಿದೆ. ಅದರ ಭಾಗವಾಗಿ ತಕ್ಷಣ ರೂ.152 ಕೋಟಿ ಹಣವನ್ನು ವಿವಿಧ ಕಾಮಗಾರಿಗಳಿಗೆ ಮಂಜೂರು ಮಾಡಲಾಗಿದೆ. ಇದಲ್ಲದೆ, ಮಳೆ ಹೆಚ್ಚಾದಾಗ ನಗರ ಪ್ರದೇಶಗಳಲ್ಲಿ ನೀರನ್ನು ಹೊರಹಾಕುವ ಮೂಲಭೂತ ವ್ಯವಸ್ಥೆ ಇಲ್ಲ. ಇದೂ ಸಹ ಪ್ರವಾಹಕ್ಕೆ ಕಾರಣವಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ರೂ. 184 ಕೋಟಿ ಮೌಲ್ಯದ 259 ಕಾಮಗಾರಿಗಳಿಗೆ ತಕ್ಷಣ ಅನುಮೋದನೆ ನೀಡಲಿದ್ದೇವೆ ಎಂದು ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

## ಬೆಳಗಾವಿಯಲ್ಲಿ ರಸ್ತೆ ಸುರಕ್ಷತಾ ಜಾಗೃತಿ ಶಿಬಿರ ನಡೆಸಿದ ಹೋಂಡಾ ಮೋಟಾರುಸೈಕಲ್ ಮತ್ತು ಸ್ಕೂಟರ್ ಇಂಡಿಯಾ



ಬೆಳಗಾವಿ : ರಸ್ತೆ ಸುರಕ್ಷತೆಗೆ ಬದ್ಧತೆಯ ಭಾಗವಾಗಿ ಹೋಂಡಾ ಮೋಟಾರುಸೈಕಲ್ ಮತ್ತು ಸ್ಕೂಟರ್ ಇಂಡಿಯಾ ಬೆಳಗಾವಿಯಲ್ಲಿ ರಸ್ತೆ ಸುರಕ್ಷತಾ ಜಾಗೃತಿ ಶಿಬಿರ ನಡೆಸಿತು. ಕೆಎಲ್‌ಇ ಇಂಟರ್‌ನ್ಯಾಷನಲ್ ಸ್ಕೂಲ್‌ಮತ್ತು ಕೆಎಲ್‌ಇ ಸೊಸೈಟೀಸ್ ಲಿಂಗರಾಜ್ ಕಾಲೇಜ್‌ನಿಂದ 2200 ಗಿಂತ ಹೆಚ್ಚಿನ ಶಾಲಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸದಸ್ಯರಿಗೆ ಅರಿವು ಮೂಡಿಸಿ ಯುವಜನರಲ್ಲಿ ಜವಾಬ್ದಾರಿಯುತ ರಸ್ತೆ ನಡವಳಿಕೆ ಪ್ರೋತ್ಸಾಹಿಸಲು ಊಒಖಖ ನ ಬದ್ಧತೆಯನ್ನು ದೃಢಪಡಿಸಿತು.

ಸುರಕ್ಷಿತವಾದ ರಸ್ತೆ ಬಳಕೆ ಅಭ್ಯಾಸಗಳನ್ನು ಬೆಳೆಸುವ ಗುರಿ ಹೊಂದಿದೆ. ಸರ್ಕಾರಿ ಹಾಗೂ ಸರ್ಕಾರೇತರ ಶಾಲೆಗಳು, ಕಾಲೇಜುಗಳು ಮತ್ತು ಸಂಸ್ಥೆಗಳಾದ್ಯಂತ ಇಂತಹ ಯೋಜನೆಗಳನ್ನು ನಿಯಮಿತವಾಗಿ ನಡೆಸುವ ಮೂಲಕ ಊಒಖಖ ರಸ್ತೆ ಅಪಘಾತಗಳನ್ನು ಗಣನೀಯವಾಗಿ ಕಡಿಮೆ ಮಾಡಿ, ಜನರಲ್ಲಿ, ಅದರಲ್ಲೂ ನಿರ್ದಿಷ್ಟವಾಗಿ ಯುವಸವಾರರಲ್ಲಿ ಜವಾಬ್ದಾರಿಯುತ ಚಾಲನಾ ಅಭ್ಯಾಸಗಳನ್ನು ಪ್ರೋತ್ಸಾಹಿಸುವ ಉದ್ದೇಶ ಹೊಂದಿದೆ. ಎಚ್‌ಎಮ್‌ಎಸ್‌ಐ, ಕೆಎಲ್‌ಇ ಇಂಟರ್‌ನ್ಯಾಷನಲ್ ಸ್ಕೂಲ್ ಮತ್ತು ಕೆಎಲ್‌ಇ ಸೊಸೈಟೀಸ್ ಲಿಂಗರಾಜ್ ಕಾಲೇಜ್‌ಗೆ ಕೃತಜ್ಞತೆ ಸೂಚಿಸಿತು.

ಊಒಖಖ ದ ಕುಶಲ ಸುರಕ್ಷತಾ ಶಿಕ್ಷಕರು ದಿನಂಪ್ರತಿ, ಭಾರತದಾದ್ಯಂತ ನಾವು ದತ್ತು ತೆಗೆದುಕೊಂಡಿರುವ ನಮ್ಮ 10 ಸಂಚಾರ ತರಬೇತಿ ಪಾರ್ಕ್‌ಗಳಲ್ಲಿ(ಟಿಟಿಪಿ)ಹಾಗೂ 6 ಸುರಕ್ಷತಾ ಚಾಲನಾ ಶಿಕ್ಷಣ ಕೇಂದ್ರಗಳಲ್ಲಿ(Safety Driving Education Centers (SDEC) ಪ್ರೋಗ್ರಾಮ್‌ಗಳನ್ನು ನಡೆಸಿ ಸಮಾಜದ ಪ್ರತಿಯೊಂದು ಭಾಗಕ್ಕೂ ರಸ್ತೆ ಸುರಕ್ಷತೆಯ ಶಿಕ್ಷಣ ಸಿಗುವಂತೆ ಮಾಡುತ್ತಿದ್ದಾರೆ.

ಇತ್ತೀಚೆಗೆ ಊಒಖಖ ತನ್ನ ವಿನೂತನ ಡಿಜಿಟಲ್ ರಸ್ತೆ ಸುರಕ್ಷತಾ ಕಲಿಕಾ ವೇದಿಕೆ ಇ–ಗುರುಕುಲ್ ಪ್ರಾರಂಭಿಸಿತ್ತು. ಈ ಇ–ಗುರುಕುಲ್ ವೇದಿಕೆಯು, 5ರಿಂದ 18 ವರ್ಷ ವಯೋಮಿತಿಯೊಳಗಿನ ನಿರ್ದಿಷ್ಟ ಗುಂಪಿಗಾಗಿಯೇ ತರಬೇತಿ ಮಾಡ್ಯೂಲ್‌ಗಳನ್ನು ವಿನ್ಯಾಸಗೊಳಿಸಿ ರಸ್ತೆ ಸುರಕ್ಷತೆಯೆಡೆಗೆ ಸಮಗ್ರವಾದ ದೃಷ್ಟಿಕೋನ ಖಾತ–ರಿಪಡಿಸುತ್ತಿದೆ.

ಪ್ರಸ್ತುತ ಈ ಮಾಡ್ಯೂಲ್‌ಗಳು, ಕನ್ನಡ, ಮಲಯಾಳಂ, ಹಿಂದಿ, ತೆಲುಗು, ತಮಿಳು ಹಾಗೂ ಇಂಗ್ಲಿಷ್ ಮುಂತಾದ ಅನೇಕ ಭಾಷೆಗಳಲ್ಲಿ ಲಭ್ಯವಿದ್ದು, ಒಳಗೊಳ್ಳುವಿಕೆ ಮತ್ತು ಪ್ರಾದೇಶಿಕ ತತ್ಸಂಬಂಧತೆಯನ್ನು ಖಾತರಿಪಡಿಸುತ್ತದೆ. ಇ–ಗುರುಕುಲ್‌ಅನ್ನು egurukul.honda.hmsi.in ದಲ್ಲಿ ನೋಡಬಹುದು.

ಪ್ರತಿಯೊಂದು ರಾಜ್ಯದ ಶಾಲೆಗಳಿಗೂ ವಿಸ್ತರಣೆಯಾಗಲಿರುವ ಈ ಉಪಕ್ರಮವು ವಿವಿಧ ವಯೋಗುಂಪುಗಳಿಗಾಗಿ ರಚಿಸಲಾಗಿರುವ ರಸ್ತೆ ಸುರಕ್ಷತಾ ಶಿಕ್ಷಣವನ್ನು ಪ್ರೋತ್ಸಾಹಿಸುತ್ತದೆ.ಈ ಮಾಹಿತಿಗೆ ಪ್ರವೇಶ ಪಡೆದುಕೊಳ್ಳಲು ಆಸಕ್ತಿ ಇರುವ ಯಾವುದೇ ಶಾಲೆಯು Safety.ridinghonda.hmsi.in ಅನ್ನು ಸಂಪರ್ಕಿಸಬಹುದು.

## ಗ್ರಾಮ ಪಂಚಾಯತಿ ಮರುವಿಂಗಡಣೆ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಕಾರವಾರ, :–ಸರ್ಕಾರದ ನಿರ್ದೇಶನದಂತೆ ಹೊನ್ನಾವರ ತಾಲೂಕಿನ ಕೋಟಾ, ತುಂಬೆಬೀಳು, ಹೆರಾಳಿ, ಸುಳೆಬೀಳು, ಕುಚ್ಚೋಡಿ ಮತ್ತು ಸಂಪೊಳ್ಳಿ ಗ್ರಾಮಗಳನ್ನು ಒಳಗೊಂಡ ಕೋಟಾ ಗ್ರಾಮ ಪಂಚಾಯತಿ, ಹಾಗೂ ಹಡಿಕಲ್, ದಬ್ಬೋಡ, ಆಡುಕಳ, ಅಡಿಕೆಕುಳಿ ಮತ್ತು ಅಶಿಕೇರಿ ಗ್ರಾಮಗಳನ್ನು ಒಳಗೊಂಡ ಹಡಿಕಲ್ ಗ್ರಾಮ ಪಂಚಾಯತಿಯನ್ನಾಗಿಸಿ ಮರು ವಿಂಗಡಣೆ ಮಾಡುವ ಸಂಬಂಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 4(1) ಮತ್ತು (2) ಪ್ರಕಾರ ಪ್ರದತ್ತವಾದ ಅಧಿಕಾರ ಚಲಾಯಿಸಿ ಕೋಟಾ, ತುಂಬೆಬೀಳು, ಹೆರಾಳಿ, ಸುಳೆಬೀಳು, ಕುಚ್ಚೋಡಿ ಮತ್ತು ಸಂಪೊಳ್ಳಿ ಗ್ರಾಮಗಳನ್ನು ಒಳಗೊಂಡ ಕೋಟಾ ಗ್ರಾಮವನ್ನು ಗ್ರಾಮ ಪಂಚಾಯತಿಯ ಕೇಂದ್ರಸ್ಥಾನವಾಗಿ, ಹಾಗೂ ಹಡಿಕಲ್, ದಬ್ಬೋಡ, ಆಡುಕಳ, ಅಡಿಕೆಕುಳಿ ಮತ್ತು ಅಶಿಕೇರಿ ಗ್ರಾಮಗಳನ್ನು ಒಳಗೊಂಡ ಹಡಿಕಲ್ ಗ್ರಾಮವನ್ನು ಗ್ರಾಮ ಪಂಚಾಯತಿಯ ಕೇಂದ್ರಸ್ಥಾನವಾಗಿ, ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಘೋಷಿಸಿದ್ದಾರೆ. ಈ ಅಧಿಸೂಚನೆಯಿಂದ ಭಾಧಿತ ಸಾರ್ವಜನಿಕರು ಆಕ್ಷೇಪಣೆಗಳು ಮತ್ತು ಸಲಹೆ ಸೂಚನೆಗಳಿದ್ದಲ್ಲಿ ಡಿ. 16 ರಿಂದ ಜ.15 ರ ಒಳಗಾಗಿ ತಮ್ಮ ಆಕ್ಷೇಪಣೆ ದಾಖಲೆ ಸಹಿತ ಲಿಖಿತ ರೂಪದಲ್ಲಿ ಜಿಲ್ಲಾಧಿಕಾರಿ, ಉತ್ತರ ಕನ್ನಡ ಇವರಿಗೆ ಸಲ್ಲಿಸಬಹುದಾಗಿದೆ. ಸಾರ್ವಜನಿಕ–ರಿಂದ ಬರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಜ. 15 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರಬಂಧ, ಕನ್ನಡ ಮತ್ತು ಇಂಗ್ಲಿಷ್, ಕ್ವಿಜ್ ಹಾಗೂ ಪೋಸ್ಟರ್ ತಯಾರಿಕೆ ಸ್ಪರ್ಧೆಗಳನ್ನು ಯಲ್ಲಾಪುರದ ವಿಶ್ವದರ್ಶನ ಪ್ರೌಢಶಾಲೆಯಲ್ಲಿ ಶುಕ್ರವಾರ ನಡೆಯಿತು.
ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ನ ಆಡಳಿತ ಶಾಖೆಯ ಉಪ ಕಾರ್ಯದರ್ಶಿ ನಾಗೇಶ್ ರಾಯ್ಕರ್ ಮತ್ತಿತರರು ಇದ್ದರು.

# ಗೋಕಾಕ ನೂತನ ಜಿಲ್ಲೆ ಮಾಡಬೇಕು ಎಂದು ಆಗ್ರಹ




ಗೋಕಾಕ: ಹಿಂದಿನ ಸರಕಾರಗಳು ರಚಿಸಿದ ಮೂರು ಆಯೋಗಗಳ ವರದಿ ಆಧರಿಸಿ ಗೋಕಾಕ ನೂತನ ಜಿಲ್ಲೆಯಂದು ಘೋಷಣೆ ಮಾಡಬೇಕು ಎಂದು ಗೋಕಾಕ ಜಿಲ್ಲಾ ಹೋರಾಟ ಚಾಲನಾ ಸಮಿತಿಯ ಅಧ್ಯಕ್ಷ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಶುಕ್ರವಾರದಂದು ನಗರದ ಮಿನಿ ವಿಧಾನಸೌಧದ ಆವರಣದಲ್ಲಿ ಗೋಕಾಕ ಜಿಲ್ಲಾ ಹೋರಾಟ ಚಾಲನಾ ಸಮಿತಿ ನೇತೃತ್ವದಲ್ಲಿ ಹಮ್ಮಿಕೊಂಡ ಒಂದು ದಿನದ ಧರಣಿ ಸತ್ಯಾಗ್ರಹದ ನೇತೃತ್ವ ವಹಿಸಿ ಅವರು ಮಾತನಾಡಿದರು.

ಮುಂಬರುವ ದಿನಗಳಲ್ಲಿ ಸರಕಾರ ಗೋಕಾಕ ಜಿಲ್ಲೆ ಮಾಡದಿದ್ದಲ್ಲಿ ಅನಿರ್ವಾಯವಾಗಿ ಉಗ್ರ ಹೋರಾಟ ಮಾಡಬೇಕಾಗುತ್ತೆ ಎಂದ ಅವರು ಜಿಲ್ಲಾ ಉಸ್ತುವಾರಿ ಸಚಿವರು ಶಾಸಕರು ಸೇರಿ ಗೋಕಾಕ ಜಿಲ್ಲೆಯನ್ನು ಮಾಡಬೇಕು. ವಿಧಾನ ಸಭೆ ಅಧಿವೇಶನದಲ್ಲಿ ಈ ಕು–ರಿತು ಚರ್ಚೆ ಮಾಡಿ ಜಿಲ್ಲೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಜಿಲ್ಲೆ ಘೋಷಣೆ ಮಾಡದಿದ್ದರೆ ಉಗ್ರ ಸ್ವರೂಪದ ಹೋರಾಟ ಮಾಡಲಾಗುವುದು ಎಂದು ಹೇಳಿದರು.

ಕಾಂಗ್ರೆಸ್ ಮುಖಂಡ ಅಶೋಕ್ ಪೂಜಾರಿ ಮಾತನಾಡಿ ಗೋಕಾಕ ಜಿಲ್ಲಾ ಹೋರಾಟ ಇಂದು ನಿನ್ನೆಯದಲ್ಲ 4ದಶಕಗಳ ಹೋರಾಟ ಹಿಂದೆ ಗೋಕಾಕ ಜಿಲ್ಲಾ ಹೋರಾಟ ದೊಡ್ಡ ಮಟ್ಟದಲ್ಲಿ ಜರುಗತ್ತಿದ್ದು, ಅಂದಿನ ಹೋರಾಟಗಳು ಸರಕಾರದ ಕಣ್ಣು ತೆರೆಸಿತ್ತಿದ್ದವು ಆದ–ರೆ ಇಂದು ಆ ಮಟ್ಟದಲ್ಲಿ ಹೋರಾಟ ನಡೆಯುತ್ತಿಲ್ಲ, ಇಂದಿನ ಪರಿಸ್ಥಿತಿಯಲ್ಲಿ ಶಾಸಕರು ಅಭಿಪ್ರಾಯ ವಿಲ್ಲದೆ ಯಾವುದೇ ನಿರ್ಣಯಗಳನ್ನು ತಗೆದುಕೊಳ್ಳುವದಿಲ್ಲ ಹಾಗಾಗಿ ಜಿಲ್ಲೆಯ ಎಲ್ಲಾ ಶಾಸಕರು ಮತ್ತು ಸಚಿವರು ಬೆಳಗಾವಿ ಅಭಿವೃದ್ಧಿ ಹಿತದೃಷ್ಟಿಯಿಂದ ಅಖಂಡ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಗೋಕಾಕ ನೂತನ ಜಿಲ್ಲೆ ಮಾಡಬೇಕು ಎಂದು ಆಗ್ರಹಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಜಿಲ್ಲೆಯ ಎಲ್ಲಾ ಶಾಸಕರೊಂದಿಗೆ ಸಭೆ ಮಾಡಿ ಬೆಳಗಾವಿ ಜಿಲ್ಲಾ ವಿಭಜನೆಗೆ ಪೂರಕವಾಗಿ ಚರ್ಚೆ ಮಾಡುತ್ತೇನೆ ಎಂದು ಹೇಳಿದ್ದಾರೆ. ಆದಷ್ಟು ಬೇಗ ಸಚಿವ ಸತೀಶ್ ಜಾರಕಿಹೊಳಿ ಅವರು ಜಿಲ್ಲೆಯ ಎಲ್ಲಾ ಶಾಸಕರ ಅಭಿಪ್ರಾಯ ಪಡೆದು ಬೆಳಗಾವಿ ಜಿಲ್ಲೆಯನ್ನು ವಿಭಜನೆ ಮಾಡಿ ಗೋಕಾಕ ನೂತನ ಜಿಲ್ಲೆ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಬೆಳಗಾವಿ ವಿಭಜನೆ ಆದರೆ ಗಡಿ ವಿಷಯ. ಶಕ್ತಿ ಕಳೆದು ಕೊಳ್ಳುತ್ತದೆ ಎಂದು ಭಾವಿಸುವುದು ತಪ್ಪು ಗಡಿ ವಿಷಯ ಬಂದಾಗ ಎಲ್ಲಾ ಕನ್ನಡಿಗರು ಬೆಳಗಾವಿಯೊಂದಿಗೆ ಇದ್ದಾರೆ. ಬೆಳಗಾವಿ ನಗರದ ಕನ್ನಡಿಗರಿಂದ ಅಷ್ಟೇ ಗಡಿ ವಿಷಯವನ್ನು ಉಳಿಸಲು ಸಾಧ್ಯವಿಲ್ಲ ಎಲ್ಲಾ ಕನ್ನಡಗರು ಸೇ–ರಿದರೆ ಮಾತ್ರ ನಾವು ಬೆಳಗಾವಿ ಗಡಿ ಸಮಸ್ಯೆಯನ್ನು ಎದುರಸಲು ಸಾಧ್ಯ ಎಂದ ಅವರು ಬೆಳಗಾವಿ ಕನ್ನಡ ಪರ ಹೋರಾಟಗಾರರು ಅಂಜಬಾರದು ನಾವು ನಿಮ್ಮೊಂದಿಗೆ ಇದ್ದೇವೆ ಎಂದು ಭರವಸೆ ನೀಡಿದರು. ಬೆಳಗಾವಿ ಜಿಲ್ಲೆ ವಿಭಜನೆಗೆ ವಿರೋಧ ವ್ಯಕ್ತಪಡಿಸಬಾರದು. ಹಾಗಾಗಿ ಉಸ್ತುವಾರಿ ಸಚಿವರು ಅಧಿವೇಶನ ಸಂದರ್ಭದಲ್ಲಿ ಅಥವಾ ಅಧಿವೇಶನ ಮುಗಿದ ನಂತರ ಜಿಲ್ಲೆಯ ಶಾಸಕರ ಸಭೆ ನಡೆಯಿಸಿ ಗೋಕಾಕ ಜಿಲ್ಲಾ ರಚನೆ ಮಾಡಬೇಕು ಎಂದು ಆಗ್ರಹಿಸಿದ ಅವರು ಮುಂದೆ ಉಗ್ರ ಸ್ವರೂಪದ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ನ್ಯಾಯವಾದಿಗಳ ಸಂಘದ ಅಧ್ಯಕ್ಷ ಬಸವರಾಜ ಕೋಟಗಿ ಮಾತನಾಡಿ ಅಖಂಡ ಬೆಳಗಾವಿ ಜಿಲ್ಲೆಯ ಅಭಿವೃದ್ಧಿ ಹಿತದೃಷ್ಟಿಯಿಂದ ಕನಿಷ್ಠ ಮೂರು ಜಿಲ್ಲೆ ಆಗಬೇಕು. ರಾಜ್ಯದಲ್ಲಿ ದೊಡ್ಡ ಜಿಲ್ಲೆಗೆ ಅಷ್ಟೇ ಅನುದಾನ ಚಿಕ್ಕ ಜಿಲ್ಲೆಗೂ ಸಹ ಅಷ್ಟೇ ಅನುದಾನ ಹಾಗಾಗಿ ರಾಜ್ಯದಲ್ಲಿ ದೊಡ್ಡ ಜಿಲ್ಲೆಯಾಗಿರುವ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಗೋಕಾಕ ನೂತನ ಜಿಲ್ಲೆ ಎಂದು ಘೋಷಿಸಬೇಕು ಎಂದು ಆಗ್ರಹಿಸಿದ ಅವರು ಈ ಹೋರಾಟಕ್ಕೆ ವಕೀಲರ ಸಂಘದ ಸದಾ ಬೆಂಬಲ ನೀಡುತ್ತದೆ ಎಂದರು.

ಡಾ.ಮಹಾಂತೇಶ ಕಡಾಡಿ, ಚಂದ್ರಶೇಖರ್ ಕೊಣ್ಣೂರ, ಬಸವರಾಜ ಖಾನಪ್ಪನವರ, ಚಂದನ ಗಿಡ್ಡನ್ನವರ, ಅರ್ಜುನ್ ಪಂಗನ್ನವರ ಸೇರಿದಂತೆ ಅನೇಕರು ಮಾತನಾಡಿ ಸರಕಾರ ಹೆಸರಿಗೆ ಮಾತ್ರ ಬೆಳಗಾವಿಯಲ್ಲಿ ಸುರ್ವಣ ವಿಧಾನಸೌಧ, ಧಾರವಾಡದಲ್ಲಿ ಹೈಕೋರ್ಟ್ ನಿರ್ಮಿಸಿ ಕೈತೊಳೆದುಕೊಂಡಿದೆ. ಆದರೆ ಅದಕ್ಕೆ ಪೂರಕವಾಗಿ ಅಭಿವೃದ್ಧಿಯಾಗುತ್ತಿಲ್ಲ. ಜನಸಂಖ್ಯೆ ಆಧಾರದ ಮೇಲೆ ಬೆಳಗಾವಿ ವಿಭಜಿಸಿ ನೂತನ ಗೋಕಾಕ ಜಿಲ್ಲೆಯನ್ನು ಘೋಷಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಶ್ವನಾಥ್ ಕಡಕೋಳ, ಸೋಮಶೇಖರ್ ಮಗದುಮ, ದಸ್ತಗಿರ ಪೈಲವಾನ, ಪೀರಜಾದೆ, ಆರ್ ಕೆ ಪವಾರ, ಜೈನುಲ್ಲಾ ಅಂಕಲಗಿ, ಮುನ್ನಾ ಖತೀಬ, ಸದಿಕತ ಮಂಕಾದಾರ, ಸಂಜೀವ ಪೂಜಾರಿ, ಲಕ್ಕಣ್ಣ ಸವಸುದ್ದಿ, ಪುಟ್ಟು ಖಾನಾಪುರೆ, ಬಸವಣ್ಣೆಪ್ಪ ಹಿರಟ್ಟಿ, ನಿಂಗಪ್ಪ ಅಮಿನಬಾವಿ, ಮಲ್ಲಿಕಾರ್ಜುನ ಅರಭಾವಿ, ರಜನಿಕಾಂತ್ ಮಾಳೋದೆ, ಶಫೀ ಜಮಾದರ, ಬಿರಪ್ಪ ಪ್ರಧಾನಿ, ಮಲ್ಲಿಕಾರ್ಜುನ ಈಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಆಹ್ವಾನ

ಕೊಪ್ಪಳ : ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಜಿಲ್ಲೆಯ ಯಲಬುರ್ಗಾ ತಾಲ್ಲೂಕು ಪಂಚಾಯತಿಯಲ್ಲಿ ಖಾಲಿ ಇರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಹಾಗೂ ಕೊಪ್ಪಳ ತಾಲ್ಲೂಕಿನ ಭಾಗ್ಯನಗರ ಪಟ್ಟಣ ಪಂಚಾಯತಿಯಲ್ಲಿ ಖಾಲಿ ಇರುವ ನಗರ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಯಲಬುರ್ಗಾ ತಾಲ್ಲೂಕು ಪಂಚಾಯತಿಯಲ್ಲಿ ಖಾಲಿ ಇರುವ ವಿವಿಧೊದ್ದೇಶ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ತಾತ್ಕಾಲಿಕವಾಗಿ ಮಾಸಿಕ 15000 ಹಾಗೂ ಕೊಪ್ಪಳ ತಾಲ್ಲೂಕಿನ ಭಾಗ್ಯನಗರ ಪಟ್ಟಣ ಪಂಚಾಯತಿಯಲ್ಲಿ ಖಾಲಿ ಇರುವ ನಗರ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ತಾತ್ಕಾಲಿಕವಾಗಿ ಮಾಸಿಕ 9000 ರೂ.ಗಳ ಗೌರವಧನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು.

ಅರ್ಜಿ ಸಲ್ಲಿಸಲು 18 ರಿಂದ 45 ವರ್ಷ ಒಳಗಿನ ನಿರುದ್ಯೋಗಿ ಅಂಗವಿಕಲರಾಗಿರಬೇಕು. ಎಮ್ ಆರ್ ಡಬ್ಲ್ಯೂ ಹುದ್ದೆಗೆ ಯಾವುದೇ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಯು ಆರ್ ಡಬ್ಲ್ಯೂ ಹುದ್ದೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣ ಜೊತೆಗೆ ಕಂಪ್ಯೂಟರ್ ಜ್ಞಾನ, ವಿಶೇಷ ಶಿಕ್ಷಣ, ಆರ್.ಸಿ.ಐ ತರಬೇತಿ, ದಿವ್ಯಾಂಗ ಮಿತ್ರ ತರಬೇತಿ, ಸನ್ನೆ ಭಾಷೆ ತರಬೇತಿ, ಧೈಹಿಕ ವ್ಯಾಯಾಮ ತರಬೇತಿ ವಿಶೇಷ ಜ್ಞಾನಗಳನ್ನು ಪಡೆದಿರುವ ಅಭ್ಯರ್ಥಿಗಳಿಗೆ ಮೊದಲ ಆಧ್ಯತೆ ನೀಡಲಾಗುವುದು. ಅಭ್ಯರ್ಥಿಯು ಅಂಗವಿಕಲರ ಯು.ಡಿ.ಐ.ಡಿ ವಿಶೇಷ್ಠ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹೊಂದಿದವರಾಗಿರಬೇಕು. ಎಮ್ ಆರ್ ಡಬ್ಲ್ಯೂ ಹುದ್ದೆಗೆ ಅದೇ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರಬೇಕು. ಯು ಆರ್ ಡಬ್ಲ್ಯೂ ಹುದ್ದೆಗೆ ಅದೇ ಪಟ್ಟಣ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರಬೇಕು ತಹಶೀಲ್ದಾರರಿಂದ ಪಡೆದ ಜಾತಿ, ಆದಾಯ ಮತ್ತು ವಾಸಸ್ಥಳ ಪ್ರಮಾಣ ಪತ್ರವನ್ನು ಲಗತ್ತಿಸಬೇಕು. ವಿಕಲಚೇತನರ ಕಲ್ಯಾಣಕ್ಕಾಗಿ ಕೆಲಸ ಮಾಡಿದ ಅನುಭವವಿದ್ದಲ್ಲಿ ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಬೇಕು. ಮಹಿಳಾ ವಿಕಲಚೇತನರಿಗೆ ಮೊದಲ ಆಧ್ಯತೆ ನೀಡಲಾಗುವುದು.

ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದು, ಡಿಸೆಂಬರ್ 20ರ ಒಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯ ಆವರಣ ಕೊಠಡಿ ಸಂಖ್ಯೆ 31,32 ರಿಲಾಯನ್ಸ್ ಪೆಟ್ರೋಲ್ ಬಂಕ್ ಎದುರುಗಡೆ ಹೊಸಪೇಟ್ ರಸ್ತೆ ಕೊಪ್ಪಳ, ರವರಿಗೆ ಕಚೇರಿ ಅವಧಿಯಲ್ಲಿ ಸಲ್ಲಿಸಬೇಕು.

ಈ ಹುದ್ದೆಯು ಸಂಪೂರ್ಣವಾಗಿ ಗೌರಧನದ ಆಧಾರದ ಮೇಲೆ ಹಾಗೂ ತಾತ್ಕಾಲಿಕವಾಗಿದ್ದು, ನಿಗದಿಪಡಿಸಿದ ದಿನಾಂಕ ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲವೆಂದು ಜಿಲ್ಲಾ

# ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರಿಗೆ ವಿಶೇಷ ಪ್ರೋತ್ಸಾಹಧನ ಅರ್ಜಿ ಆಹ್ವಾನ

ಕೊಪ್ಪಳ : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ಬಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

2024–25ನೇ ಸಾಲಿಗೆ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜ್ಯುಕೇಶನ್ (National Council for Teacher Education) ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ, ಅರೆಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ ಕೋರ್ಸ್ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ರೂ. 25,000 ಗಳ ವಿಶೇಷ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಅರ್ಜಿಯನ್ನು ಆಹ್ವಾನಿಸಿದ್ದು, ಈ ಯೋಜನೆಯ ಸದುಪಯೋಗ ಪಡೆಯಲು ಅರ್ಹ ಅಭ್ಯರ್ಥಿಗಳು ಡಿಸೆಂಬರ್ 25 ರೊಳಗಾಗಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಿ ಅಗತ್ಯ ದಾಖಲೆಗಳೊಂದಿಗೆ ಹಾರ್ಡ್ ಪ್ರತಿಗಳನ್ನು ಆಯಾ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ.

ಷರತ್ತುಗಳು: ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು ಹಾಗೂ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಬಿ.ಎಡ್ ಕೋರ್ಸ್ಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ(ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ವರಮಾನ ಗರಿಷ್ಠ ರೂ. 6 ಲಕ್ಷಕ್ಕೆ ಮೀರಿರಬಾರದು. ವಿದ್ಯಾರ್ಥಿಯು ರಾಜ್ಯ ಅಥವಾ ಕೇಂದ್ರ ಸರ್ಕಾರಿ ಉದ್ಯೋಗಿ ಅಥವಾ ಪೂರ್ಣಕಾಲಿಕ ಖಾಸಗಿ ಸಂಸ್ಥೆಯ ಉದ್ಯೋಗಿಯಾಗಿರಬಾರದು. ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ ಅಥವಾ ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ವಿದ್ಯಾರ್ಥಿಗಳು ಬಿ.ಎಡ್ ಕೋರ್ಸ್ಗಳಲ್ಲಿ ದಾಖಲಾಗಿರುವ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಎಲ್ಲಾ ಅಧಿಕೃತ ದಾಖಲಾತಿಗಳನ್ನು ಸಲ್ಲಿಸಬೇಕು. ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜ್ಯುಕೇಶನ್ ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ, ಅರೆಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ. ಅಂಚೆ ತೆರಪು, ಅರೆಕಾಲಿಕ ಹಾಗೂ ದೂರ ಶಿಕ್ಷಣದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ. ಸುಳ್ಳು ಮಾಹಿತಿ, ದಾಖಲಾತಿ ಅಥವಾ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಧನ ಪಡೆದಿದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ನೀಡಲಾದ ಪ್ರೋತ್ಸಾಹಧನ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸಲಾಗುವುದು. ಈ ಯೋಜನೆಯಡಿ ಪ್ರೋತ್ಸಾಹಧನ ಪಡೆದ ವಿದ್ಯಾರ್ಥಿಗಳು ಬಿ.ಎಡ್ ಕೋರ್ಸ್ ಪೂರ್ಣಗೊಳಿಸದೆ ಮಧ್ಯದಲ್ಲಿ ಬಿಟ್ಟು ಹೋದಲ್ಲಿ ಪ್ರೋತ್ಸಾಹಧನವನ್ನು ಇಲಾಖೆಗೆ ಹಿಂದಿರುಗಿಸಬೇಕು.

ಅರ್ಜಿ ಸಲ್ಲಿಸುವ ವಿಧಾನ: ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ವಿಶೇಷ ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸಲು ವೆಬ್‌ಸೈಟ್ https://sevasindhu.karnataka.gov.in ಗೆ ಭೇಟಿ ನೀಡಿ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಸ್ವೀಕೃತವಾದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಜಿಲ್ಲಾ ಅಲ್ಪಸಂಖ್ಯಾತರ ಕಛೇರಿ ಹಾಗೂ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಕೊಪ್ಪಳ :08539–225070, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಾದ ಗಂಗಾವತಿ :08533–230027, 9972524670 ಕುಷ್ಟಗಿ :8861610578 ಹಾಗೂ ಯಲಬುರ್ಗಾ :8095191406, ಇಲ್ಲಿಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೂರು–ಪಾರು

### ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ : ಆಕ್ಷೇಪಣೆ ಸಲ್ಲಿಸಲು ಡಿಸೆಂಬರ್ ೨೦ ಕೊನೆಯ ದಿನ

ಗದಗ : ಗದಗ ಜಿಲ್ಲಾ ಪಂಚಾಯತ್‌ನ ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿಯಲ್ಲಿ ಜಿಲ್ಲಾ ಎಂಐಎಸ್ ಸಮಾಲೋಚಕರ ಖಾಲಿಯಿರುವ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಲಾಗಿತ್ತು. ವಿದ್ಯಾರ್ಹತೆ ಹಾಗೂ ಅನುಭವದ ಆಧಾರದ ಮೇಲೆ ನೇಮಕಾತಿಯಲ್ಲಿ ಸೂಚಿಸಿದ ವಿಧಾನಗಳ ಮೂಲಕ ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಿತಿತಿ.ರಚಿಜಚಿರ.ಟುಛಿ.ಟಿ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ಅಭ್ಯರ್ಥಿಗಳು ಡಿಸೆಂಬರ್ 20 ರೊಳಗಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು , ಜಿಲ್ಲಾ ಪಂಚಾಯತ್ , ಗದಗ ಇವರ ಕಚೇರಿಗೆ ಲಿಖಿತ ರೂಪದಲ್ಲಿ ಖುದ್ದಾಗಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಫ್.ಟಿ.ಕೆ. ಟೆಸ್ಟ್ ಕಡ್ಡಾಯ : ಈಶ್ವರ ಕಾಂದೂ

ಕಾರವಾರ – ಜಿಲ್ಲೆಯಲ್ಲಿನ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಕುಡಿಯುವ ನೀರಿನ ಮೂಲಗಳಲ್ಲಿ ಕಡ್ಡಾಯವಾಗಿ ನಿರಂತರವಾಗಿ ಎಫ್.ಟಿ.ಕೆ. ಟೆಸ್ಟ್ ಮಾಡಬೇಕು. ಹಾಗೂ ಆನ್‌ಲೈನ್‌ನಲ್ಲಿ ಅಪ್ಡೇಟ್ ಮಾಡಬೇಕು. ಆ ಮೂಲಕ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಹೇಳಿದರು.

ಅವರು ಸೋಮವಾರ ಕುಮಟಾ ತಾಲೂಕು ಪಂಚಾಯತ ಸಭಾಂಗಣದಲ್ಲಿ ನಡೆದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೆಸ್ಕಾಂಗೆ ಸಂಬಂಧಿಸಿದಂತೆ ಬಾಕಿ ಮೊತ್ತ ಪಾವತಿ, ಜಲ ಜೀವನ ಮಿಷನ್‌ಗೆ ಸಂಬಂಧಿಸಿದಂತೆ ಬ್ಯಾಚ್ 1,2,3, ಮತ್ತು 4 ಹಾಗೂ ಎಸ್.ಡಿ.ಪಿ., ಟಾಸ್ಕ್ ಫೋರ್ಸ್, ಎನ್.ಆರ್.ಡಿ.ಡಬ್ಲ್ಯೂ.ಪಿ. ಪ್ರಗತಿ ಪರಿಶೀಲನೆ, ಖಒಖಖ ಈಲೂಖಿಅ ಟ್ಯಾಗಿಂಗ್ ಪ್ರಗತಿ, ಕುಡಿಯುವ ನೀರಿನ ಸಮಸ್ಯೆ ಕುರಿತು. ವಸತಿ, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಮಾನವ ದಿನ ಸೃಜನೆ, ಕಾಮಗಾರಿ ಪೂರ್ಣಗೊಳಿಸುವಿಕೆ, ಕಡತ ಪರಿಶೀಲನೆ, ಜಿಯೋ ಟ್ಯಾಗ್, ಸಾಮಾಜಿಕ ಲೆಕ್ಕ ಪರಿಶೋಧನೆ, ಆನ್ ಲೈನ್ ವಾರ್ಷಿಕ ಕ್ರೀಯಾ ಯೋಜನೆ, ಬೂದು ನೀರು ನಿರ್ವಹಣೆ ಕಾಮಗಾರಿ ಸೇರಿದಂತೆ ವಿವಿಧ ಯೋಜನೆಗ ಪ್ರಗತಿ ಪರಿಶೀಲನೆ ನಡೆಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಆಡಳಿತ ಶಾಖೆಯ ಉಪ ಕಾರ್ಯದರ್ಶಿ ನಾಗೇಶ್ ರಾಯ್ಕರ್, ಅಭಿವೃದ್ಧಿ ಶಾಖೆಯ ಉಪ ಕಾರ್ಯದರ್ಶಿ ಪ್ರಕಾಶ್ ಹಾಲಮ್ಮನವರ, ಮುಖ್ಯ ಲೆಕ್ಕಾಧಿಕಾರಿ ಆನಂದ ಸಾ ಹಬೀಬ್, ಮುಖ್ಯ ಯೋಜನಾಧಿಕಾರಿ ವಿನೋದ್ ಅಣ್ವೇಕರ್, ಯೋಜನಾ ನಿರ್ದೇಶಕ ಕರೀಂ ಅಸದಿ, ಕಾರ್ಯನಿರ್ವಾಹಕ ಅಭಿಯಂತರರು ಸಹಾಯಕ ಕಾರ್ಯದರ್ಶಿ ಆಡಳಿತ ಅಧಿಕಾರಿ ಮತ್ತು ಕಾರ್ಯಪಾಲಕ ಅಭಿಯಂತರರು(RWS) ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳು ತಮ್ಮ ಸಮಸ್ಯೆಗಳನ್ನು ಸ್ಥಳೀಯ ಸರಕಾರಕ್ಕೆ ತಿಳಿಸಿ: ಶೇಖರಗೌಡ ಜಿ ರಾಮತ್ನಾಳ

ಕೊಪ್ಪಳ, ಡಿಸೆಂಬರ್ 13 (ಕರ್ನಾಟಕ ವಾರ್ತೆ): ಮಕ್ಕಳು ತಮ್ಮ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಸ್ಥಳೀಯ ಸರಕಾರಕ್ಕೆ ತಿಳಿಸಿ ಅದಕ್ಕೆ ಪರಿಹಾರವನ್ನು ಕಂಡುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ ರಾಮತ್ನಾಳ ಹೇಳಿದರು.

ಅವರು ಶುಕ್ರವಾರದಂದು ಕೊಪ್ಪಳ ತಾಲೂಕಿನ ಕಲ್ಲತಾವರಗೇರಾ ಗ್ರಾಮ ಪಂಚಾಯತ್ ವ್ಯಾಪ್ತಿಯ ದನಕನದೊಡ್ಡಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಲಾಗಿದ್ದ ಮಕ್ಕಳ ಹಕ್ಕುಗಳ ಗ್ರಾಮಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಜಾ ಪ್ರಭುತ್ವ ವ್ಯವಸ್ಥೆಯನ್ನು ಸದೃಢಗೊಳಿಸಲು ಹಾಗೂ ಮಕ್ಕಳ ಭಾಗವಹಿಸುವ ಹಕ್ಕುಗಳನ್ನು ಪ್ರೇರೆಪಿಸಲು ಕರ್ನಾಟಕ ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು



ಪಂಚಾಯತ್ ರಾಜ್ ಇಲಾಖೆಯು ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್ ಅಭಿಯಾನ ಹಾಗೂ ಒಂದು ದಿನ ಮಕ್ಕಳ ವಿಶೇಷ ಗ್ರಾಮ ಸಭೆ ಎಂಬ ವಿನೂತನವಾದ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ. ಈ ಮಕ್ಕಳ ಗ್ರಾಮಸಭೆಯ ವಿಶೇಷತೆ ಎಂದರೆ, ಜಿಲ್ಲೆಯಲ್ಲಿ ಸುಮಾರು 10 ವರ್ಷಗಳಿಂದಲೂ ನಿರಂತರವಾಗಿ ಮಕ್ಕಳ ಗ್ರಾಮಸಭೆಗಳನ್ನು ಆಯೋಜಿಸಿಕೊಂಡು ಬರಲಾಗುತ್ತಿದ್ದು, ಈ ಗ್ರಾಮಸಭೆಗಳಲ್ಲಿ ಮಕ್ಕಳು ಸಲ್ಲಿಸುವ ಸಮಸ್ಯೆಗಳನ್ನು ಪರಿಹರಿಸಲು ಆಯೋಗವು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತದೆ. ಅಲ್ಲದೇ ಮಕ್ಕಳು ಸಲ್ಲಿಸುವ ಸಮಸ್ಯೆಗಳ ಪರಿಹಾರಕ್ಕಾಗಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಆಯ್ಯ–ವ್ಯಯವನ್ನು ಮಂಡಿಸಬೇಕು, ಗ್ರಾಮ ಪಂಚಾಯತ್‌ನ ಒಟ್ಟು ಅನುದಾನದಲ್ಲಿ ಮಕ್ಕಳಿಗಾಗಿಯೇ ಶೇ 5ರಷ್ಟು ಅನುದಾನವನ್ನು ಮೀಸಲಿಡಬಹುದಾಗಿದ್ದು, ಈ ಕುರಿತು ಕ್ರಮವಹಿಸುವಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪ್ರಕಾಶ ಕಡಗದ ಅವರು ಮಾತನಾಡಿ, ಭಾರತ ದೇಶವು ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಸಹಿ ಮಾಡಿರುತ್ತದೆ. ಮಕ್ಕಳಸ್ನೇಹಿ ವಾತಾವರಣವನ್ನು ನಿರ್ಮಿಸಲು ಹಾಗೂ ಭಾರತ ಸಂವಿಧಾನವು ಮಹಿಳೆ ಮತ್ತು ಮಕ್ಕಳಿಗೆ ವಿಶೇಷ ಅವಕಾಶಗಳನ್ನು ಕಲ್ಪಿಸಲು ನೀಡಿರುವ ಅವಕಾಶಗಳನ್ವಯ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣಕ್ಕಾಗಿ, ಮಕ್ಕಳ ರಕ್ಷಣೆ, ಮಕ್ಕಳ ಭಾಗವಹಿಸುವಿಕೆಯ ಹಕ್ಕುಗಳನ್ನು ಖಾತ್ರಿಪಡಿಸಲು 2024 ನವೆಂಬರ್ 14 ರಿಂದ 2025ರ ಜನೆವರಿ 24 ರವರೆಗೆ 10 ವಾರಗಳ ಮಕ್ಕಳಸ್ನೇಹಿ ಗ್ರಾಮ ಪಂಚಾಯತ್ ಅಭಿಯಾನ ಹಾಗೂ ಒಂದು ದಿನ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸಲು ಆದೇಶ ನೀಡಿದ್ದು, ಅದರನ್ವಯ ಗ್ರಾಮ ಸಭೆ ಆಯೋಜನೆಯೊಂದಿಗೆ 10 ವಾರಗಳ ಕಾಲ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಗಂಗಪ್ಪ ನಾಯಕ್, ಗ್ರಾಮೀಣ ಉದ್ಯೋಗ್ ಖಾತ್ರಿ ಯೋಜನೆ ಸಹಾಯಕ ನಿರ್ದೇಶಕ ವೆಂಕೋಬ, ಪ್ರತಿಭಾ ಕಾಶಿಮಠ, ಶಿವಶರಣಪ್ಪ ಸೇರಿದಂತೆ ಕಲ್ಲತಾವರಗೇರಾ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಶಾಲೆಯ ಮುಖ್ಯೋಪಾಧ್ಯಾಯರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಯಮನೂರಪ್ಪ ಕಬ್ಬಣ್ಣವರ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ವಿದ್ಯಾರ್ಥಿಗಳಲ್ಲಿ ಅದ್ಭುತವಾದ ಜ್ಞಾನಯಿದೆ ಅದನ್ನು ಸದುಪಯೋಗ ಪಡಿಸಿಕೊಳ್ಳಿ : ಕಲ್ಲೇಶ ಬಿ



ಕೊಪ್ಪಳ : ವಿದ್ಯಾರ್ಥಿಗಳಲ್ಲಿ ಅದ್ಭುತವಾದ ಜ್ಞಾನವಿದ್ದು, ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮುಖ್ಯ ಆಡಳಿತ ಅಧಿಕಾರಿ ಕಲ್ಲೇಶ ಬಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಶುಕ್ರವಾರದಂದು 2024–25 ಸಾಲಿನ ಪದವಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಮತ್ತು ಕಾಲೇಜಿನ ಎಲ್ಲ ಸಹ ಪಠ್ಯ ಚಟುವಟಿಕೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಸ್ವಾವಲಂಬನೆ ಇರಬೇಕು ಅವಕಾಶಗಳನ್ನು ಸದುಪಯೋಗ ಪಡಿಸಿಕೊಂಡು ನಿಮ್ಮ ಗುರಿಗಳನ್ನು ಸಾಧಿಸಬೇಕು. ಚೆನ್ನಾಗಿ ಅಭ್ಯಾಸ ಮಾಡಿದರೆ ಒಳ್ಳೆಯ ಉದ್ಯೋಗ ಸಿಕ್ಕೇ ಸಿಗುತ್ತದೆ ಎಲ್ಲ ವಿಷಯಗಳನ್ನು ಅಭ್ಯಾಸ ಮಾಡಬೇಕು ಒಂದು ಪಾಠವನ್ನು ಪದೇ ಪದೇ ಓದಬೇಕು ದೃಢವಾದ ಮನಸ್ಸು ಮತ್ತು ಛಲ ಇರಬೇಕು ಆಗ ಮಾತ್ರ ಜೀವನದಲ್ಲಿ ಯಶಸ್ವಿ ಆಗಲು ಸಾಧ್ಯ. ಸತತವಾಗಿ ಪ್ರಯತ್ನ ಮಾಡದರೆ ಯಶಸ್ಸು ಖಂಡಿತ ಸಿಗುತ್ತದೆ. ನಿರಾಸೆ ಆಗಬಾರದು ಸಾಧನೆಗೆ ಅಸಾಧ್ಯವಾದದ್ದು ಯಾವುದು ಇಲ್ಲ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಮಾತನಾಡಿ ಕಾಲೇಜಿನಲ್ಲಿರುವ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು. ನಮ್ಮ ಕಾಲೇಜು ಬಹು ಬೇಗನೆ ಅಭಿವೃದ್ಧಿಹೊಂದಿದ್ದು, ಬಡ ವಿದ್ಯಾರ್ಥಿಗಳಿಗೆ ಸರಕಾರಿ ಕಾಲೇಜುಗಳು ಬಹಳ ಉಪಯುಕ್ತವಾಗಿವೆ. ಇಲ್ಲಿ ಕಡಿಮೆ ಶುಲ್ಕ ಇರುತ್ತದೆ. ನೀವು ಕಥೆ, ಕಾದಂಬರಿ, ಪುಸ್ತಕ, ಪತ್ರಿಕೆಗಳನ್ನು ಓದಬೇಕು. ಪರಿಶ್ರಮ ಪಟ್ಟವರು ಜೀವನದಲ್ಲಿ ಮುಂದೆ ಬರುತ್ತಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾಂಸ್ಕೃತಿಕ ವಿಭಾಗದ ಸಂಚಾಲಾಕಿ ಡಾ. ಹುಲಿಗೆಮ್ಮ, ಶಿಕ್ಷಣ ಪ್ರೇಮಿ ಬಿ. ಜಿ ಕರಿಗಾರ್, ಕ್ರೀಡಾ ವಿಭಾಗದ ಮುಖ್ಯಸ್ಥ ಡಾ.ಪ್ರದೀಪ್ ಕುಮಾರ, ಗ್ರಂಥಪಾಲಕ ಡಾ. ಮಲ್ಲಿಕಾರ್ಜುನ, ಉಪನ್ಯಾಸಕರಾದ ಡಾ. ನರಸಿಂಹ, ಡಾ. ಅಶೋಕ ಕುಮಾರ್, ಶುಭ, ಸುಮಿತ್ರಾ ಎಸ್. ವಿ. ವಿರೂಪಾಕ್ಷಪ್ಪ ಮುತ್ತಾಳ, ಶಿವಪ್ರಸಾದ್ ಹಾದಿಮನಿ, ಶ್ರೀ ಕಾಂತ್, ಬೊಮ್ಮನಾಳ ಸೇರಿದಂತೆ ಕಾಲೇಜಿನ ಎಲ್ಲ ಅತಿಥಿ ಉಪನ್ಯಾಸಕರು ಹಾಗೂ ಎಲ್ಲ ಭೋದಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಭೂಮಿಕಾ ಮತ್ತು ಸಬಿಹಾ ನಿರೂಪಿಸಿದರು, ಮಹಾದೇವಿ ಪ್ರಾರ್ಥಿಸಿದರು, ನೇತ್ರಾ ಸ್ವಾಗತಿಸಿದರು. ಭವ್ಯ ವಂದಿಸಿದರು,

# ತೆರಿಗೆ ವಸೂಲಾತಿ ಅಭಿಯಾನ; ರೂ. 1,52,65133 ಕರ ಸಂಗ್ರಹ




ಕಾರವಾರ – ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ನಿರ್ದೇಶನದಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ತೆರಿಗೆ ವಸೂಲಾತಿ ಬಗ್ಗೆ ಹೆಚ್ಚಿನ ಪ್ರಚಾರ ಹಾಗೂ ಜಾಗೃತಿಯೊಂದಿಗೆ 2024–25 ನೇ ಸಾಲಿನ ತೆರಿಗೆ ವಸೂಲಾತಿ ಅಭಿಯಾನವನ್ನು ಹಮ್ಮಿಕೊಳ್ಳಗಿದ್ದು, ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರುಗಳು ಹಾಗೂ ಗ್ರಾಮ ಪಂಚಾಯತ ಅಧಿಕಾರಿಗಳು, ಸಿಬ್ಬಂದಿಗಳ ಸಹಾಯದಿಂದ ಡಿ. 12 ರಂದು ಬೆಳಗ್ಗೆ 7 ಗಂಟೆಯಿಂದ ಸಂಜೆ 7 ರವರೆಗೆ ತೆರಿಗೆ ವಸೂಲಾತಿ ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಅದರಂತೆ 2024–25 ನೇ ಸಾಲಿನ ಒಟ್ಟು ಬೇಡಿಕೆ ರೂ. 23 ಕೋಟಿ 67 ಲಕ್ಷಗಳಾಗಿದ್ದು, ಡಿ.12 ರಂದು ನಡೆದ ಒಂದು ದಿನದ ತೆರಿಗೆ ವಸೂಲಾತಿ ಅಭಿಯಾನದಲ್ಲಿ ರೂ. 1,52,65,133 ಕರ ಸಂಗ್ರಹಿಸಲಾಗಿದೆ.

ಕರ ವಸೂಲಾತಿಗೆ ಯಾವುದೇ ಒತ್ತಡ ಹೇರದೆ ಈ ರೀತಿ ಸಾಧನೆ ಮಾಡಿರುವುದು ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಜನರು ಸ್ವಯಂ ಪ್ರೇರಿತರಾಗಿ ತೆರಿಗೆ ಪಾವತಿಸಿರುವುದು ಸಂತೋಷದ ವಿಷಯವಾಗಿದೆ., ಒಂದು ದಿನದ ತೆರಿಗೆ ವಸೂಲಾತಿಯಲ್ಲಿ ಅಭಿಯಾನದಲ್ಲಿ ಪಾಲ್ಗೊಂಡ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರುಗಳು ಹಾಗೂ ಗ್ರಾಮ ಪಂಚಾಯತ ಅಧಿಕಾರಿಗಳು, ಸಿಬ್ಬಂದಿಗಳಿಗೆ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ(ಅಭಿವೃದ್ಧಿ) ಅಭಿನಂದನೆಯನ್ನು ಸಲ್ಲಿಸಿದ್ದಾರೆ.

# ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮ

ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವತಿಯಿಂದ ಗದಗ ಜಿಲ್ಲೆ ರೋಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮವನ್ನು ಡಿಸೆಂಬರ್ 15 ರಂದು ಬೆ 11.30 ಗಂಟೆಗೆ ರೋಣದ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಮಾನ್ಯ ಉಪ ಮುಖ್ಯಮಂತ್ರಿ ಮತ್ತು ಜಲ ಸಂಪನ್ಮೂಲ ಸಚಿವರು (ಭಾರಿ ಮತ್ತು ಮಧ್ಯಮ) ಹಾಗೂ ಬೆಂಗಳೂರು ನಗರ ಅಭಿವೃದ್ಧಿ ಸಚಿವರಾದ ಡಿ.ಕೆ.ಶಿವಕುಮಾರ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ , ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ , ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ , ಕಂದಾಯ ಸಚಿವ ಕೃಷ್ಣ ಭೈರೇಗೌಡ , ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ , ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ , ವಸತಿ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ.ಝೆಡ್ ಜಮೀರ್ ಅಹ್ಮದ್ ಖಾನ್ , ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ , ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ , ಹಿಂದುಳಿದ ವರ್ಗಗಳು , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ತಂಗಡಗಿ ಶಿವರಾಜ್ ಸಂಗಪ್ಪ , ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಸುರೇಶ ಬಿ.ಎಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ , ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವ ಶ್ರೀಮತಿ ಲಕ್ಷ್ಮೀ ಆರ್ ಹೆಬ್ಬಾಳ್ಕರ್ , ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ , ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಅವರುಗಳು ವಹಿಸುವರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ , ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ



ಪರಿಷತ್ ಶಾಸಕರಾದ ಸಲೀಂ ಅಹ್ಮದ್ , ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ , ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷರು ಹಾಗೂ ಧಾರವಾಡ ಗ್ರಾಮೀಣ ಶಾಸಕ ವಿನಯ್ ಕುಲಕರ್ಣಿ, ಬಾಗಲಕೋಟಿ ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಅಥಣಿ ಶಾಸಕ ಲಕ್ಷ್ಮಣ ಸವದಿ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ರೋಣ ಪುರಸಭೆ ಅಧ್ಯಕ್ಷೆ ಶ್ರೀಮತಿ ಗೀತಾ ಎಂ.ಮಾಡಲಗೇರಿ ಅವರುಗಳು ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ಸಂಜಯ್ ಬಿ. ಶೆಟ್ಟೆಣ್ಣವರ , ಜಿಲ್ಲಾಧಿಕಾರಿ ಗೋವಿಂದರೆಡ್ಡಿ , ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಅವರು ಸರ್ವರಿಗೂ ಸ್ವಾಗತ ಕೋರಿದ್ದಾರೆ. ಗದಗ ಜಿಲ್ಲೆ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 19689.87 ಲಕ್ಷ ರೂ. ವೆಚ್ಚದಲ್ಲಿ 16 ಕಾಮಗಾರಿಗಳಿಗೆ ( 11 ಶಂಕುಸ್ಥಾಪನೆ ಕಾಮಗಾರಿಗಳು ಮತ್ತು 5 ಉದ್ಘಾಟನೆ ಕಾಮಗಾರಿಗಳು ) ಚಾಲನೆ ನೀಡಲಾಗುತ್ತಿದೆ. 17929.11 ಲಕ್ಷ ರೂ. ವೆಚ್ಚದಲ್ಲಿ 11 ಶಂಕುಸ್ಥಾಪನೆ ಕಾಮಗಾರಿಗಳ ವಿವರ. ನಗರಾಭಿವೃದ್ಧಿ ಇಲಾಖೆಯ ಅಮೃತ ಯೋಜನೆಯಡಿ ಅಂದಾಜು ಮೊತ್ತ 6798 ಲಕ್ಷ ರೂ. ವೆಚ್ಚದಡಿ ರೋಣ, ಗಜೇಂದ್ರಗಡ ಮತ್ತು ನರೇಗಲ್ಲ ಪಟ್ಟಣಗಳಿಗೆ ಕುಡಿಯುವ ನೀರು ಯೋಜನೆ, ಕೌಶಲ್ಯಾಭಿವೃದ್ಧಿ ಇಲಾಖೆಯಿಂದ 5,000 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಜಿ.ಟಿ.ಟಿ.ಸಿ. ಕಾಲೇಜು ಕಟ್ಟಡ ನಿರ್ಮಾಣ, ಲೋಕೋಪಯೋಗಿ ಇಲಾಖೆಯಿಂದ 2,000 ಲಕ್ಷ ರೂ. ವೆಚ್ಚದಡಿ ಮುನವಳ್ಳಿ– ಕೋಟುಮಚಗಿ ರಾ.ಹೆ. 83 95.90 ಕಿ.ಮೀ ದಿಂದ 104.50 ಕಿ.ಮೀ ಹಾಗೂ 107.00 ರಿಂದ 110.00 ರವರೆಗೆ ರಸ್ತೆ ಸುಧಾರಣೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 995.00 ಲಕ್ಷ ರೂ. ವೆಚ್ಚದಡಿ ಜಕ್ಕಲಿ ಗ್ರಾಮದಲ್ಲಿ ಶ್ರೀ ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣ, ಕಂದಾಯ ಇಲಾಖೆಯಿಂದ 860 ಲಕ್ಷ ರೂ. ವೆಚ್ಚದಡಿ ಗಜೇಂದ್ರಗಡ ತಾಲೂಕು ಪ್ರಜಾ ಸೌಧ ಕಟ್ಟಡ ನಿರ್ಮಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 800 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ಮತ್ತು ಬಾಲಕರ ವಸತಿ ನಿಲಯಗಳ ಕಟ್ಟಡ ನಿರ್ಮಾಣ ಮತ್ತು ಗಜೇಂದ್ರಗಡ ಹಾಗೂ ನರೇಗಲ್ ಪಟ್ಟಣಗಳಲ್ಲಿ 2 ವಸತಿ ನಿಲಯಗಳ ಪ್ರಾರಂಭೋತ್ಸವ , ಸಣ್ಣ ನೀರಾವರಿ ಇಲಾಖೆಯಿಂದ 650 ಲಕ್ಷ ರೂ. ವೆಚ್ಚದಡಿ ಡಂಬಳ, ಪೇಠಾಲೂರ ಮತ್ತು ಜಂತ್ಲಿ – ಶಿರೂರ ಗ್ರಾಮಗಳ ಕೆರೆ ಅಭಿವೃದ್ಧಿ ಹಾಗೂ ಸವಡಿ– ಹೊನ್ನಪುರ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ, ಜಲಸಂಪನ್ಮೂಲ ಇಲಾಖೆಯಿಂದ 395 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಪ್ರವಾಸಿ ಮಂದಿರ ಕಟ್ಟಡ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ 287.30 ಲಕ್ಷ ರೂ. ವೆಚ್ಚದಡಿ ರೋಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಕೊಠಡಿಗಳ ನಿರ್ಮಾಣ ಹಾಗೂ ಡಂಬಳ ಗ್ರಾಮದಲ್ಲಿ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ 93.81 ಲಕ್ಷ ರೂ. ವೆಚ್ಚದಡಿ ಡಂಬಳದಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ, ಪ್ರವಾಸೋದ್ಯಮ ಇಲಾಖೆಯಿಂದ 50 ಲಕ್ಷ ರೂ. ವೆಚ್ಚದಡಿ ಜಿಗಳೂರು ಕೆರೆ ಪಕ್ಕದಲ್ಲಿ ಪ್ರವಾಸಿ ಉದ್ಯಾನವನ. 1760.76 ಲಕ್ಷ ರೂ. ವೆಚ್ಚದಡಿ 5 ಉದ್ಘಾಟನೆ ಕಾಮಗಾರಿಗಳ ವಿವರ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 1,000 ಲಕ್ಷ ರೂ. ವೆಚ್ಚದಡಿ ಮೇವುಂಡಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಉದ್ಘಾಟನೆ , ಗಜೇಂದ್ರಗಡದಲ್ಲಿ ವಸತಿ ನಿಲಯ ಹಾಗೂ ರೋಣ ಪಟ್ಟಣದಲ್ಲಿ ವಸತಿ ಶಾಲೆ ಪ್ರಾರಂಭೋತ್ಸವ , ಪೌರಾಡಳಿತ ಇಲಾಖೆಯಿಂದ 392,01 ಲಕ್ಷ ರೂ. ವೆಚ್ಚದಡಿ ರೋಣ, ಗಜೇಂದ್ರಗಡ ಹಾಗೂ ನರೇಗಲ್ ಪಟ್ಟಣಗಳಲ್ಲಿ ಇಂದಿರಾ ಕ್ಯಾಂಟೀನ ಉದ್ಘಾಟನೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 250 ಲಕ್ಷ ರೂ. ವೆಚ್ಚದಡಿ ಹಿರೇವಡ್ಡಟ್ಟಿ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಕಟ್ಟಡ , ಆರೋಗ್ಯ ಇಲಾಖೆಯಿಂದ 91.75 ಲಕ್ಷ ರೂ. ವೆಚ್ಚದಡಿ ಸವಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವಸತಿ ಗೃಹ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾ. ಇಲಾಖೆಯಿಂದ 27 ಲಕ್ಷ ರೂ. ವೆಚ್ಚದಡಿ ಅಬ್ಬಿಗೇರಿ ಸಾರ್ವಜನಿಕ ಗ್ರಂಥಾಲಯ.

# ನಿಂಬೆ ಜ್ಯೂಸ್‌ಗೆ ಚಿಯಾ ಬೀಜಗಳನ್ನು ಮಿಕ್ಸ್ ಮಾಡಿ ಕುಡಿದರೆ, ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗಲ್ಲ!

ರಕ್ತನಾಳಗಳಲ್ಲಿ ಅಧಿಕ ಕೊಲೆಸ್ಟ್ರಾಲ್ ಅಂಶ ಅತಿಯಾದರೆ ಆಗ ಇದರಿಂದ ಹೃದಯ ಸಂಬಂಧಿ ಕಾಯಿಲೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಕೊಲೆಸ್ಟ್ರಾಲ್ ಹೆಚ್ಚಾಗದಂತೆ ನೋಡಿಕೊಳ್ಳಬೇಕು. ಇದಕ್ಕಾಗಿ ನಮ್ಮ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು ಅತ್ಯಗತ್ಯ. ಆಯುರ್ವೇದ ತಜ್ಞರು ಹೇಳುವ ಹಾಗೆ ಚಳಿಗಾಲದಲ್ಲಿ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿಕುಡಿಯುವ ಅಭ್ಯಾಸ ಮಾಡಿಕೊಂಡರೆ, ಕೊಲೆಸ್ಟ್ರಾಲ್ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೃದಯವು ಕೂಡ ಸೇಫ್ ಆಗಿರುತ್ತದೆ.

ಹೃದಯದ ಆರೋಗ್ಯಕ್ಕೆ ನಾವು ಎಷ್ಟು ಆರೈಕೆ ಮಾಡಿದರೂ ಕಡಿಮೆಯೇ. ಚಳಿಗಾಲದಲ್ಲಿ ಸಾಧ್ಯವಾದಷ್ಟು ನಮ್ಮ ಹೃದಯವನ್ನು ಜೋಪಾನವಾಗಿ ನೋಡಿಕೊಳ್ಳುವುದು ಒಳ್ಳೆಯದು. ಏಕೆಂದರೆ ಚಳಿಗಾಲದ ಸಮಯದಲ್ಲಿ ನಮ್ಮ ರಕ್ತನಾಳಗಳು ತಮ್ಮ ಗಾತ್ರ ಕಡಿಮೆ ಮಾಡಿಕೊಳ್ಳುತ್ತವೆ. ಇದು ಹೃದಯದ ಸಮಸ್ಯೆಗೆ ಕಾರಣವಾಗುವುದರ ಜೊತೆಗೆ ರಕ್ತದ ಒತ್ತಡ ಕೂಡ ಏರುಪೇರು ಉಂಟಾಗುವಂತೆ ಆಗುತ್ತದೆ.

ತೆಗೆದುಕೊಳ್ಳುವ ಔಷಧಿಗಳು ಮತ್ತು ಜೀವನಶೈಲಿಯಲ್ಲಿ ಅಳವಡಿಸಿಕೊಳ್ಳುವ ಬದಲಾವಣೆಗಳ ಜೊತೆಗೆ ಪೌಷ್ಟಿಕಾಂಶಗಳನ್ನು ಒಳಗೊಂಡ ಆಹಾರಗಳನ್ನು ಸೇವಿಸುವುದು ಕೂಡ ಅತಿ ಮುಖ್ಯ. ಇದಕ್ಕೆ ಒಂದು ಉತ್ತಮ ಉದಾಹರಣೆಯೆಂದರೆ ಅದು ಚಿಯಾ ಬೀಜಗಳು. ಈ ಲೇಖನದಲ್ಲಿ ಚಿಯಾ ಬೀಜಗಳನ್ನು ನಿಂಬೆ ಪಾನೀಯ ಜೊತೆಗೆ ಸೇರಿಸಿ ಸೇವಿಸಿದರೆ, ಕೊಲೆಸ್ಟ್ರಾಲ್ ಕಡಿಮೆಯಾಗುವುದರ ಜೊತೆಗೆ ಹೃದಯದ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬಹುದು ಎಂಬ ಬಗ್ಗೆ ತಿಳಿಸಿಕೊಡಲಾಗಿದೆ.

**ಕೊಲೆಸ್ಟ್ರಾಲ್ ಹೆಚ್ಚಾದರೆ ಹೃದಯ ತನ್ನ ಬಡಿತ ನಿಲ್ಲಿಸುತ್ತಾ?**

ಹೀಗೊಂದು ಗೊಂದಲ ಜನರಲ್ಲಿ ಬರದೇ ಇರದು. ದೇಹದಲ್ಲಿ ಹೆಚ್ಚಾದ ಕೊಲೆಸ್ಟ್ರಾಲ್ ಹೃದಯದ ಆರೋಗ್ಯವನ್ನು ಹಾಳು ಮಾಡುತ್ತದೆ. ಈ ರೀತಿ ಕೊಲೆಸ್ಟ್ರಾಲ್ ಹೆಚ್ಚಾಗಲು ಕಾರಣವೆಂದರೆ ಅದು ನಾವು ತಿನ್ನುವ ಅನಾರೋಗ್ಯಕರ ಆಹಾರಗಳು ಮತ್ತು ನಮ್ಮ ಜಡ ಜೀವನ ಶೈಲಿ.

ಕೆಲವರಿಗೆ ಅನುವಂಶೀಯವಾಗಿ ಕೂಡ ಈ ಸಮಸ್ಯೆ ಹುಟ್ಟಿನಿಂದಲೇ ಬರುತ್ತದೆ. ತುಂಬಾ ಗಂಭೀರವಾದ ಸಮಸ್ಯೆ ಆಗುವವರೆಗೂ ಇದು ಕೆಲವೊಮ್ಮೆ ಯಾವುದೇ ರೋಗ ಲಕ್ಷಣಗಳನ್ನು ತೋರಿಸುವುದಿಲ್ಲ ಎಂದು ಹೇಳುತ್ತಾರೆ. ಹೀಗಾಗಿ ದೇಹದಲ್ಲಿ ಕೆಟ್ಟ ಕೊಬ್ಬಿನ ಅಂಶ ವನ್ನು ನಿಯಂತ್ರಣ ಮಾಡಿಕೊಳ್ಳಲು ಅತ್ಯಂತ ಪರಿಣಾಮ ಕಾರಿಯಾಗಿ ನಿಮ್ಮ ಆಹಾರ ಪದ್ಧತಿಯನ್ನು ನಿರ್ವಹಣೆ ಮಾಡಿಕೊಳ್ಳಬೇಕಾದ ಜವಾಬ್ದಾರಿ ನಿಮ್ಮ ಮೇಲಿರುತ್ತದೆ.

**ಆಯುರ್ವೇದ ಶಾಸ್ತ್ರ ಹೇಳುವ ಹಾಗೆ**

ಆಯುರ್ವೇದ ಶಾಸ್ತ್ರ ಹೇಳುವ ಹಾಗೆ, ಆರೋಗ್ಯಕರವಾದ ಕೊಲೆಸ್ಟ್ರಾಲ್ ಮಟ್ಟವನ್ನು ರಕ್ತದಲ್ಲಿ ಕಾಪಾಡಿಕೊಳ್ಳಬೇಕು ಎಂದರೆ ಆಹಾರ ಪದ್ಧತಿಯಲ್ಲಿ ಬದಲಾವಣೆಗಳನ್ನು ತಂದುಕೊಳ್ಳಬೇಕು. ನೀವು ತಿನ್ನುವ ಆಹಾರದಲ್ಲಿ ನಾರಿನ ಅಂಶ, ಒಮೆಗಾ 3 ಫ್ಯಾಟಿ ಆಮ್ಲಗಳು ಮತ್ತು ಆಂಟಿ ಆಕ್ಸಿಡೆಂಟ್ ಪ್ರಮಾಣ ಹೆಚ್ಚಾಗಿರುವ ಚಿಯಾ ಬೀಜಗಳು ಸೇರಿದ್ದರೆ ಒಳ್ಳೆಯದು. ಇದು ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಆಹಾರ ಪದ್ಧತಿ ಆಗಿರುತ್ತದೆ ಮತ್ತು ಹೃದಯಕ್ಕೆ ತನ್ನದೇ ಆದ ಪ್ರಯೋಜನಗಳನ್ನು ನೀಡುತ್ತದೆ.

**ನಿಂಬೆಹಣ್ಣಿನ ರಸ ಚಿಯಾ ಬೀಜಗಳ ಜೊತೆ ಚಮತ್ಕಾರ ಮಾಡುತ್ತಾ?**

ಚಿಯಾ ಬೀಜಗಳಲ್ಲಿ ನೈಸರ್ಗಿಕವಾಗಿ ನಮ್ಮ ಕೆಟ್ಟ ಕೊಲೆಸ್ಟ್ರಾಲ್ ಅಂದರೆ ಎಲ್‌ಡಿ–ಎಲ್ ಪ್ರಮಾಣವನ್ನು ಕಂಟ್ರೋಲ್ ಮಾಡುವ ಗುಣವಿದೆ. ಇದರ ಜೊತೆ ನಿಂಬೆಹಣ್ಣಿನ ರಸ ಸೇರಿದರೆ ಹೃದಯದ ಆರೋಗ್ಯದಲ್ಲಿ ಚಮತ್ಕಾರ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಈ ಸಣ್ಣ ಸಣ್ಣ ಬೀಜಗಳಲ್ಲಿ ಪೌಷ್ಟಿಕಾಂಶಗಳ ಪ್ರಮಾಣ ಹೇರಳವಾಗಿದೆ.

**ಹೃದಯ ರಕ್ತನಾಳದ ಆರೋಗ್ಯಕ್ಕೆ ಒಳ್ಳೆಯದು**

ಹೃದಯ ರಕ್ತನಾಳದ ಆರೋಗ್ಯವನ್ನು ಕಾಪಾಡುವಲ್ಲಿ ಇವುಗಳ ಪಾತ್ರ ತುಂಬಾ ದೊಡ್ಡದು. ನಿಂಬೆ ಹಣ್ಣಿನ ರಸವನ್ನು ಚಿಯಾ ಬೀಜಗಳಿಗೆ ಸೇರಿಸಿ ದೇಹಕ್ಕೆ ವಿಟಮಿನ್ ಸಿ ಪಡೆದುಕೊಳ್ಳಬಹುದು ಜೊತೆಗೆ ಆಂಟಿ ಆಕ್ಸಿಡೆಂಟ್ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಣ ಮಾಡುವ ನಾರಿನ ಅಂಶವನ್ನು ಕೂಡ ಪಡೆದುಕೊಳ್ಳಬಹುದು.

**ಯಾವ ಸಮಯದಲ್ಲಿ ಇದರ ಸೇವನೆ ಒಳ್ಳೆಯದು?**

ಯಾವ ಸಮಯದಲ್ಲಿ ಇದರ ಸೇವನೆ ಒಳ್ಳೆಯದುನಿಂಬೆ ಜ್ಯೂಸ್‌ಗೆ ಚಿಯಾ ಬೀಜಗಳನ್ನು ಮಿಕ್ಸ್ ಮಾಡಿ ಕುಡಿದರೆ, ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗಲ್ಲ!

ರಕ್ತನಾಳಗಳಲ್ಲಿ ಅಧಿಕ ಕೊಲೆಸ್ಟ್ರಾಲ್ ಅಂಶ ಅತಿಯಾದರೆ ಆಗ ಇದರಿಂದ ಹೃದಯ ಸಂಬಂಧಿ ಕಾಯಿಲೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಕೊಲೆಸ್ಟ್ರಾಲ್ ಹೆಚ್ಚಾಗದಂತೆ ನೋಡಿಕೊಳ್ಳಬೇಕು. ಇದಕ್ಕಾಗಿ ನಮ್ಮ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು ಅತ್ಯಗತ್ಯ. ಆಯುರ್ವೇದ ತಜ್ಞರು ಹೇಳುವ ಹಾಗೆ ಚಳಿಗಾಲದಲ್ಲಿ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿಕುಡಿಯುವ ಅಭ್ಯಾಸ ಮಾಡಿಕೊಂಡರೆ, ಕೊಲೆಸ್ಟ್ರಾಲ್ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೃದಯವು ಕೂಡ ಸೇಫ್ ಆಗಿರುತ್ತದೆ.




**ನಿಂಬೆ ಜ್ಯೂಸ್‌ಗೆ ಚಿಯಾ ಬೀಜಗಳನ್ನು ಮಿಕ್ಸ್ ಮಾಡಿ ಕುಡಿದರೆ, ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗಲ್ಲ!**

ಹೃದಯದ ಆರೋಗ್ಯಕ್ಕೆ ನಾವು ಎಷ್ಟು ಆರೈಕೆ ಮಾಡಿದರೂ ಕಡಿಮೆಯೇ. ಚಳಿಗಾಲದಲ್ಲಿ ಸಾಧ್ಯವಾದಷ್ಟು ನಮ್ಮ ಹೃದಯವನ್ನು ಜೋಪಾನವಾಗಿ ನೋಡಿಕೊಳ್ಳುವುದು ಒಳ್ಳೆಯದು. ಏಕೆಂದರೆ ಚಳಿಗಾಲದ ಸಮಯದಲ್ಲಿ ನಮ್ಮ ರಕ್ತನಾಳಗಳು ತಮ್ಮ ಗಾತ್ರ ಕಡಿಮೆ ಮಾಡಿಕೊಳ್ಳುತ್ತವೆ. ಇದು ಹೃದಯದ ಸಮಸ್ಯೆಗೆ ಕಾರಣವಾಗುವುದರ ಜೊತೆಗೆ ರಕ್ತದ ಒತ್ತಡ ಕೂಡ ಏರುಪೇರು ಉಂಟಾಗುವಂತೆ ಆಗುತ್ತದೆ.

ತೆಗೆದುಕೊಳ್ಳುವ ಔಷಧಿಗಳು ಮತ್ತು ಜೀವನಶೈಲಿಯಲ್ಲಿ ಅಳವಡಿಸಿಕೊಳ್ಳುವ ಬದಲಾವಣೆಗಳ ಜೊತೆಗೆ ಪೌಷ್ಟಿಕಾಂಶಗಳನ್ನು ಒಳಗೊಂಡ ಆಹಾರಗಳನ್ನು ಸೇವಿಸುವುದು ಕೂಡ ಅತಿ ಮುಖ್ಯ. ಇದಕ್ಕೆ ಒಂದು ಉತ್ತಮ ಉದಾಹರಣೆಯೆಂದರೆ ಅದು ಚಿಯಾ ಬೀಜಗಳು. ಈ ಲೇಖನದಲ್ಲಿ ಚಿಯಾ ಬೀಜಗಳನ್ನು ನಿಂಬೆ ಪಾನೀಯ ಜೊತೆಗೆ ಸೇರಿಸಿ ಸೇವಿಸಿದರೆ, ಕೊಲೆಸ್ಟ್ರಾಲ್ ಕಡಿಮೆಯಾಗುವುದರ ಜೊತೆಗೆ ಹೃದಯದ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬಹುದು ಎಂಬ ಬಗ್ಗೆ ತಿಳಿಸಿಕೊಡಲಾಗಿದೆ.

**ಕೊಲೆಸ್ಟ್ರಾಲ್ ಹೆಚ್ಚಾದರೆ ಹೃದಯ ತನ್ನ ಬಡಿತ ನಿಲ್ಲಿಸುತ್ತಾ?**

ಹೀಗೊಂದು ಗೊಂದಲ ಜನರಲ್ಲಿ ಬರದೇ ಇರದು. ದೇಹದಲ್ಲಿ ಹೆಚ್ಚಾದ ಕೊಲೆಸ್ಟ್ರಾಲ್ ಹೃದಯದ ಆರೋಗ್ಯವನ್ನು ಹಾಳು ಮಾಡುತ್ತದೆ. ಈ ರೀತಿ ಕೊಲೆಸ್ಟ್ರಾಲ್ ಹೆಚ್ಚಾಗಲು ಕಾರಣವೆಂದರೆ ಅದು ನಾವು ತಿನ್ನುವ ಅನಾರೋಗ್ಯಕರ ಆಹಾರಗಳು ಮತ್ತು ನಮ್ಮ ಜಡ ಜೀವನ ಶೈಲಿ.

ಕೆಲವರಿಗೆ ಅನುವಂಶೀಯವಾಗಿ ಕೂಡ ಈ ಸಮಸ್ಯೆ ಹುಟ್ಟಿನಿಂದಲೇ ಬರುತ್ತದೆ. ತುಂಬಾ ಗಂಭೀರವಾದ ಸಮಸ್ಯೆ ಆಗುವವರೆಗೂ ಇದು ಕೆಲವೊಮ್ಮೆ ಯಾವುದೇ ರೋಗ ಲಕ್ಷಣಗಳನ್ನು ತೋರಿಸುವುದಿಲ್ಲ ಎಂದು ಹೇಳುತ್ತಾರೆ. ಹೀಗಾಗಿ ದೇಹದಲ್ಲಿ ಕೆಟ್ಟ ಕೊಬ್ಬಿನ ಅಂಶ ವನ್ನು ನಿಯಂತ್ರಣ ಮಾಡಿಕೊಳ್ಳಲು ಅತ್ಯಂತ ಪರಿಣಾಮ ಕಾರಿಯಾಗಿ ನಿಮ್ಮ ಆಹಾರ ಪದ್ಧತಿಯನ್ನು ನಿರ್ವಹಣೆ ಮಾಡಿಕೊಳ್ಳಬೇಕಾದ ಜವಾಬ್ದಾರಿ ನಿಮ್ಮ ಮೇಲಿರುತ್ತದೆ.

**ಆಯುರ್ವೇದ ಶಾಸ್ತ್ರ ಹೇಳುವ ಹಾಗೆ**

ಆಯುರ್ವೇದ ಶಾಸ್ತ್ರ ಹೇಳುವ ಹಾಗೆ, ಆರೋಗ್ಯಕರವಾದ ಕೊಲೆಸ್ಟ್ರಾಲ್ ಮಟ್ಟವನ್ನು ರಕ್ತದಲ್ಲಿ ಕಾಪಾಡಿಕೊಳ್ಳಬೇಕು ಎಂದರೆ ಆಹಾರ ಪದ್ಧತಿಯಲ್ಲಿ ಬದಲಾವಣೆಗಳನ್ನು ತಂದುಕೊಳ್ಳಬೇಕು. ನೀವು ತಿನ್ನುವ ಆಹಾರದಲ್ಲಿ ನಾರಿನ ಅಂಶ, ಒಮೆಗಾ 3 ಫ್ಯಾಟಿ ಆಮ್ಲಗಳು ಮತ್ತು ಆಂಟಿ ಆಕ್ಸಿಡೆಂಟ್ ಪ್ರಮಾಣ ಹೆಚ್ಚಾಗಿರುವ ಚಿಯಾ ಬೀಜಗಳು ಸೇರಿದ್ದರೆ ಒಳ್ಳೆಯದು. ಇದು ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಆಹಾರ ಪದ್ಧತಿ ಆಗಿರುತ್ತದೆ ಮತ್ತು ಹೃದಯಕ್ಕೆ ತನ್ನದೇ ಆದ ಪ್ರಯೋಜನಗಳನ್ನು ನೀಡುತ್ತದೆ.

**ನಿಂಬೆಹಣ್ಣಿನ ರಸ ಚಿಯಾ ಬೀಜಗಳ ಜೊತೆ ಚಮತ್ಕಾರ ಮಾಡುತ್ತಾ?**

ಚಿಯಾ ಬೀಜಗಳಲ್ಲಿ ನೈಸರ್ಗಿಕವಾಗಿ ನಮ್ಮ ಕೆಟ್ಟ ಕೊಲೆಸ್ಟ್ರಾಲ್ ಅಂದರೆ ಎಲ್‌ಡಿ–ಎಲ್ ಪ್ರಮಾಣವನ್ನು ಕಂಟ್ರೋಲ್ ಮಾಡುವ ಗುಣವಿದೆ. ಇದರ ಜೊತೆ ನಿಂಬೆಹಣ್ಣಿನ ರಸ ಸೇರಿದರೆ ಹೃದಯದ ಆರೋಗ್ಯದಲ್ಲಿ ಚಮತ್ಕಾರ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಈ ಸಣ್ಣ ಸಣ್ಣ ಬೀಜಗಳಲ್ಲಿ ಪೌಷ್ಟಿಕಾಂಶಗಳ ಪ್ರಮಾಣ ಹೇರಳವಾಗಿದೆ.

**ಹೃದಯ ರಕ್ತನಾಳದ ಆರೋಗ್ಯಕ್ಕೆ ಒಳ್ಳೆಯದು**

ಹೃದಯ ರಕ್ತನಾಳದ ಆರೋಗ್ಯವನ್ನು ಕಾಪಾಡುವಲ್ಲಿ ಇವುಗಳ ಪಾತ್ರ ತುಂಬಾ ದೊಡ್ಡದು. ನಿಂಬೆ ಹಣ್ಣಿನ ರಸವನ್ನು ಚಿಯಾ ಬೀಜಗಳಿಗೆ ಸೇರಿಸಿ ದೇಹಕ್ಕೆ ವಿಟಮಿನ್ ಸಿ ಪಡೆದುಕೊಳ್ಳಬಹುದು ಜೊತೆಗೆ ಆಂಟಿ ಆಕ್ಸಿಡೆಂಟ್ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಣ ಮಾಡುವ ನಾರಿನ ಅಂಶವನ್ನು ಕೂಡ ಪಡೆದುಕೊಳ್ಳಬಹುದು.

**ಯಾವ ಸಮಯದಲ್ಲಿ ಇದರ ಸೇವನೆ ಒಳ್ಳೆಯದು?**

ಯಾವುದೇ ಒಂದು ಆಹಾರ ಪದಾರ್ಥಗಳಿಂದ ನಮಗೆ ಪ್ರಯೋಜನವೂ ಸಿಗುತ್ತದೆ ಮತ್ತು ಅಡ್ಡ ಪರಿಣಾಮವು ಇರುತ್ತದೆ. ಅದರಂತೆ ಇದರಲ್ಲೂ ಕೂಡ. ಆಯುರ್ವೇದ ತಜ್ಞರು ಹೇಳುವ ಹಾಗೆ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿ ಬೆಳಗಿನ ಸಮಯದಲ್ಲಿ ಖಾಲಿ ಹೊಟ್ಟೆಯಲ್ಲಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು. ಒಂದು ವೇಳೆ ಇದು ಸಾಧ್ಯವಾಗ ದಿದ್ದರೆ ರಾತ್ರಿ ಮಲಗುವ ಮುಂಚೆ ಕುಡಿಯಬೇಕು. ಆದರೆ ಒಂದು ದಿನಕ್ಕೆ ಒಂದು ಗ್ಲಾಸ್ ಮಾತ್ರ ಕುಡಿಯಿರಿ. ಇದರಿಂದ ಯಾವುದೇ ಅಡ್ಡ ಪರಿಣಾಮ ಉಂಟಾಗುವುದಿಲ್ಲ.ನಿಂಬೆ ಜ್ಯೂಸ್‌ಗೆ ಚಿಯಾ ಬೀಜಗಳನ್ನು ಮಿಕ್ಸ್ ಮಾಡಿ ಕುಡಿದರೆ, ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗಲ್ಲ!

ರಕ್ತನಾಳಗಳಲ್ಲಿ ಅಧಿಕ ಕೊಲೆಸ್ಟ್ರಾಲ್ ಅಂಶ ಅತಿಯಾದರೆ ಆಗ ಇದರಿಂದ ಹೃದಯ ಸಂಬಂಧಿ ಕಾಯಿಲೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಕೊಲೆಸ್ಟ್ರಾಲ್ ಹೆಚ್ಚಾಗದಂತೆ ನೋಡಿಕೊಳ್ಳಬೇಕು. ಇದಕ್ಕಾಗಿ ನಮ್ಮ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು ಅತ್ಯಗತ್ಯ. ಆಯುರ್ವೇದ ತಜ್ಞರು ಹೇಳುವ ಹಾಗೆ ಚಳಿಗಾಲದಲ್ಲಿ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿಕುಡಿಯುವ ಅಭ್ಯಾಸ ಮಾಡಿಕೊಂಡರೆ, ಕೊಲೆಸ್ಟ್ರಾಲ್ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೃದಯವು ಕೂಡ ಸೇಫ್ ಆಗಿರುತ್ತದೆ.

**ನಿಂಬೆ ಜ್ಯೂಸ್‌ಗೆ ಚಿಯಾ ಬೀಜಗಳನ್ನು ಮಿಕ್ಸ್ ಮಾಡಿ ಕುಡಿದರೆ, ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗಲ್ಲ!**

ಹೃದಯದ ಆರೋಗ್ಯಕ್ಕೆ ನಾವು ಎಷ್ಟು ಆರೈಕೆ ಮಾಡಿದರೂ ಕಡಿಮೆಯೇ. ಚಳಿಗಾಲದಲ್ಲಿ ಸಾಧ್ಯವಾದಷ್ಟು ನಮ್ಮ ಹೃದಯವನ್ನು ಜೋಪಾನವಾಗಿ ನೋಡಿಕೊಳ್ಳುವುದು ಒಳ್ಳೆಯದು. ಏಕೆಂದರೆ ಚಳಿಗಾಲದ ಸಮಯದಲ್ಲಿ ನಮ್ಮ ರಕ್ತನಾಳಗಳು ತಮ್ಮ ಗಾತ್ರ ಕಡಿಮೆ ಮಾಡಿಕೊಳ್ಳುತ್ತವೆ. ಇದು ಹೃದಯದ ಸಮಸ್ಯೆಗೆ ಕಾರಣವಾಗುವುದರ ಜೊತೆಗೆ ರಕ್ತದ ಒತ್ತಡ ಕೂಡ ಏರುಪೇರು ಉಂಟಾಗುವಂತೆ ಆಗುತ್ತದೆ.

ತೆಗೆದುಕೊಳ್ಳುವ ಔಷಧಿಗಳು ಮತ್ತು ಜೀವನಶೈಲಿಯಲ್ಲಿ ಅಳವಡಿಸಿಕೊಳ್ಳುವ ಬದಲಾವಣೆಗಳ ಜೊತೆಗೆ ಪೌಷ್ಟಿಕಾಂಶಗಳನ್ನು ಒಳಗೊಂಡ ಆಹಾರಗಳನ್ನು ಸೇವಿಸುವುದು ಕೂಡ ಅತಿ ಮುಖ್ಯ. ಇದಕ್ಕೆ ಒಂದು ಉತ್ತಮ ಉದಾಹರಣೆಯೆಂದರೆ ಅದು ಚಿಯಾ ಬೀಜಗಳು. ಈ ಲೇಖನದಲ್ಲಿ ಚಿಯಾ ಬೀಜಗಳನ್ನು ನಿಂಬೆ ಪಾನೀಯ ಜೊತೆಗೆ ಸೇರಿಸಿ ಸೇವಿಸಿದರೆ, ಕೊಲೆಸ್ಟ್ರಾಲ್ ಕಡಿಮೆಯಾಗುವುದರ ಜೊತೆಗೆ ಹೃದಯದ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬಹುದು ಎಂಬ ಬಗ್ಗೆ ತಿಳಿಸಿಕೊಡಲಾಗಿದೆ.

**ಕೊಲೆಸ್ಟ್ರಾಲ್ ಹೆಚ್ಚಾದರೆ ಹೃದಯ ತನ್ನ ಬಡಿತ ನಿಲ್ಲಿಸುತ್ತಾ?**

ಹೀಗೊಂದು ಗೊಂದಲ ಜನರಲ್ಲಿ ಬರದೇ ಇರದು. ದೇಹದಲ್ಲಿ ಹೆಚ್ಚಾದ ಕೊಲೆಸ್ಟ್ರಾಲ್ ಹೃದಯದ ಆರೋಗ್ಯವನ್ನು ಹಾಳು ಮಾಡುತ್ತದೆ. ಈ ರೀತಿ ಕೊಲೆಸ್ಟ್ರಾಲ್ ಹೆಚ್ಚಾಗಲು ಕಾರಣವೆಂದರೆ ಅದು ನಾವು ತಿನ್ನುವ ಅನಾರೋಗ್ಯಕರ ಆಹಾರಗಳು ಮತ್ತು ನಮ್ಮ ಜಡ ಜೀವನ ಶೈಲಿ.

ಕೆಲವರಿಗೆ ಅನುವಂಶೀಯವಾಗಿ ಕೂಡ ಈ ಸಮಸ್ಯೆ ಹುಟ್ಟಿನಿಂದಲೇ ಬರುತ್ತದೆ. ತುಂಬಾ ಗಂಭೀರವಾದ ಸಮಸ್ಯೆ ಆಗುವವರೆಗೂ ಇದು ಕೆಲವೊಮ್ಮೆ ಯಾವುದೇ ರೋಗ ಲಕ್ಷಣಗಳನ್ನು ತೋರಿಸುವುದಿಲ್ಲ ಎಂದು ಹೇಳುತ್ತಾರೆ. ಹೀಗಾಗಿ ದೇಹದಲ್ಲಿ ಕೆಟ್ಟ ಕೊಬ್ಬಿನ ಅಂಶ ವನ್ನು ನಿಯಂತ್ರಣ ಮಾಡಿಕೊಳ್ಳಲು ಅತ್ಯಂತ ಪರಿಣಾಮ ಕಾರಿಯಾಗಿ ನಿಮ್ಮ ಆಹಾರ ಪದ್ಧತಿಯನ್ನು ನಿರ್ವಹಣೆ ಮಾಡಿಕೊಳ್ಳಬೇಕಾದ ಜವಾಬ್ದಾರಿ ನಿಮ್ಮ ಮೇಲಿರುತ್ತದೆ.

**ಆಯುರ್ವೇದ ಶಾಸ್ತ್ರ ಹೇಳುವ ಹಾಗೆ**

ಆಯುರ್ವೇದ ಶಾಸ್ತ್ರ ಹೇಳುವ ಹಾಗೆ, ಆರೋಗ್ಯಕರವಾದ ಕೊಲೆಸ್ಟ್ರಾಲ್ ಮಟ್ಟವನ್ನು ರಕ್ತದಲ್ಲಿ ಕಾಪಾಡಿಕೊಳ್ಳಬೇಕು ಎಂದರೆ ಆಹಾರ ಪದ್ಧತಿಯಲ್ಲಿ ಬದಲಾವಣೆಗಳನ್ನು ತಂದುಕೊಳ್ಳಬೇಕು. ನೀವು ತಿನ್ನುವ ಆಹಾರದಲ್ಲಿ ನಾರಿನ ಅಂಶ, ಒಮೆಗಾ 3 ಫ್ಯಾಟಿ ಆಮ್ಲಗಳು ಮತ್ತು ಆಂಟಿ ಆಕ್ಸಿಡೆಂಟ್ ಪ್ರಮಾಣ ಹೆಚ್ಚಾಗಿರುವ ಚಿಯಾ ಬೀಜಗಳು ಸೇರಿದ್ದರೆ ಒಳ್ಳೆಯದು. ಇದು ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಆಹಾರ ಪದ್ಧತಿ ಆಗಿರುತ್ತದೆ ಮತ್ತು ಹೃದಯಕ್ಕೆ ತನ್ನದೇ ಆದ ಪ್ರಯೋಜನಗಳನ್ನು ನೀಡುತ್ತದೆ.

**ನಿಂಬೆಹಣ್ಣಿನ ರಸ ಚಿಯಾ ಬೀಜಗಳ ಜೊತೆ ಚಮತ್ಕಾರ ಮಾಡುತ್ತಾ?**

ಚಿಯಾ ಬೀಜಗಳಲ್ಲಿ ನೈಸರ್ಗಿಕವಾಗಿ ನಮ್ಮ ಕೆಟ್ಟ ಕೊಲೆಸ್ಟ್ರಾಲ್ ಅಂದರೆ ಎಲ್‌ಡಿ–ಎಲ್ ಪ್ರಮಾಣವನ್ನು ಕಂಟ್ರೋಲ್ ಮಾಡುವ ಗುಣವಿದೆ. ಇದರ ಜೊತೆ ನಿಂಬೆಹಣ್ಣಿನ ರಸ ಸೇರಿದರೆ ಹೃದಯದ ಆರೋಗ್ಯದಲ್ಲಿ ಚಮತ್ಕಾರ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಈ ಸಣ್ಣ ಸಣ್ಣ ಬೀಜಗಳಲ್ಲಿ ಪೌಷ್ಟಿಕಾಂಶಗಳ ಪ್ರಮಾಣ ಹೇರಳವಾಗಿದೆ.

**ಹೃದಯ ರಕ್ತನಾಳದ ಆರೋಗ್ಯಕ್ಕೆ ಒಳ್ಳೆಯದು**

ಹೃದಯ ರಕ್ತನಾಳದ ಆರೋಗ್ಯವನ್ನು ಕಾಪಾಡುವಲ್ಲಿ ಇವುಗಳ ಪಾತ್ರ ತುಂಬಾ ದೊಡ್ಡದು. ನಿಂಬೆ ಹಣ್ಣಿನ ರಸವನ್ನು ಚಿಯಾ ಬೀಜಗಳಿಗೆ ಸೇರಿಸಿ ದೇಹಕ್ಕೆ ವಿಟಮಿನ್ ಸಿ ಪಡೆದುಕೊಳ್ಳಬಹುದು ಜೊತೆಗೆ ಆಂಟಿ ಆಕ್ಸಿಡೆಂಟ್ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಣ ಮಾಡುವ ನಾರಿನ ಅಂಶವನ್ನು ಕೂಡ ಪಡೆದುಕೊಳ್ಳಬಹುದು.

**ಯಾವ ಸಮಯದಲ್ಲಿ ಇದರ ಸೇವನೆ ಒಳ್ಳೆಯದು?**

ಯಾವುದೇ ಒಂದು ಆಹಾರ ಪದಾರ್ಥಗಳಿಂದ ನಮಗೆ ಪ್ರಯೋಜನವೂ ಸಿಗುತ್ತದೆ ಮತ್ತು ಅಡ್ಡ ಪರಿಣಾಮವು ಇರುತ್ತದೆ. ಅದರಂತೆ ಇದರಲ್ಲೂ ಕೂಡ. ಆಯುರ್ವೇದ ತಜ್ಞರು ಹೇಳುವ ಹಾಗೆ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿ ಬೆಳಗಿನ ಸಮಯದಲ್ಲಿ ಖಾಲಿ ಹೊಟ್ಟೆಯಲ್ಲಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು. ಒಂದು ವೇಳೆ ಇದು ಸಾಧ್ಯವಾಗ ದಿದ್ದರೆ ರಾತ್ರಿ ಮಲಗುವ ಮುಂಚೆ ಕುಡಿಯಬೇಕು. ಆದರೆ ಒಂದು ದಿನಕ್ಕೆ ಒಂದು ಗ್ಲಾಸ್ ಮಾತ್ರ ಕುಡಿಯಿರಿ. ಇದರಿಂದ ಯಾವುದೇ ಅಡ್ಡ ಪರಿಣಾಮ ಉಂಟಾಗುವುದಿಲ್ಲ.

ಯಾವುದೇ ಒಂದು ಆಹಾರ ಪದಾರ್ಥಗಳಿಂದ ನಮಗೆ ಪ್ರಯೋಜನವೂ ಸಿಗುತ್ತದೆ ಮತ್ತು ಅಡ್ಡ ಪರಿಣಾಮವು ಇರುತ್ತದೆ. ಅದರಂತೆ ಇದರಲ್ಲೂ ಕೂಡ.

ಆಯುರ್ವೇದ ತಜ್ಞರು ಹೇಳುವ ಹಾಗೆ ಚಿಯಾ ಬೀಜಗಳ ಜೊತೆ ನಿಂಬೆಹಣ್ಣಿನ ರಸ ಸೇರಿಸಿ ಬೆಳಗಿನ ಸಮಯದಲ್ಲಿ ಖಾಲಿ ಹೊಟ್ಟೆಯಲ್ಲಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು. ಒಂದು ವೇಳೆ ಇದು ಸಾಧ್ಯವಾಗ ದಿದ್ದರೆ ರಾತ್ರಿ ಮಲಗುವ ಮುಂಚೆ ಕುಡಿಯಬೇಕು. ಆದರೆ ಒಂದು ದಿನಕ್ಕೆ ಒಂದು ಗ್ಲಾಸ್ ಮಾತ್ರ ಕುಡಿಯಿರಿ. ಇದರಿಂದ ಯಾವುದೇ ಅಡ್ಡ ಪರಿಣಾಮ ಉಂಟಾಗುವುದಿಲ್ಲ.





# ಕರಿಬೇವನ್ನು ಸೇವಿಸುವುದರಿಂದ ಶುಗರ್ ಕೊಲೆಸ್ಟ್ರಾಲ್ ಕಂಟ್ರೋಲ್‌ಗೆ ಬರುತ್ತಾ?

ಕರಿಬೇವನ್ನು ಸೇವಿಸುವುದು ಆರೋಗ್ಯದ ದೃಷ್ಟಿಯಿಂದ ಬಹಳ ಒಳ್ಳೆಯದು. ಇದನ್ನು ಖಾಲಿ ಹೊಟ್ಟೆಯಲ್ಲಿ ಸೇವಿಸುವುದು ಶುಗರ್, ಕೊಲೆಸ್ಟ್ರಾಲ್ ಇರುವವರಿಗೆ ಬಹಳ ಒಳ್ಳೆಯದು ಎನ್ನಲಾಗುತ್ತದೆ. ಈ ಬಗ್ಗೆ ವೈದ್ಯರಿಂದ ತಿಳಿಯೋಣ.

ಕರಿಬೇವು ಆಯುರ್ವೇದಿಕ್ ಗಿಡಮೂಲಿಕೆಗಳಲ್ಲಿ ಒಂದಾಗಿದೆ. ಇದು ಪ್ರಕೃತಿಯ ಅತ್ಯಗತ್ಯ ಭಾಗವಾಗಿದ್ದು, ಒಂದಲ್ಲ, ಎರಡಲ್ಲ ಸಾಕಷ್ಟು ಪ್ರಯೋಜನಗಳನ್ನು ಹೊಂದಿದೆ. ಈ ಎಲೆಗಳ ಪ್ರಯೋಜನಗಳಿಗೆ ಸಂಬಂಧಿಸಿದ ವೀಡಿಯೊವು ಪ್ರಸ್ತುತ ಯೂಟ್ಯೂಬ್‌ನಲ್ಲಿ ವೈರಲ್ ಆಗುತ್ತಿದೆ. ಮಲಬದ್ಧತೆ, ಮಧುಮೇಹ ಮತ್ತು ಕೊಲೆಸ್ಟ್ರಾಲ್‌ನಂತಹ ಸಮಸ್ಯೆಗಳಲ್ಲಿ ಕರಿಬೇವಿನ ಎಲೆಗಳು ಪರಿಣಾಮಕಾರಿ ಎಂದು ಹೇಳಲಾಗುತ್ತದೆ. ಆದರೆ ಈ ಬಗ್ಗೆ ವೈದ್ಯರು ಏನು ಹೇಳುತ್ತಾರೆ? ಇದನ್ನು ತಿಳಿದುಕೊಳ್ಳುವುದು ಸಹ ಮುಖ್ಯವಾಗಿದೆ.

ವಿಡಿಯೋದಲ್ಲಿ ಏನಿದೆ?

ಕರಿಬೇವಿನ ಎಲೆಗಳನ್ನು ತಿನ್ನುವುದರಿಂದ ಆಗುವ ಅನೇಕ ಪ್ರಯೋಜನಗಳನ್ನು ವಿಡಿಯೋದಲ್ಲಿ ವಿವರಿಸಲಾಗಿದೆ. ಕೂದಲಿಗೆ ಕರಿಬೇವಿನ ಪ್ರಯೋಜನಗಳ ಬಗ್ಗೆ ಇಲ್ಲಿ ತಿಳಿಸಲಾಗಿದೆ. ನಂತರ ಇವುಗಳನ್ನು ತೆಗೆದುಕೊಳ್ಳುವುದರಿಂದ ರಕ್ತಹೀನತೆ, ಕೊಲೆಸ್ಟ್ರಾಲ್ ಮತ್ತು ಮಧುಮೇಹ




ನಿಯಂತ್ರಣದಂತಹ ಪ್ರಯೋಜನಗಳನ್ನು ಹೊಂದಿದೆ ಎಂದು ವೀಡಿಯೊದಲ್ಲಿ ಹೇಳಲಾಗಿದೆ. ಈ ಎಲೆಗಳು ಕೆಮ್ಮು ಅಥವಾ ಕಫದ ಸಮಸ್ಯೆಗೂ ಪ್ರಯೋಜನಕಾರಿ ಎಂದು ಹೇಳಲಾಗಿದೆ. ಆದರೆ ಈ ಹೇಳಿಕೆಗಳಲ್ಲಿ ಎಷ್ಟು ಸತ್ಯವಿದೆ ಎಂದು ಶಾರದಾ ವಿಶ್ವವಿದ್ಯಾನಿಲಯದ ಪೋಷಕಾಂಶ ಮತ್ತು ಡಯೆಟಿಕ್ಸ್ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಜುಬಿಯಾ ಇಸ್ಲಾಂ ತಿಳಿಸಿದ್ದಾರೆ.

**ಮಲಬದ್ಧತೆಯಲ್ಲಿ ಪ್ರಯೋಜನಕಾರಿ**

ವೀಡಿಯೊದಲ್ಲಿ, ಕರಿಬೇವಿನ ಎಲೆಗಳು ಮಲಬದ್ಧತೆಗೆ ಪ್ರಯೋಜನಕಾರಿ ಎಂದು ವಿವರಿಸಲಾಗಿದೆ. ಈ ಬಗ್ಗೆ ತಜ್ಞರು ಹೇಳುವಂತೆ, ಈ ಎಲೆಗಳು ಜೀರ್ಣಕಾರಿ ಕಿಣ್ವಗಳನ್ನು ಬಿಡುಗಡೆ ಮಾಡುತ್ತವೆ, ಇದು ಮಲಬದ್ಧತೆಗೆ ಕಾರಣವಾಗುವುದಿಲ್ಲ ಮತ್ತು ಆಹಾರವು ಚೆನ್ನಾಗಿ ಜೀರ್ಣವಾಗುತ್ತದೆ. ಈ ಎಲೆಗಳು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಬಹುದು ಎಂದು ವೀಡಿಯೊದಲ್ಲಿ ಹೇಳಲಾಗಿದೆ. ತಜ್ಞರ ತನಿಖೆಯಲ್ಲೂ ಈ ಹೇಳಿಕೆ ನಿಜವೆಂದು ಕಂಡುಬಂದಿದೆ.

**ಕೊಲೆಸ್ಟ್ರಾಲ್ ಸಮತೋಲನದಲ್ಲಿರುತ್ತದೆ**

ಕೊಲೆಸ್ಟ್ರಾಲ್ ಸಮಸ್ಯೆ ಇರುವವರು ಕರಿಬೇವು ತಿನ್ನುವುದು ಒಳ್ಳೆಯದು ಎನ್ನುವುದನ್ನು ನೀವು ಕೇಳಿರುವುವಿರಿ. ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಈ ಎಲೆಗಳನ್ನು ತಿನ್ನುವುದು ಕೊಲೆಸ್ಟ್ರಾಲ್ ಮಟ್ಟವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ ಮತ್ತು ಹೃದಯವನ್ನು ಆರೋಗ್ಯಕರವಾಗಿರಿಸುತ್ತದೆ ಎಂದು ಹೇಳಲಾಗಿದೆ. ಈ ಎಲೆಗಳು ಆಕ್ಸಿಡೇಟಿವ್ ಒತ್ತಡವನ್ನು ತಡೆಯುತ್ತದೆ ಮತ್ತು ಅದರ ಉತ್ಕರ್ಷಣ ನಿರೋಧಕ ಗುಣವು ಹೃದಯವನ್ನು ಆರೋಗ್ಯಕರವಾಗಿರಿಸುತ್ತದೆ ಎಂದು ತಜ್ಞರು ಹೇಳುತ್ತಾರೆ ಏಕೆಂದರೆ ಇದು ತನಿಖೆಯಲ್ಲಿ ನಿಜವೆಂದು ಕಂಡುಬಂದಿದೆ.

**ಕೂದಲು ದಪ್ಪವಾಗಿ ಮತ್ತು ಆರೋಗ್ಯಕರವಾಗಿರುತ್ತದೆ**

ಕರಿಬೇವಿನ ಎಲೆಗಳಲ್ಲಿ ವಿಟಮಿನ್, ಫಾಸ್ಫರಸ್ ಮತ್ತು ಕಬ್ಬಿಣದ ಅಂಶಗಳಿರುವುದರಿಂದ ಕೂದಲಿಗೆ ಸಹ ಸೂಕ್ತವಾಗಿದೆ. ತಜ್ಞರು ಈ ಎಲೆಗಳು ಸಮೃದ್ಧ ಪ್ರೋಟೀನ್ ಮತ್ತು ಬೀಟಾ–ಕ್ಯಾರೋಟಿನ್ ಅಂಶವನ್ನು ಹೊಂದಿರುತ್ತವೆ ಎಂದು ಹೇಳುತ್ತಾರೆ. ಇದು ಕೂದಲಿನ ಆರೋಗ್ಯವನ್ನು ಸುಧಾರಿಸುತ್ತದೆ ಮತ್ತು ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ. ಕರಿಬೇವಿನ ಎಲೆಗಳನ್ನು ಸೇವಿಸುವುದರಿಂದ ಕೂದಲು ಅಕಾಲಿಕವಾಗಿ ಬಿಳಿಯಾಗುವುದನ್ನು ತಡೆಯುತ್ತದೆ.

ಈ ಎಲೆಗಳ ದೈನಂದಿನ ಸೇವನೆಯಿಂದ ಸಾಮಾನ್ಯವಾಗಿ ಆರೋಗ್ಯವಾಗಿದೆ ಎಂದು ಸಜಕ್ ನಡೆದಿದ ಸತ್ಯಾನ್ವೇಷಣೆಯಿಂದ ತಿಳಿದು ಬಂದಿದೆ. ತಜ್ಞರು ಇದನ್ನು ನಂಬುತ್ತಾರೆ. ಇದು ಉತ್ಕರ್ಷಣ ನಿರೋಧಕಗಳು, ವಿಟಮಿನ್ ಎ, ಬಿ, ಸಿ ಮತ್ತು ಇ ಮತ್ತು ಕ್ಯಾಲ್ಸಿಯಂ ಮತ್ತು ಕಬ್ಬಿಣದಂತಹ ಖನಿಜಗಳಂತಹ ಪೋಷಣೆಯನ್ನು ಒದಗಿಸುತ್ತದೆ.

# ಸೇಬಿನ ಆರೋಗ್ಯ ಗುಟ್ಟು



ಬಡವರ ಸೇಬು ಎಂದೇ ಖ್ಯಾತಿ ಪಡೆದಿರುವ ಸೀಬೆ ಅಥವಾ ಪೇರಳ ಹಣ್ಣು ಎಲ್ಲಾ ಖಾಯಿಲೆಗೂ ರಾಮಬಾಣ. ಸೇಬಿನ ಬದಲು ದಿನಕ್ಕೊಂದು ಸೀಬೆಹಣ್ಣು ತಿಂದು ವೈದ್ಯರಿಂದ ದೂರ ಇರಿ ಎಂದು ಹೇಳಬಹುದು. ಏಕೆಂದರೆ ಉತ್ತಮ ಹಣ್ಣುಗಳಲ್ಲಿ ಸೀಬೆಹಣ್ಣು ಕೂಡ ಒಂದು. ಅಗತ್ಯವಾಗಿ ಬೇಕಾಗಿರುವ ಪ್ರಮುಖ ಪೌಷ್ಟಿಕಾಂಶಗಳನ್ನು ಹೊಂದಿರುವ ಹಣ್ಣು ಇದು.

ಸಂಶೋಧನೆಯೊಂದರ ಪ್ರಕಾರ, ಮಧುಮೇಹ ಕಾಯಿಲೆಯಿಂದ ನರಳುವವರು ಸೀಬೆಹಣ್ಣನ್ನು ತಿನ್ನುವಾಗ ಅದರ ಮೇಲಿನ ಹಸಿರು ಸಿಪ್ಪೆಯನ್ನು ತೆಗೆದು ಸೇವಿಸಿದರೆ ಒಳಿತು. ಏಕೆಂದರೆ, ಅದರಲ್ಲಿನ ಅತ್ಯಧಿಕ ಗ್ಲೂಕೋಸ್ ಪ್ರಮಾಣ ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ಏರಿಸುವುದು.

ವಿಟಮಿನ್ ಎ, ಬಿ ಹಾಗೂ ಸಿ ಮತ್ತು ಪೊಟಾಶಿಯಂ ಅಂಶಗಳನ್ನು ಹೊಂದಿರುವ ಸೀಬೆಕಾಯಿ, ತ್ವಚೆಯ ಕಾಂತಿಯನ್ನು ಹೆಚ್ಚಿಸುತ್ತದಂತೆ. ಇದಕ್ಕಾಗಿ ಸೀಬೆ ಎಲೆಗಳ ಪೇಸ್ಟ್ ಮಾಡಿ, ಅದನ್ನ ಮುಖಕ್ಕೆ ಹಚ್ಚಿ ತೊಳೆದಲ್ಲಿ ಜಿಡ್ಡಿನಾಂಶ ಮಾಯವಾಗಿ ಚರ್ಮ ಬಿಗಿಯಾಗಿ ಕಾಂತಿಯುಕ್ತವಾಗುತ್ತದೆ.

ಇದರಲ್ಲಿರುವ ವಿಟಮಿನ್ ಬಿ6ನಿಂದ ಮಿದುಳು ಚುರುಕಾಗುತ್ತದೆ. ಓದುವ ಮಕ್ಕಳಲ್ಲಿ ನೆನಪಿನ ಶಕ್ತಿ ಹೆಚ್ಚುತ್ತದೆ. ಇದರಲ್ಲಿರುವ ಅಧಿಕ ನಾರಿನಂಶವು ಮಧುಮೇಹಿಗಳಿಗೆ ರಕ್ತದಲ್ಲಿ ಸಕ್ಕರೆ ಅಂಶ ಜಾಸ್ತಿಯಾಗದಂತೆ ತಡೆಗಟ್ಟುತ್ತವೆ. ಕೆಲವರಿಗೆ ಸೀಬೆಹಣ್ಣಿನಿಂದ ಗಂಟಲಲ್ಲಿ ಅಲರ್ಜಿಯಾಗುವ ಸಾಧ್ಯತೆಗಳಿವೆ. ಅಂಥವರು ಹಣ್ಣಿಗೆ ಉಪ್ಪು ಬೆರೆಸಿ ಸೇವಿಸಬೇಕು. ವೃದ್ಧರು, ಹಲ್ಲಿನ ತೊಂದರೆ ಇರುವವರು ಸೀಬೆಹಣ್ಣಿನ ಜ್ಯೂಸ್ ಸೇವಿಸಬಹುದು.

ಸೀಬೆಹಣ್ಣಿನಿಂದ ಶೀತ, ನೆಗಡಿ ಉಂಟಾಗುವುದಿಲ್ಲ. ಬದಲಿಗೆ ಶೀತ–ನೆಗಡಿಯನ್ನು ಉಂಟು ಮಾಡುವ ಬ್ಯಾಕ್ಟೀರಿಯಗಳನ್ನು ನಾಶಗೊಳಿಸುತ್ತವೆ. ಈ ಗುಣದಿಂದ ಇದನ್ನು ಅತಿಸಾರ ಹಾಗೂ ವಾಂತಿ–ಭೇದಿ ಇರುವ ಮಂದಿ ಸೇವಿಸುವುದರಿಂದ ಉಪಯುಕ್ತ.

# ವಿಕಲಚೇತರ ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಹಿತಕಾಯುವಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ಎಂಆರ್‌ಡಬ್ಲ್ಯು (ವಿವಿಧ್ಯೋದ್ದೇಶ ಪುನರ್ವಸತಿ ಕಾರ್ಯಕರ್ತರು), ವಿಆರ್‌ಡಬ್ಲ್ಯು(ಗ್ರಾಮೀಣ ಪುನವರ್ಸತಿ ಕಾರ್ಯಕರ್ತರು) ಹಾಗೂ ಯುಆರ್‌ಡಬ್ಲ್ಯು(ನಗರ ಪುನರ್ವಸತಿ ಕಾರ್ಯಕರ್ತರ) ಬೇಡಿಕೆಗಳ ಈಡೇ–ರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ಸುವರ್ಣವಿಧಾನಸೌಧದ ಬಳಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನವಕರ್ನಾಟಕ, ವಿಕಲಚೇತನರ ಗೌರವಧನ ಕಾರ್ಯಕರ್ತರ ಸಂಘದ ವತಿಯಿಂದ ನಡೆಯುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಅಹವಾಲು ಸ್ವೀಕರಿಸಿ ಮಾತನಾಡಿದ ಸಚಿವರು, ನೌಕರಿ ಖಾಯಂ, ಗೌರವಧನ ಹೆಚ್ಚಿಸುವ ಕುರಿತು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು.

ಒಖಘ, ಗಿಖಘ ಹಾಗೂ ಗಖಘ ಕಾರ್ಯಕರ್ತ–ರಿಗೆ ಸದ್ಯ 9 ಸಾವಿರ ಗೌರವ ಧನ ಸಿಗುತ್ತಿದ್ದು, ಇದರಲ್ಲಿಯೇ ಸ್ವತಂತ್ರವಾಗಿ ಸ್ವಾಭಿಮಾನಿಗಳಾಗಿ ಬದುಕು ಕಟ್ಟಿಕೊಂಡು ಇದ್ದೀರಾ. ಕನಿಷ್ಠ ವೇತನ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಶೀಘ್ರವೇ ನಿಮ್ಮ ಬೇಡಿಕೆಗಳಿಗೆ ಸ್ಪಂದನೆ ಸಿಗಲಿವೆ ಎಂದು ಹೇಳಿದರು.

ಕಳೆದ ಒಂದೂವರೆ ವರ್ಷಗಳಿಂದ ವಿಕಲ ಚೇತನರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವೆ. ಜನ ಕೊಟ್ಟ ಅಧಿಕಾರವನ್ನು ಸೂಕ್ತ ರೀತಿಯಲ್ಲಿ ಬಳಸಿ ಕೊಳ್ಳುತ್ತಿದ್ದೇನೆ. ನವಕರ್ನಾಟಕ ಸಂಘಟನೆ ಎಲ್ಲರ ಕಣ್ಣನ್ನು ತೆರೆಸುವ ಕೆಲಸ ಮಾಡುತ್ತಿದೆ. ಸ್ವಾಭಿಮಾನಿಯಾಗಿ ಬದುಕು ಕಂಡಿಕೊಂಡಿರುವವರ ಬೇಡಿಕೆಗಳನ್ನು ಈಡೇರಿಸಲು ನಾನು ಸದಾ ಬದ್ಧನಾಗಿರುತ್ತೇನೆ. ಕನಿಷ್ಠ ವೇತನ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಗಮನಕ್ಕೆ ತರಲಿದ್ದೇನೆ ಎಂದು ಸಚಿವರು ಭರವಸೆ ನೀಡಿದರು.

ಈ ವೇಳೆ ಬೆಳಗಾವಿ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಸಂಸ್ಥಾಪಕ ಅಧ್ಯಕ್ಷರಾದ ಅಂಬಾಜಿ ಮೇಟಿ, ಗೌರವಾಧ್ಯಕ್ಷರಾದ ದತ್ತಾತ್ರೇಯ ಆರ್.ಕುಡಕಿ, ರಾಜ್ಯಾಧ್ಯಕ್ಷರಾದ ಫಕೀರ್‌ಗೌಡ ಸಿ ಪಾಟೀಲ್ ಸೇ–ರಿದಂತೆ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

# ದೇವದಾಸಿ ಅನಿಷ್ಟ ಪದ್ಧತಿ ನಿರ್ಮೂಲನೆಗೆ ಹಲವು ಕಾರ್ಯಕ್ರಮ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ದೇವದಾಸಿಯರಿಗೆ ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ. ದೇವದಾಸಿ ಅನಿಷ್ಟ ಪದ್ಧತಿ ನಿರ್ಮೂಲನೆಗೆ ಸರಕಾರ ಹಲವು ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ವಿಧಾನ ಪರಿಷತ್ ಕಲಾಪದಲ್ಲಿ ಹೇಮಲತಾ ನಾಯಕ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೇವದಾಸಿ ಮಹಿಳೆಯರು ಗೌರವಯುತ ಜೀವನ ನಡೆಸುವ ವಾತಾವರಣ ಸೃಷ್ಟಿ ಮಾಡಲಾಗಿದೆ. ಕಷ್ಟದಲ್ಲಿರುವವರಿಗೆ ಸಹಾಯ ಮಾಡಲೆಂದೇ ಜಾರಿಗೆ ತಂದಿರುವ ಗೃಹಲಕ್ಷ್ಮೀ ಯೋಜನೆಯನ್ನು ಅವರಿಗೂ ತಲುಪಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಎಲ್ಲಾ ಅರ್ಹ ಫಲಾನುಭವಿಗಳಿಗೆ ಮಾಸಾಶನ ನೀಡಲಾಗುತ್ತಿದ್ದು, ಮಾಜಿ ದೇವದಾಸಿಯರಿಗೆ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಮಾಸಾಶನ ನೀಡಲಾಗುತ್ತಿದೆ. ಕೊಪ್ಪಳದಲ್ಲಿ ಪ್ರಸ್ತುತ 2,653 ದೇವದಾಸಿಯರಲ್ಲಿ 2550 ಮಹಿಳೆಯರಿಗೆ ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ ಎಂದರು.

45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಪ್ರತಿ ತಿಂಗಳು 2 ಸಾವಿರ ರೂಪಾಯಿಯಂತೆ ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ. ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಈ ಯೋಜನೆಯಲ್ಲಿ ಪ್ರತಿ ಫಲಾನುಭವಿಗೆ ತಲಾ 30 ಸಾವಿರದಂತೆ ಸಹಾಯಧನವನ್ನು ನೀಡಲಾಗುತ್ತಿದೆ ಎಂದರು.

ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ, ಈ ಯೋಜನೆಯಡಿ ನಿವೇಶನ ಹೊಂದಿರುವ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಪ್ರದೇಶದಲ್ಲಿ 1.75 ಲಕ್ಷ ರೂಪಾಯಿ ಮತ್ತು ನಗರ ಪ್ರದೇಶದಲ್ಲಿ 2 ಲಕ್ಷ ರೂಪಾಯಿ ವೆಚ್ಚದಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಸಾಮಾನ್ಯ ಮಹಿಳೆಯರಂತೆಯೇ ಮಾಜಿ ದೇವದಾಸಿ ಮಹಿಳೆಯರಿಗೂ ಗ್ಯಾರಂಟಿ ಯೋಜನೆಗಳನ್ನು ತಲುಪಿಸಲಾಗುತ್ತಿದೆ. ಮಾಜಿ ದೇವದಾಸಿ ವಸತಿ ಯೋಜನೆಯಡಿ ಕೊಪ್ಪಳ ಜಿಲ್ಲೆಗೆ ಕಳೆದ 10 ವರ್ಷಗಳಲ್ಲಿ 823 ಮನೆಗಳು ಮಂಜೂರಾಗಿದೆ ಎಂದರು.

# ಅಂಬೇಡ್ಕರ ನಿಗಮ ; ವಿವಿಧ ಯೋಜನೆಗಳಿಗೆ ಸಹಾಯಧನ

ಬಾಗಲಕೋಟೆ: ಡಿಸೆಂಬರ : ಪ್ರಸಕ್ತ ಸಾಲಿಗೆ ಡಾ.ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಘಟಕ ವೆಚ್ಚ 1 ಲಕ್ಷ ರೂ.ಗಳಿಗೆ ಸಹಾಯಧನವಾಗಿ 50 ಸಾವಿರ ರೂ, ಉಳಿದ 50 ಲಕ್ಷ ರೂ.ಗಳನ್ನು ಅವಧಿ ಸಾಲದ ಶೇ.4ರ ಬಡ್ಡಿದರದಲ್ಲಿ ನೀಡಲಾಗುತ್ತದೆ. ಸ್ವಾವಲಂಬಿ ಸಾರಥಿ–ಫುಡ್ ಕಾರ್ಟ ಉದ್ದೇಶಕ್ಕಾಗಿ ಸಾಲದ ಮೊತ್ತಕ್ಕೆ ಶೇ.75 ರಷ್ಟು ಸಹಾಯಧನ ಅಥವಾ ಗರಿಷ್ಠ ಮೊತ್ತ 4 ಲಕ್ಷ ರೂ. ಉಳಿದ ಮೊತ್ತ ಬ್ಯಾಂಕ್ ಸಹಯೋಗದೊಂದಿಗೆ ನೀಡಲಾಗುತ್ತದೆ. ಕಳೆದ 2023–24 ಮತ್ತು ಪ್ರಸಕ್ತ 2024–25ನೇ ಸಾಲಿನಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವದಿಲ್ಲ.

ಈಗಾಗಲೇ ಅರ್ಜಿ ಸಲ್ಲಿಸಿ ಉದ್ದೇಶಗಳ ಬದಲಾವಣೆಗೆ ಇಚ್ಚಿಸಿದಲ್ಲಿ ನಿಗಮದ ಕಲ್ಯಾಣ ಆಪ್‌ನ ಲಿಂಕ್‌ನಲ್ಲಿ ನೇರವಾಗಿ ಉದ್ದೇಶ ಬದಲಾವಣೆಗೆ ಮನವಿ ಸಲ್ಲಿಸಬಹುದು. ಹೊಸದಾಗಿ ಅರ್ಜಿ ಸಲ್ಲಿಸುವವರು ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬೆಂಗಳೂರು ಒನ್ ಕೇಂದ್ರಗಳಲ್ಲಿ ಡಿಸೆಂಬರ 29 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235214ಗೆ ಸಂಪರ್ಕಿಸಬಹುದಾಗಿದೆ.

# ಮೃತ ಕುಟುಂಬಕ್ಕೆ 10 ಲಕ್ಷ ರೂ. ಪರಿಹಾರ ವಿತರಣೆ



ಬಾಗಲಕೋಟೆ: : ಚಲಿಸುತ್ತಿರುವ ಬಸ್‌ನಿಂದ ಇಳಿಯಲು ಪ್ರಯತ್ನಿಸಿ ಕೆಳಗೆ ಬಿದ್ದು ಮೃತಪಟ್ಟ ಮಹಿಳೆ ಯಲ್ಲವ್ವ ಪಾತ್ರೋಟ ಅವರ ಕುಟುಂಬಸ್ಥರಾದ ಪತಿ ಸಣ್ಣಹನಮಂತ ಪಾತ್ರೋಟ ಅವರಿಗೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಪಘಾತ ಪರಿಹಾರ ನಿಧಿಯಿಂದ 10 ಲಕ್ಷ ರೂ.ಗಳ ಪರಿಹಾರಧನವನ್ನು ಬಾಗಲಕೋಟೆ ವಿಭಾಗೀಯ ನಿಯಂತ್ರಣಾಧಿಕಾರಿ ನಿತೀನ ಹೆಗಡೆ ಶುಕ್ರವಾರ ವಿತರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಂಚಾರಿ ನಿಯಂತ್ರಣಾಧಿಕಾರಿ ಮೈತ್ರಿ ಇದ್ದರು.

# ತಮ್ಮ ತಮ್ಮ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಬಗೆ ಹರಿಸಿಕೊಂಡು ನೆಮ್ಮದಿಯಿಂದ ಜೀವನ ನಡೆಸಿ



ರಾಯಬಾಗ: ಪಕ್ಷಗಾರರು ತಮ್ಮ ತಮ್ಮ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಬಗೆ ಹರಿಸಿಕೊಂಡು ನೆಮ್ಮದಿಯಿಂದ ಜೀವನ ನಡೆಸಬೇಕೆಂದು ಹಿರಿಯ ದಿವಾಣಿ ನ್ಯಾಯಾಧೀಶ ಜಗದೀಶ ಬಿಸೇರೊಟ್ಟಿ ಹೇಳಿದರು.

ಶನಿವಾರ ಪಟ್ಟಣದ ಹಿರಿಯ ದಿವಾಣಿ ನ್ಯಾಯಾಲಯದಲ್ಲಿ ನಡೆದ ಬೃಹತ್ ಲೋಕ ಅದಾಲತದಲ್ಲಿ 2110 ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥಗೊಳಿಸಿ ಮಾತನಾಡಿದ ಅವರು, ನೆರೆಹೊರೆಯವರೊಂದಿಗೆ ಸೌಹಾರ್ದತೆಯಿಂದ ಬದುಕಬೇಕು. ಚಿಕ್ಕ ಪುಟ್ಟ ಪ್ರಕರಣಗಳನ್ನು ತಮ್ಮಲ್ಲಿ ಬಗೆ ಹರಿಸಿಕೊಳ್ಳಬೇಕೆಂದು ತಿಳಿಸಿದರು.

ವಕೀಲರಾದ ಎಸ್.ಕೆ.ರೆಂಟೆ, ಎಸ್.ಬಿ.ಪಾಟೀಲ ಜಿ.ಎಸ್.ಪವಾರ, ಕೇ.ಎಸ್.ಘುಂಡಿಪಲ್ಲೆ, ಸಾರಿಕಾ ಕಾಂಬಳೆ, ಶ್ರೀದೇವಿ ನಾಯಿಕ, ಯು.ಎನ್.ಉಮ್ರಾಣಿ ಸೇರಿ ಪಕ್ಷಗಾರರು ಮತ್ತು ವಕೀಲರು, ಸಿಬ್ಬಂದಿ ಇದ್ದರು.

# ಗ್ರಾಮೀಣ ಭಾಗದ ಸರ್ವತೋಮುಖ ಅಭಿವೃದ್ಧಿಗೆ ನರೇಗಾ ಯೋಜನೆ ನೆರವು

## ೨೦೨೫-೨೬ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ವಿಶೇಷ ಗ್ರಾಮಸಭೆ

ಮುದ್ದೇಬಿಹಾಳ ; 2025–26 ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಕಾರ್ಯಕ್ರಮದ ಕ್ರಿಯಾಯೋಜನೆ ತಯಾರಿಸುತ್ತಿದ್ದು, ಫಲಾನುಭವಿಗಳು ಬೇಡಿಕೆ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳಬೇಕೆಂದು ತಾಪಂ ಎಡಿ,ಹಾಗೂ ಕವಡಿಮಟ್ಟಿ ಪಿಡಿಓ ಪಿ.ಎಸ್ ಕಸನಕ್ಕಿ ಹೇಳಿದರು ಶುಕ್ರವಾರ ತಾಲೂಕಿನ ನಾಗರಬೆಟ್ಟ ಗ್ರಾಮದ ಮಾರುತೇಶ್ವರ ದೇವಾಲಯದಲ್ಲಿ ನಾಗರಬೆಟ್ಟ ಗ್ರಾಪಂ ವ್ಯಾಪ್ತಿಯ ಗ್ರಾಮಗಳ 2025_26ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ವಿಶೇಷ ಗ್ರಾಮಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಗ್ರಾಮೀಣ ಭಾಗದ ಸರ್ವತೋಮುಖ ಅಭಿವೃದ್ಧಿಗೆ ನರೇಗಾ ಯೋಜನೆ ನೆರವಾಗಿದೆ. ಕೂಲಿಕಾರರಿಗೆ ಕೆಲಸ ನೀಡುವುದರ ಜೊತೆಗೆ ಗ್ರಾಮೀಣ ಭಾಗದಲ್ಲಿ ಆಸ್ತಿಗಳ ಸೃಜನೆ ಆಗುತ್ತಿವೆ ಎಂದರು.

ನಾಗರಬೆಟ್ಟ ಗ್ರಾ ಪಂ ಅಭಿವೃದ್ಧಿ ಅಧಿಕಾರಿ ವಿರೇಶ ಹೂಗಾರ ಮಾತನಾಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ 2025–26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು



ಕಾರ್ಮಿಕರಿಂದ ಬೇಡಿಕೆ ಪಡೆಯಲಾಗುತ್ತಿದೆ. ದನಕರ ಕೊಟ್ಟೆ,ಕೃಷಿ ಹೊಂಡ, ಚೆಕ್ ಡ್ಯಾಮ್, ಚರಂಡಿ ರಸ್ತೆ ಶೌಚಾಲಯ, ಬಿಸಿಊಟ ಕೋಣೆ, ಅಂಗನವಾಡಿ ಕೇಂದ್ರ ಕಟ್ಟಡ, ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಬೇಡಿಕೆ ಸಲ್ಲಿಸಬಹುದು ಎಂದರು.

ಸಭೆಯಲ್ಲಿ ಬಸವ ವಸತಿಯೋಜನೆ 25 ಮನೆಗಳು ಅಂಬೇಡ್ಕರ್ ವಸತಿ ಯೋಜನೆಯಲ್ಲಿ 7 ಮನೆಗಳು ಒಟ್ಟು 33 ಮನೆ ಮಂಜೂರಾತಿಗೆ ಇನ್ನೊಂದು ಗ್ರಾಮಸಭೆಯಲ್ಲಿ ಚರ್ಚಿಸುವಂತೆ ಸಭೆಯಲ್ಲಿ ಸದಸ್ಯರು ಗ್ರಾಮಸ್ಥರು ತೀರ್ಮಾನಿಸಿದರು.

ಸಭೆಯಲ್ಲಿ ನಾಗರಬೆಟ್ಟ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ವಾಟರ್ ಮ್ಯಾನ್ ನಿಂದ ತೊಂದರೆ ಆಗುತ್ತಿದೆ ಎಂದು ಸಭೆಯಲ್ಲಿ ಗ್ರಾಮಸ್ಥರು ತಂದರು ಮತ್ತು ಗ್ರಾಮದಲ್ಲಿ ಸ್ವಚ್ಚತೆಗೆ ಸ್ವಚ್ಚತಾಗಾರ ನೇಮಕಾತಿ ಮಾಡಿಕೊಳ್ಳಲು ಒತ್ತಾಯಿಸಿದರಲ್ಲದೆ ವಿದ್ಯುತ್ ಬೀದಿ ದೀಪ ಸಮಸ್ಯೆ, ಮೇಲಿನ ಗಣಿಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಗ್ರಂಥಾಲಯ ಸೌಲಭ್ಯ, ಶುದ್ಧ ಕುಡಿಯುವ ನೀರಿನ ಘಟಕ ಸಮಸ್ಯೆ , ರಸ್ತೆಗಳ ಸಮಸ್ಯೆ ಸೇರಿದಂತೆ ಅನೇಕ ಸಮಸ್ಯೆಗಳ ಕುರಿತು ಸಭೆಯಲ್ಲಿ ಗ್ರಾಮಸ್ಥರು ಗಮನಕ್ಕೆ ತಂದರು ಅಂಗನವಾಡಿ ಸ್ಥಳಾಂತರಕ್ಕೆ ಬೇಡಿಕೆ ಸಲ್ಲಿಸಿದರು.

ಕೃಷಿ ,ತೋಟಗಾರಿಕೆ, ಅರಣ್ಯ ಇಲಾಖೆ ಆರೋಗ್ಯ ಇಲಾಖೆ ವಿದ್ಯುತ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾ–ರಿಗಳು ಸರಕಾರದ ಸೌಲಭ್ಯಗಳ ಕುರಿತು ಗ್ರಾಮಸ್ಥರರಿಗೆ ಮಾಹಿತಿಯನ್ನು ನೀಡಿದರು ಸಭೆಯಲ್ಲಿ ಗ್ರಾಪಂ ಅಧ್ಯಕ್ಷ ಶಿದ್ರಾಮಪ್ಪ ಪ್ಯಾಟಿ, ಉಪಾಧ್ಯಕ್ಷೆ ಪ್ರೇಮಾ ಚಲವಾದಿ, ಶರಣಗೌಡ ಸಿದರೆಡ್ಡಿ,ಭೀಮಣ್ಣ ಪೂಜಾರಿ,ನೀಲಪ್ಪ ಮದರಿ, ಕಾಶಪ್ಪ ಮಾದರ,ಕಸ್ತೂರಿ ಮಣ್ಣೂರ, ಲಕ್ಷ್ಮೀ ಶಿವಯೋಗಿಮಠ,ಪರಮವ್ವ ಪಾಟೀಲ್, ದೇವಮ್ಮ ರಕ್ಕಸಗಿ, ರೇಣುಕಾ ಬಿರಾದಾರ ,ವೀರೇಶ ಪ್ಯಾಟಿ,ಯಲ್ಲಪ್ಪ ಚಲವಾದಿ, ವಿರೇಶ ಪಾಟೀಲ್,ಕಾಂತು ಮಣ್ಣೂರ,ಸಿದ್ದರಾಯ ಬಿರಾದಾರ, ವಿರೇಶ ಪ್ಯಾಟಿ, ಅಂಬ್ರಯ್ಯ ಶಿವಯೋಗಿಮಠ,ನಾಲತವಾಡ ಕೃಷಿ ಅಧಿಕಾರಿ ಅಶೋಕ ಕಾಂಬಳೆ,ತೋಟಗಾರಿಕೆ ಇಲಾಖೆಯ ವಿಲಾಸ ರಾಠೋಡ,ಅರಣ್ಯ ಇಲಾಖೆ ಅಧಿಕಾರಿ, ಬಸವರಾಜ ಬ್ಯಾಕೋಡ, ಸಮಾಜ ಕಲ್ಯಾಣ ವಾರ್ಡನ್ ಮಹಾಂತೇಶ ತಾಳಿಕೋಟೆ, ಕೆಇಬಿ ಮೇಲ್ವಿಚಾರಕ ಎಂ ಜಿ ಸಜ್ಜನ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಅಯ್ಯಪ್ಪ ಮಲಗಲದಿನ್ನಿ ,ಕ್ಲರ್ಕ ನಾಗಪ್ಪ ವಾಲಿಕಾರ,ಬಸಲಿಂಗಪ್ಪ ನೇರಬೆಂಚಿ,ಗ್ರಾಪಂ ಸಿಬ್ಬಂದಿಗಳು, ಶಿಕ್ಷಕರು,ಅಂಗನವಾಡಿ,ಆಶಾ ಕಾರ್ಯಕರ್ತೆಯರು ಸೇರಿದಂತೆ ನಾಗರಬೆಟ್ಟ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಗ್ರಾಮಸ್ಥರು ಸೇರಿದಂತೆ ಭಾಗವಹಿಸಿದ್ದರು.

# ಕರ್ಮಯೋಗ ಆಚರಣೆಯಿಂದ ಶ್ರೇಷ್ಠತೆ–ವೇ.ಜೋಶಿ



ತಾಳಿಕೋಟೆ, ಪುರುಷನಾದವನು ತನ್ನ ಮನಸ್ಸನ್ನು ಸ್ವಚ್ಚೆತೆಯಿಂದ ಇಟ್ಟುಕೊಂಡು ಇಂದ್ರಿಯಗಳನ್ನು ವಶ ಪಡಿಸಿಕೊಂಡು ಅನಾಸಕ್ತನಾಗಿ ಸಮಸ್ತ ಇಂದ್ರಿಯಗಳ ಮೂಲಕ ಕರ್ಮಯೋಗವನ್ನು ಆಚ–ರಣೆ ಮಾಡಿದರೆ ಆತ್ಮ ಶ್ರೇಷ್ಠತೆಯನ್ನು ಪಡೆಯಬಹುದಾಗಿದೆ ಎಂದು ಖ್ಯಾತ ಜ್ಯೋತಿಷ್ಯ ಶಾಸ್ತ್ರ ಪರಿಣಿತರಾದ ವೇ. ವಸಂತಬಟ್ ಜೋಶಿ ಅವರು ನುಡಿದರು.

ಶುಕ್ರವಾರರಂದು ಸ್ಥಳೀಯ ಶ್ರೀ ಮದ್ ಭಗವದ್ಗೀತಾ ಸೇವಾ ಸಮಿತಿ ವತಿಯಿಂದ ಶ್ರೀ ಕೃಷ್ಣ ಮಂದಿರದಲ್ಲಿ ಏರ್ಪಡಿಸಲಾದ 53ನೇ ವರ್ಷದ ಗೀತಾ ಪ್ರವಚನದ 3ನೇ ದಿನದಂದು ಪ್ರವಚನ ಮುಂದುವರೆಸಿ ಮಾತನಾಡುತ್ತಿದ್ದ ಶ್ರೀಗಳು ಶ್ರೀಕೃಷ್ಣ ಪರಮಾತ್ಮನು ಅರ್ಜುನನಿಗೆ ಉಪದೇಶ ನೀಡಿದ ಮಾತುಗಳನ್ನು ವಿವ–ರಿಸಿದ ಶ್ರೀಗಳು ಮೊದಲು ಇಂದ್ರಿಯಗಳನ್ನು ವಶ ಪಡಿಸಿಕೊಂಡರೆ ಜ್ಞಾನ ಮತ್ತು ವಿಜ್ಞಾನ ಎಂಬವುಗಳು ತಮ್ಮ ಕಾಯಕ ಮಾಡುತ್ತವೆ ಮಹಾ ಪಾಪಿಯಾದ ಕಾಮವನ್ನು ನಾಶ ಪಡಿಸಿಕೊಳ್ಳಬೇಕೆಂದು ಅರ್ಜುನನಿಗೆ ಶ್ರೀಕೃಷ್ಣ ಪರಮಾತ್ಮನು ತಿಳಿ ಹೇಳಿದ್ದನೆಂದರು. ಅತ್ಯಂತ ಶ್ರೇಷ್ಠವಾದ ಆತ್ಮವನ್ನು ಅರೀತುಕೊಂಡು ನಡೆಯಬೇಕು ಯಾಕೆಂದರೆ ಅರ್ಜುನ ನೀನು ನನ್ನ ಭಕ್ತನೂ ಆಗಿದ್ದೀ ಅಷ್ಟೆ ಅಲ್ಲಾ ಮಿತ್ರನು ಆಗಿದ್ದೀ ಕಾರಣ ಉತ್ತಮವಾದ ಜ್ಞಾನವನ್ನು ನಿನಗೆ ಕರುಣಿಸಿದ್ದೇನೆ ಯಾರು ಯಾವುದನ್ನು ಇಚ್ಚಿಸದೇ ತಾನೇ ತಾನಾಗಿ ಪದಾರ್ಥದಲ್ಲಿ ಸಂತೃಪ್ತನಾಗಿರುತ್ತಾನೋ ಆತ ಎಲ್ಲ ಕಾರ್ಯಗಳಲ್ಲಿ ಯಶಸ್ವಿಗೊಳಿಸುತ್ತಾನೆ ಕಾರಣ ಅರ್ಜುನನೆ ತತ್ವದರ್ಶಿಯಾದ ನೀನು ಜ್ಞಾನಿಗಳ ಕಡೆಗೆ ಹೋಗಿ ಸಾಧನೆ ಮಾಡಿಕೊಳ್ಳುವ ಕುರಿತು ಹಾಗೂ ತಾಳ್ಮೆ ಎನ್ನುವದನ್ನು ಗ್ರಹಿಸಿಕೊಳ್ಳುವ ಶಕ್ತಿ ಹೆಚ್ಚಿಸಿಕೊಳ್ಳುತ್ತಾ ಸಾಗಿದರೆ ಉತ್ತಮ ಜ್ಞಾನ ಪ್ರಾಪ್ತಿಯಾಗುತ್ತದೆ ಅಲ್ಲದೇ ನೀನು ಯುದ್ದಕ್ಕೆ ಸಿದ್ದನಾದರೆ ಗೆಲವು ಕೂಡಾ ಪ್ರಾಪ್ತಿಯಾಗುತ್ತದೆ ಎಂಬ ಸಂದೇಶವನ್ನು ಶ್ರೀಕೃಷ್ಣ ಪರಮಾತ್ಮ ಅರ್ಜುನನಿಗೆ ನೀಡಿದ್ದನೆಂದು ಜೋಶಿ ಅವರು ಭಹು ಮಾರ್ಮಿಕವಾಗಿ ವಿವರಿಸಿದರು.

ಕಾರ್ಯಕ್ರಮದ ಮೊದಲಿಗೆ ಮುಂಜಾನೆ ಶ್ರೀ ಕೃಷ್ಣ ಪರಮಾತ್ಮನ ಮಹಾಮೂರ್ತಿಗೆ ಮಹಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮವನ್ನು ವೇ.ಗುಂಡಬಟ್ ಜೋಶಿ ಅವರು ನೆರವೇ–ರಿಸಿದರು. ಈ ಸಮಯದಲ್ಲಿ ವೇ.ವೆಂಕಟೇಶ ಗ್ರಾಂಪೊರೊಹಿತ, ಶ್ರೀಧರ ಗ್ರಾಂಪೊರೊಹಿತ, ಹಾಗೂ ಶ್ರೀಮತಿ ಶಾಂತಾಬಾಯಿ ನೂಲಿಕರ, ಡಾ.ಬಿ.ಎಸ್.ಯಾದವಾಡ, ಶ್ರೀಮತಿ ಶೋಭಾ ಸುಭೇದಾರ, ಮಲ್ಲಯ್ಯ ಗೊಟಗುಣಕಿ, ಗುರು ಕುಲಕರ್ಣಿ, ಎಸ್.ಎಂ.ಪಾಲ್ಕಿ, ಘನಶಾಮ ಚವ್ಹಾಣ, ರವಿ ಕುಲಕರ್ಣಿ, ಮಾಣಿಕರಾವ್ ಕುಲಕರ್ಣಿ, ಲಕ್ಷ್ಮೀಬಾಯಿ ದೇಶಪಾಂಡೆ, ಬೋರಮ್ಮ ಕುಂಭಾರ, ನಿರ್ಮಲಾ ಕುಲಕರ್ಣಿ, ನಳನಿ ಯಾದವಾಡ, ಶಶಿಕಲಾ ಕುಲಕರ್ಣಿ, ರೇಖಾ ನಾಡಿಗೇರ, ಸೀಮಾ ಚವ್ಹಾಣ, ಜಯಶ್ರೀ ಘಾವಡೆ, ಸಂಜೀವ ಗ್ರಾಂಪೋರೊಹಿತ, ಡಾ.ಜಿ.ಎಂ. ಘೀವಾರಿ, ನಿಂಗಣ್ಣ ಬ್ಯಾಕೋಡ, ಭೀಮರಾವ್ ಕುಲಕರ್ಣಿ, ನಿಂಗೋಜಿ ಕುಲಕರ್ಣಿ, ಮೊದಲಾದವರು ಇದ್ದರು. ಈರಣ್ಣ ಕಲ್ಬುರ್ಗಿ ನಿರೂಪಿಸಿದರು.

# ರಾಮದುರ್ಗಃಕುಳ್ಳೂರ ಗ್ರಾಮದಲ್ಲಿಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಪುನಶ್ಚೇತನಗೊಳಿಸಿದ ಕರೆಅನಾವರಣ

ರಾಮದುರ್ಗ : ತಾಲೂಕಿನ ಕುಳ್ಳೂರ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ನೇತೃತ್ವ ಹಾಗೂ ಸ್ಥಳೀಯ ಉದಪುಡಿಗ್ರಾಮ ಪಂಚಾಯತಿ ಸಂಯುಕ್ತಆಶ್ರಯದಲ್ಲಿ ಸಂಸ್ಥೆ ರಚಿಸಿದ ಕುಳ್ಳೂರ ಕೆರೆಅಭಿವೃದ್ಧಿ ಸಮಿತಿಯಆಶ್ರಯದಲ್ಲಿ ನಮ್ಮೂರು ನಮ್ಮಕೆರೆಕಾರ್ಯಕ್ರಮದಲ್ಲಿಅಡಿಯಲ್ಲಿ ಪುನಶ್ಚೇತನಗೊಳಿಸಲಾದ 765ನೇ ಕೆರೆ ನಾಮಫಲಕಅನಾವರಣ ಹಾಗೂ ಕೆರೆ ಹಸ್ತಾಂತರಕಾರ್ಯಕ್ರಮವನ್ನು ವಿಧಾನಸಭೆ ಮುಖ್ಯ ಸಚೇತಕ ಹಾಗೂ ಶಾಸಕ ಅಶೋಕ ಪಟ್ಟಣ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಅಶೋಕ ಪಟ್ಟಣ ಧರ್ಮಸ್ಥಳಗ್ರಾಮಾಭಿವೃದ್ಧಿ ಸಂಸ್ಥೆಯವರು ಮಹಿಳೆಯರನ್ನು ಒಂದುಗೂಡಿಸಿ, ಗಾಂಧಿಜೀಯವರ ಕನಸು ನನಸು ಮಾಡಲುಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಸಹಕಾರ ನೀಡುತ್ತಿದ್ದಾರೆ.ಅವರ ಕಾರ್ಯಗಳು ಸಾಮಾಜಿಕ ಮನ್ನಣೆ ಪಡೆದುಕೊಂಡಿವೆ. ಜನತೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಮಾಡುತ್ತಿರುವಕೆರೆಅಭಿವೃದ್ಧಿಕಾರ್ಯ ಶ್ಲಾಘನೀಯ. ರಾಜ್ಯ ಸರಕಾರವೂಕೆರೆ ತುಂಬಿಸಿ, ಜನ–ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಿ, ಅಂತರ್ಜಲ ಹೆಚ್ಚಿಸುವ ಮಹತ್ವಕಾಂಕ್ಷಿಯೋಜನೆಗೆ ಮುಂದಾಗಿದೆ. ತಾಲೂಕಿನಲ್ಲಿರುವ ಕೆರೆಗಳನ್ನು ತುಂಬಿಸಲು ಸರಕಾರದಿಂದಅನುದಾನ ಮಂಜೂರು ಮಾಡಿಸಲು ಶ್ರಮಿಸುತ್ತೇನೆ–ಎಂದುಇದೇ ಸಂದರ್ಭದಲ್ಲಿ ಭರವಸೆ ನೀಡಿದರು.



ಧರ್ಮಸ್ಥಳ ಸಂಸ್ಥೆಯಧಾರವಾಡ ಪ್ರಾದೇಶಿಕ ನಿರ್ದೇಶಕಿ ದಾಯಾಶೀಲ, ಗ್ರಾಮಸ್ಥರಿಗೆಕೆರೆ ಹಸ್ತಾಂತರಿಸಿ, ಅದರ ಸದ್ಬಳಕೆ ಮಾಡಿಕೊಂಡು ಸಂಸ್ಥೆಯ ಶ್ರಮಕ್ಕೆ ಪ್ರತಿಫಲ ನೀಡಬೇಕುಎಂದರು.

ಕಾರ್ಯಕ್ರಮ ಸಾನಿಧ್ಯ ವಹಿಸಿ, ಕುಳ್ಳೂರ ಶಿವಯೋಗೀಶ್ವರ ಕಲ್ಮಠದ ಬಸವಾನಂದ ಭಾರತಿಸ್ವಾಮೀಜಿ ಆಶೀರ್ವಚನ ನೀಡಿದರು. ಉದಪುಡಿಗ್ರಾ.ಪಂ ಅಧ್ಯಕ್ಷೆ ಶಬಾನಾಬೇಗಂ ಖಾಜಿಕಾರ್ಯಕ್ರಮದಅಧ್ಯಕ್ಷತೆ ವಹಿಸಿದ್ದರು.


ಈ ಸಂದರ್ಭದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಜಿಲ್ಲಾ ನಿರ್ದೇಶಕ–ಎಚ್.ಆರ್.ಲವಕುಮಾರ, ಕೆರೆಅಭಿವೃದ್ಧಿ ಸಮಿತಿಯಅಧ್ಯಕ್ಷನಿಂಗಪ್ಪ ಬಳಿಗೇರ, ಯುವ ಮುಖಂಡ ಪ್ರಶಾಂತಯಾದವಾಡ, ಬಿ.ಎಸ್. ಹಲಗತ್ತಿ, ಕೆ.ಚ್. ಹಿರೇಹನಮನವರ, ಎಸ್. ಕೆ. ಬಾಲನ್ನವರ, ಜಿ.ಎಂ. ಪಾಟೀಲ, ಗ್ರಾ.ಪಂ ಉಪಾಧ್ಯಕ್ಷೆ ಶೋಭಾ ಮಾದರ, ಬಿ.ಎಸ್. ಪಾಟೀಲ, ಜಿಲ್ಲಾಜನಜಾಗೃತಿ ವೇದಿಕೆ ನಿಕಟಪೂರ್ವಅಧ್ಯಕ್ಷ ಅಶೋಕ ಕುಲಗೋಡ, ಸದಸ್ಯ ಜಿ.ಬಿ. ರಂಗನಗೌಡ್ರ, ಕೆರೆಅಭಿವೃದ್ಧಿ ಸಮಿತಿಯಉಪಾಧ್ಯಕ್ಷರಾಜು ಮರಲಿಂಗನವರ, ರಮೇಶಜಲಗೇರಿ, ಶಿವು ಬಳಿಗೇರ, ಕೃಷಿ ಅಧಿಕಾರಿ ಪ್ರದೀಪಗಾಂವ್‌ಕರ ಸೇರಿದಂತೆಇತರ–ರಿದ್ದರು.

ತಾಲೂಕುಯೋಜನಾಧಿಕಾರಿ ಸಚಿನ್ ಸ್ವಾಗತಿಸಿದರು. ತಾಲೂಕು ವಿಚಕ್ಷಣಾಧಿಕಾರಿ ಕೇಶವ ಕಾರ್ಯಕ್ರಮ ನಿರೂಪಿಸಿದರು. ವಲಯ ಮೇಲ್ವಿಚಾರಕಗಿರೀಶ ವಂದಿಸಿದರು.

# ಪತ್ರಕರ್ತ ಜಗನ್ನಾಥರಾವ ಟಂಕಸಾಲಿ ೨೪ ನೇ ಸ್ಮರಣಾರ್ಥ ಪ್ರತಿಷ್ಠಾನ ಪರ ವಿವಿಧ ಕ್ಷೇತ್ರದ ಗಣ್ಯರಿಗೆ ಪ್ರಶಸ್ತಿ ಪುರಸ್ಕಾರ

ಮುಧೋಳ: ಐದು ದಶಕಗಳ ಕಾಲ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿ ಹಾಗೂ ಹಿಂದಿ ಪ್ರಚಾರಕರಾಗಿ ಕಾರ್ಯನಿರ್ವಹಿಸಿ ರನ್ನ ನಾಡಿನ ಹೆಮ್ಮೆಯ ಪತ್ರಕರ್ತ ದಿ. ಜಗನ್ನಾಥರಾವ ಟಂಕಸಾಲಿ ಅವರ 24 ನೇ ಸ್ಮರಣೆ ಕಾರ್ಯಕ್ರಮ ಡಿ.16 ರಂದು ಆಯೋಜಿಸಲಾಗಿದೆ.

ಕನ್ನಡ, ಹಿಂದಿ, ಮರಾಠಿ ಭಾಷೆಗಳಿಗೆ ಪತ್ರಿಕೆಗಳ ವರದಿಗಾರರಾಗಿ ಅಘಾದವಾದ ರನ್ನ ನಾಡಿನ ಜನ ಸೇವೆಯನ್ನು ಯಾರೂ ಮರೆಯುವಂತಿಲ್ಲ. ನಗರದಲ್ಲಿ ಆಗ ನಡೆಯುತ್ತಿದ್ದ ಆಕ್ರಮ ಚಟುವಟಿಕೆಗಳು, ಮಟ್ಕಾಗಳ ಜಾಲ ಕುರಿತು ಬರೆದಾಗ . ಅವರಿಗೆ ಸಾಕಷ್ಟು ಬೆದ–ರಿಕೆಗಳನ್ನು ಹಾಕಿದರೂ ಹೆದರದೇ ನಿರ್ಭಯಿವಾಗಿ ಬರೆಯುತ್ತಿದ್ದ ಇವರು ಜನರಿಗೆ ಉಪಯುಕ್ತವಾಗುವ ಸುದ್ದಿಗಳು, ಲೇಖನಗಳನ್ನು ಬರೆದು ಸರಕಾರವನ್ನು ಎಚ್ಚರಿಸುವ ಪ್ರಯತ್ನ ಮಾಡುತ್ತಿದ್ದರು ರಾಷ್ಟ್ರೀಯ ಏಕತೆಗೆ ಸಾರುವ ಉದ್ದೇಶಕ್ಕಾಗಿ ಮುಧೋಳ ಹಿಂದಿ ಪ್ರಚಾರ ಸಂಘವನ್ನು ಸ್ಥಾಪಿಸಿ ಚಟುವಟಿ–ಕೆಗಳನ್ನು ನಡೆಸಿದರು. ಸಾಹಿತ್ಯ, ಕವಿತೆಗಳತ್ತ ಆಸಕ್ತಿ ಬೆಳೆಸಿಕೊಂಡಿದ್ದರು. ತಮ್ಮ 61 ನೇ ವಯಸ್ಸಿನಲ್ಲಿ



ರಾಜ್ಯ ಸರಕಾರ ಗೌರವಿಸಿತು. 1970.ರಲ್ಲಿ ಶ್ರೇಷ್ಟ ಹಿಂದಿ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿತು. ಪತ್ರಕರ್ತರು, ಶಿಕ್ಷಕರು, ಅಭಿಮಾನಿಗಳು ಇವರ ಅಪಾರ ಶಿಷ್ಯ ಬಳಗವನ್ನು ಹೊಂದಿದವರಾಗಿದ್ದರು, ಸತತ 2.ದಶಕಗಳ ಕಾಲ ಸಾರ್ವಜನಿಕ ವಾಚನಾಲಯದ ಅಧ್ಯಕ್ಷರಾಗಿದ್ದರು. 1997 ರಲ್ಲಿ ಇಹಲೋಕ ತ್ಯಜಿಸಿದರು.


ಕಳೆದ 24 ವರ್ಷಗಳಿಂದಲೂ ಜಗನ್ನಾಥ–ರಾವ ಟಂಕಸಾಲಿ ಪ್ರತಿಷ್ಠಾನ ಡಾ.ರವಿ ಕಲಘಟಗಿ ಹಾಗು ಹಿರಿಯ ಗಾಂಧಿವಾದಿ ಆಗಿದ್ದ ದಿ.ತಮ್ಮಣ್ಣಪ್ಪ ಬುದ್ನಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಪ್ರತಿಷ್ಠಾನದಿಂದ ಸಾಕಷ್ಟು ಜನಪಯೋಗಿ ಕಾರ್ಯಗಳನ್ನು ಮಾಡುತ್ತಾ ಬಂದಿದ್ದಾರೆ. ಪ್ರತಿ ವರ್ಷ ಈ ಪ್ರತಿಷ್ಠಾನದಿಂದ ಪ್ರತಿಷ್ಠಿತ ಪತ್ರಕರ್ತರಿಗೆ ಹಾಗೂ ಹಿಂದಿ ಬರಹಗಾರರು, ಶಿಕ್ಷಕರಿಗೆ ಸನ್ಮಾನ ಮಾಡಿ ಗೌರವಿಸುತ್ತಾ ಬಂದಿದ್ದಾರೆ.

ಪುರಸ್ಕಾರ : ಪ್ರತಿ ವರ್ಷ ನೀಡುವ ಟಂಕಸಾಲಿ ಪುರಸ್ಕಾರಕ್ಕೆ ಬಾಗಲಕೋಟೆಯ ಹಿರಿಯ ಪತ್ರಕರ್ತ ಈಶ್ವರ ಶೆಟ್ಟರ್, ಮುಧೋಳದ ಪತ್ರಕರ್ತ ಬಿ.ಎಚ್.ಬೀಳಗಿ ಹಾಗೂ ಹಿಂದಿ ಶಿಕ್ಷಕರಾದ ಕಲಘಟಗಿಯ ಕೇಶವ ಕೊಂಗಿ, ಬೀಳಗಿಯ ವಿದ್ಯಾ ಮಹೇಂದ್ರಕರ ಆಯ್ಕೆಯಾಗಿದ್ದಾರೆ ಎಂದು ಪ್ರತಿಷ್ಠಾನದ ಅಧ್ಯಕ್ಷ ರಾಮಕೃಷ್ಣ ಬುದ್ನಿ ಹಾಗೂ ಕಾರ್ಯದರ್ಶಿ ಟಿ.ಕೆ. ಹಂಚಾಟೆ ತಿಳಿಸಿದ್ದಾರೆ.

# ಹನುಮಾನ ಮಾಲಾಧಾರಿಗಳ ಸಂಭ್ರಮದ ರಾಮಾಂಜನೇಯ ಪಲ್ಲಕ್ಕಿ ಉತ್ಸವ

ಬಸವನಬಾಗೇವಾಡಿ, ಡಿ. 13 : ಪಟ್ಟಣದಲ್ಲಿ ವಿಶ್ವಹಿಂದು ಪರಿಷತ್ ಹಾಗೂ ಭಜರಂಗದಳ ನೇತೃತ್ವದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಹನುಮಾಮಾಲಾ ಕಾರ್ಯಕ್ರಮದಂಗವಾಗಿ ಹನುಮ ಮಾಲಾಧಾರಿಗಳಿಂದ ಪ್ರಮುಖ ಬೀದಿಗಳಲ್ಲಿ ರಾಮಾಂಜನೇಯ ಪಲ್ಲಕ್ಕಿ ಉತ್ಸವ ಸಂಭ್ರಮದಿಂದ ಜರುಗಿತು.

ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ವಿಠ್ಠಲ ಮಂದಿರದಲ್ಲಿ ಬೆಳಗ್ಗೆ ಪವನ ಹೋಮ ನೆರವೇರಿಸಿದರು. ನಂತರ ಹನುಮಾನ ದೇವಸ್ಥಾನದಿಂದ ಹನುಮಾನ ಪಲ್ಲಕ್ಕಿ ಉತ್ಸವ, ಬಸವೇಶ್ವರ, ರಾಮ, ಶಿವಾಜಿ, ಹನುಮಾನ ಮೂರ್ತಿಗಳ ಮೆರವಣಿಗೆ ಆರಂಭಗೊಂಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಿತು. ಮೆರವಣಿಗೆಯಲ್ಲಿ ಹನುಮ ಮಾಲಾಧಾರಿಗಳಿಂದ ಅಯೋಧ್ಯಾಪತಿ ಶ್ರೀರಾಮಚಂದ್ರ ಕೀ ಜೈ, ಪವನ ಸುತ ಹನುಮಾನ ಕೀ ಜೈ, ಜೈ ಶ್ರೀ ರಾಮ ಜಯ ಜಯ ಶ್ರೀರಾಮ, ಹರ ಹರ ಮಹಾದೇವ, ಭಾರತ ಮಾತಾ ಕೀ ಜೈ ಘೋಷಣೆ ಕೇಳಿಬಂದವು.



ಮೆರವಣಿಗೆಯಲ್ಲಿ ಧರ್ಮ ಪ್ರಸಾರ ಜಿಲ್ಲಾ ಪ್ರಮುಖ ತಮ್ಮಣ್ಣ ಬಡಿಗೇರ, ವಿರೇಶ ಹಿರೇಮಠ, ಮಹಾದೇವ ಇಟಗಿ, ರಾಹುಲ ಜಗತಾಪ, ರವಿ ಮ್ಯಾಗೇರಿ, ಭಾಗ್ಯವಂತ ಚೌಧರಿ, ಮಂಜುನಾಥ ಮುದೂರ, ಶಿವು ರೇವಡಕರ, ನಿಂಗಪ್ಪ ಬಡಿಗೇರ, ಶಿವಾನಂದ ಬೆಲ್ಲದ, ಪದ್ಮರಾಜ ಒಡೆಯರ, ಅನಿಲ ಚವ್ಹಾಣ, ವಿರೇಶ ಗಬ್ಬೂರ, ಮಲ್ಲು ಕೋಲಕಾರ, ಕಿರಣಿ ಕೋಲಕಾರ, ಮಡು ಈರಕಾರ, ಪರಶು ಒಡೆಯರ, ಸಿದ್ದು ಜಾಡರ, ವಿನೋದ ರಗಟಿ, ನವೀನ ಬೇವನೂರ, ಅಭಿಷೇಕ ಹಂಜಗಿ, ಸಂತೋಷ ಹಿಂಗೋಲಿ, ಆಕಾಶ ಹಂಜಗಿ ಇತರರು ಇದ್ದರು.

# ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ಬೈಕ್ ಮೂಲಕ ಸವಾರಿ

**ಬಸವನಬಾಗೇವಾಡಿ,** ತಾಲೂಕಿನ ಹೂವಿನಹಿಪ್ಪರಗಿ ಗ್ರಾಮದ ಲಕ್ಷ ನುಡಿಮುತ್ತುಗಳನ್ನು ಬರೆದ ಯುವ ಸಾಹಿತಿ ಭೀಮರಾಯ ಹೂಗಾರ ಅವರು ಮಂಡ್ಯದಲ್ಲಿ ಡಿ.20 ರಿಂದ 22 ರವರೆಗೆ ಹಮ್ಮಿಕೊಂಡಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಂಗವಾಗಿ ತಮ್ಮ ಬೈಕ್ ಮೂಲಕ ಡಿ.14 ರಿಂದ ಹೂವಿನಹಿಪ್ಪರಗಿಯಿಂದ ಬೆಳಗ್ಗೆ 7 ಗಂಟೆಗೆ ತುಮಕೂರಿನತ್ತ ಪ್ರಯಾಣ ಬೆಳೆಸಲಿದ್ದಾರೆ.

ಯುವ ಸಾಹಿತಿ ಭೀಮರಾಯ ಹೂಗಾರ



ಶುಕ್ರವಾರ ಸಂಜೆ ಪತ್ರಿಕೆಯೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಅವರು, ಸಮ್ಮೇಳನದಂಗವಾಗಿ ವಿಶ್ವ ಹುಟ್ಟು ಸಾವು ಎಂಬ ಪುಸ್ತಕ ರಚಿಸಿದ್ದೇನೆ.ಡಿ.15 ರಂದು ತುಮಕೂ–ರಿನ ಸಿದ್ದಗಂಗಾ ಮಠದಲ್ಲಿ ಈ ಪುಸ್ತಕವನ್ನು ಸಿದ್ದಗಂಗಾಶ್ರೀಗಳಿಂದ ಬಿಡುಗಡೆ ಗೊಳಿಸಿದ ನಂತರ ಬೆಂಗಳೂರ ಮಾರ್ಗವಾಗಿ ಬೆಂಗಳೂ–ರಿನಲ್ಲಿರುವ ಲೀಲಾವತಿ ಸ್ಮಾರಕ, ಪುನೀತ ರಾಜಕುಮಾರ ಅವರ ಸ್ಮಾರಕಕ್ಕೆ ಭೇಟಿ ನೀಡಿ ಪುಸ್ತಕವನ್ನು ಅರ್ಪಿಸಿದ ನಂತರ ನಟ ಶಿವರಾಜ–ಕುಮಾರ ಅವರಿಗೆ ಪುಸ್ತಕವನ್ನು ನೀಡುತ್ತೇನೆ. ನಂತರ ಕನ್ನಡ ವಾಣಿಜ್ಯ ಚಲನಚಿತ್ರ ಮಂಡಳಿಗೆ ಬಿಡುಗಡೆಗೊಂಡ ಪುಸ್ತಕವನ್ನು ನೀಡಲಾಗುವದು. ಸಮ್ಮೇಳನದಂಗವಾಗಿ ಮಂಡ್ಯದಲ್ಲಿ ಡಿ.17 ರಂದು ಹಮ್ಮಿಕೊಂಡಿರುವ ಮ್ಯಾರಾಥಾನ್ ಓಟದಲ್ಲಿ ಭಾಗವಹಿಸಿದ ನಂತರ ಪುಸ್ತಕ ಪ್ರಚಾರ ಕೈಗೊಳ್ಳುತ್ತೇನೆ. ನಂತರ ಸಮ್ಮೇಳನದಲ್ಲಿ ನಾನು ರಚಿಸಿರುವ ಪುಸ್ತಕಗಳ ಪ್ರಚಾರ, ಮಾರಾಟ ಮಾಡುತ್ತೇನೆ. ಸಮ್ಮೇಳನ ಮುಗಿಸಿ ಬರುವಾಗ ಮೈಸೂರಿನಲ್ಲಿರುವ ನಟ ದಿ.ವಿಷ್ಣುವರ್ಧನ ಸ್ಮಾರಕಕ್ಕೆ ಭೇಟಿ ನೀಡಿ ಹೊಸ ಪುಸ್ತಕ ಪ್ರಚಾರ ಯಾತ್ರೆ ಮುಕ್ತಾಯಗೊಳಿಸುತ್ತೇನೆ ಎಂದರು.

# ಒಳಮೀಸಲಾತಿ ಅನುಷ್ಠಾನಕ್ಕೆ ಆಗ್ರಹಿಸಿ ಮನವಿ ಸಲ್ಲಿಕೆ




ಮುದ್ದೇಬಿಹಾಳ: ಒಳಮೀಸಲಾತಿ ಅನುಷ್ಠಾನಕ್ಕೆ ಆಗ್ರಹಿಸಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ, ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟದ ನೂರಾರು ಪ್ರತಿನಿಧಿಗಳು ಶನಿವಾರ ಪಟ್ಟಣದಲ್ಲಿ ಬೃಹತ್ ತಮಟೆ ಚಳವಳಿ ನಡೆಸಿ ಬಸವೇಶ್ವರ ವೃತ್ತದಲ್ಲಿ ಶಾಸಕ, ಕೆಎಸ್‌ಡಿ ನಿಗಮದ ಅಧ್ಯಕ್ಷ ಸಿ.ಎಸ್.ನಾಡಗೌಡ–ರಿಗೆ ಅಧಿವೇಶನದಲ್ಲಿ ತಮ್ಮ ಪರ ಧ್ವನಿ ಎತ್ತುವಂತೆ ಮನವಿ ಸಲ್ಲಿಸಿದರು.

ದಲಿತ ಸಂಘಟನೆಗಳ ರಾಜ್ಯ ಸಮಿತಿಯ ಪೂರ್ವತೀರ್ಮಾನದಂತೆ ರಾಜ್ಯವ್ಯಾಪಿ ಶಾಸಕರ ಮನೆಗಳ ಎದುರು ತಮಟೆ ಚಳವಳಿ, ಧರಣಿ ನಡೆಸಿ ಮನವಿ ಸಲ್ಲಿಸಲು ತೀರ್ಮಾನಿಸಲಾಗಿತ್ತು. ಆದ–ರೆ ಇಲ್ಲಿನ ಪೊಲೀಸರು ಶಾಸಕರ ಮನೆ ಎದುರು ಧರಣಿಗೆ ಅವಕಾಶ ನೀಡಿರಲಿಲ್ಲ. ಮುಖಂಡರ ಜೊತೆ ಮಾತನಾಡಿ ಮನವಿ ಸ್ವೀಕರಿಸಲು ಶಾಸಕರು ಪ್ರವಾಸಿ ಮಂದಿರಕ್ಕೆ ಬರುವುದಾಗಿ ತಿಳಿಸಿದ್ದು ಅಲ್ಲಿಯೇ ಭೇಟಿಯಾಗುವಂತೆ ಸೂಚಿಸಿದ್ದರು. ಆದ–ರೆ ಪ್ರವಾಸಿ ಮಂದಿರಕ್ಕೆ ಹೋಗಲೊಪ್ಪದ ಮುಖಂಡರು ಶಾಸಕರೇ ಬಸವೇಶ್ವರ ವೃತ್ತಕ್ಕೆ ಬರುವಂತೆ ಒತ್ತಾಯಿಸಿದ್ದರು. ಇದರಿಂದಾಗಿ ಶಾಸಕರು ಪೊಲೀಸ್ ಭದ್ರತೆಯಲ್ಲಿ ಆಗಮಿಸಿ ಮನವಿ ಸ್ವೀಕರಿಸಿದರು.

ಈ ಸಂದರ್ಭ ಜಿಲ್ಲಾ ದೌರ್ಜನ್ಯ ನಿವಾರಣಾ ಸಮಿತಿ ಮಾಜಿ ಸದಸ್ಯ ಬಸವರಾಜ ಪೂಜಾರಿ ಸಿದ್ದಾಪೂರ ಅವರು ಮಾತನಾಡಿ, ಕಳೆದ ಚುನಾವಣೆಯಲ್ಲಿ ತಾವು ಶಾಸಕರಾದರೆ ಒಳಮೀಸಲಾತಿ ಪರ ಧ್ವನಿ ಎತ್ತುವುದಾಗಿ ತಿಳಿಸಿದ್ದನ್ನು ನೆನಪಿಸಿ 40 ವರ್ಷಗಳ ನಮ್ಮ ಬೇಡಿಕೆ ಈಡೇರುವ ಕಾಲ ಹತ್ತಿರವಾಗಿದ್ದರೂ ಸರ್ಕಾರ ಮೀನಮೇಷ ಎಣಿಸುತ್ತಿದೆ. ನಾವು ಬಿಜೆಪಿ ಪರವಾಗಿ ಹೋರಾಟ ನಡೆಸುತ್ತೇವೆ ಎಂದು ಆರೋಪಿಸಲಾಗುತ್ತಿದೆ. ನಮ್ಮ ಈ ಹೋರಾಟ ಪಕ್ಷಾತೀತವಾಗಿದೆ. ಎ.ಎಸ್.ಪಾಟೀಲ ನಡಹಳ್ಳಿಯವರು ಶಾಸಕರಾಗಿದ್ದಾಗ ಇದೇ ವಿಷಯವಾಗಿ ಅವರ ಮನೆಗೂ ಮುತ್ತಿಗೆ ಹಾಕಲಾಗಿತ್ತು. ನಮ್ಮ ಬೇಡಿಕೆ ಕುರಿತು ಸದನದಲ್ಲಿ ಧ್ವನಿ ಎತ್ತಿ ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದರು.

ಶಾಸಕ ನಾಡಗೌಡರು ಮಾತನಾಡಿ ಸಿಎಂ ಸಿದ್ದರಾಮಯ್ಯನವರು ಒಳಮೀಸಲಾತಿ ಪರ ಇದ್ದಾರೆ. ಸುಪ್ರೀಂಕೋರ್ಟ್ ಆದೇಶದಂತೆ ಒಳಮೀಸಲಾತಿ ಜನಸಂಖ್ಯೆ ಆಧಾ–ರಿತವಾಗಿರುವುದರಿಂದ ಇದರ ಅಧ್ಯಯನಕ್ಕೆ ಆಯೋಗ ರಚಿಸಿ, 2025ರ ಫೆಬ್ರವ–ರಿಯೊಳಗೆ ವರದಿ ನೀಡಲು ತಿಳಿಸಲಾಗಿದೆ. ಮಾರ್ಚ ಬಜೆಟ್ ಮಂಡನೆ ಸಂದರ್ಭ ಇದರ ಬಗ್ಗೆ ಹೆಚ್ಚಿನ ಚರ್ಚೆ ನಡೆದು ತೀರ್ಮಾನ ಹೊರಬರುತ್ತದೆ. ಶಾಸಕರ ಪ್ರಶ್ನೆಗಳನ್ನು ಲಾಟರಿ ಮೂಲಕ ಎತ್ತುವುದ–ರಿಂದ ಒಳಮೀಸಲಾತಿ ಕುರಿತ ನನ್ನ ಪ್ರಶ್ನೆ ಅಧಿವೇಶನದಲ್ಲಿ ಬಂದಿಲ್ಲ. ಸದನ ಸುಲಲಿತವಾಗಿ ನಡೆದಲ್ಲಿ ಶೂನ್ಯ ವೇಳೆಯಲ್ಲಿ ಅವಕಾಶ ಸಿಕ್ಕರೆ ಧ್ವನಿ ಎತ್ತುತ್ತೇನೆ. ನಾನು ಸಚಿವನಲ್ಲದ ಕಾರಣ ಕ್ಯಾಬಿನೆಟ್‌ನಲ್ಲಿ ಭಾಗವಹಿಸಲಾಗೊಲ್ಲ. ಆದರೆ ಸರ್ಕಾರಕ್ಕೆ ಸಲಹೆ ನೀಡಬಲ್ಲೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವ ಎಚ್.ಸಿ.ಮಹದೇವಪ್ಪ ಸೇರಿ ಹಲವರು ಪಕ್ಷಾತೀತವಾಗಿ ಒಳಮೀಸಲಾತಿ ಅನುಷ್ಠಾನ ಪರ ಇದ್ದಾರೆ. ಮುಂದಿನ ದಿನಗಳಲ್ಲಿ ಖಂಡಿತವಾಗಿಯೂ ಬೇಡಿಕೆ ಈಡೇರುತ್ತದೆ ಎಂದು ಭರವಸೆ ನೀಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಶಾಸಕರೊಂದಿಗೆ ಆಗಮಿಸಿದ್ದರು. ದಲಿತ ಸಂಘಟನೆಗಳ ಮುಖಂಡರಾದ ಬಾಲಚಂದ್ರ ಹುಲ್ಲೂರ, ಮಂಜುನಾಥ ಚಲವಾದಿ, ಸುಭಾಷ ಕಟ್ಟಿಮನಿ, ಶ್ರೀನಾಥ ಭೈರವಾಡಗಿ, ಮುದಕಪ್ಪ ಗರಸಂಗಿ, ಆನಂದ ಮುದೂರ, ರಮೇಶ ಕಂದಗನೂರ, ಶಿವು ನಾಲತವಾಡ, ಲಕ್ಷ್ಮಣ ಕಾಳಗಿ, ರಾಮು ತಂಬೂರಿ, ರಾವುತಪ್ಪ ಕಾಳಗಿ, ದೇವೇಂದ್ರ ಡೂಂಕಮಡು, ಮಹಾಂತೇಶ ಕಾಳಗಿ, ಬೆಳೆಪ್ಪ ತಳವಾರ, ಮಾರುತಿ ಸಿದ್ದಾಪೂರ, ಮುದಕಪ್ಪ ಗರಸಂಗಿ, ರಮೇಶ ಕಂದಗನೂರ, ಮುತ್ತು ಅಮರಗೋಳ, ಲಕ್ಷ ?ಮಣ ಕಾಳಗಿ, ರಾವುತಪ್ಪ ಕಾಳಗಿ, ದೇವೇಂದ್ರ ಡೊಂಕಮಡು ಸೇರಿ ವಿವಿಧೆಡೆಯಿಂದ ಆಗಮಿಸಿದ್ದ ಸಮುದಾಯದ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಸಿಪಿಐ ಗುರುಶಾಂತ ದಾಶ್ಯಾಳ, ಪಿಎಸ್ಐ ಸಂಜಯ ತಿಪ್ಪರೆಡ್ಡಿ ನೇತೃತ್ವದಲ್ಲಿ ಇತರೆ ಠಾಣೆಗಳಿಂದ ಆಗಮಿಸಿದ್ದ ಪೊಲೀಸರು ಬಂದೋಬಸ್ತ್ ಏರ್ಪಡಿಸಿದ್ದರು.

## ಮಲ್ಲಾಪೂರ ಅರ್ಬನ್ ಬ್ಯಾಂಕ ಅಧ್ಯಕ್ಷ- ಉಪಾಧ್ಯಕ್ಷ ನಿರ್ದೇಶಕರಿಗೆ ಶುಭ ಕೋರಿದ ಮಲ್ಲಿಕಾರ್ಜುನ ಶ್ರೀಗಳು



ಘಟಪ್ರಭಾ. ಇಲ್ಲಿನ ಪ್ರತಿಷ್ಠಿತ ದಿ. ಮಲ್ಲಾಪೂರ ಅರ್ಬನ್ ಕೋ ಆಪ ಕ್ರೆಡಿಟ್ ಬ್ಯಾಂಕ ಲಿ. ಘಟಪ್ರಭಾ ಇದರ ಅಧ್ಯಕ್ಷರಾಗಿ ರಮೇಶ ಮಲ್ಲಪ್ಪ ತುಕ್ಕಾನಟ್ಟಿ ಹಾಗೂ ಉಪಾಧ್ಯಕ್ಷರಾಗಿ ಹೊನ್ನಜ್ಜ ಚ. ಕೋಳಿ ಇವರು ಎರಡನೇ ಭಾರಿಗೆ ಅವಿರೋಧವಾಗಿ ಆಯ್ಕೆಯಾದ ಪ್ರಯುಕ್ತ ಇಲ್ಲಿನ ಪ್ರತಿಷ್ಠಿತ ಕೆಂಪಯ್ಯ ಸ್ವಾಮಿ ಗುಬ್ಬಲಗುಡ್ಡ ಮಠದ ಮ ನಿ ಪ್ರ ಸ್ವ ಮಲ್ಲಿಕಾರ್ಜುನ ಮಹಾಸ್ವಾಮಿಗಳನ್ನು ಬೆಟ್ಟಿಯಾಗಿ ಆಶೀರ್ವಾದ ಪಡೆದರು.

ಎಲ್ಲರಿಗೂ ಶುಭ ಕೋರಿ ಶ್ರೀ ಮಲ್ಲಿಕಾರ್ಜುನ. ಮಹಾಸ್ವಾಮಿಗಳು ಮಾತನಾಡಿ ಸಹಕಾರ ಕ್ಷೇತ್ರದಿಂದ ಜನರ, ರೈತರ ಅಭಿವೃದ್ಧಿ ಸಾಧ್ಯ ಬ್ಯಾಂಕಿನ, ಗ್ರಾಹಕರ ಅಭಿವೃದ್ಧಿಗೆ ಕೆಲಸ ಮಾಡಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷ ರಮೇಶ ತುಕ್ಕಾನಟ್ಟಿ ಮಾತನಾಡಿ ಬ್ಯಾಂಕಿನ ಸರ್ವಾಂಗಿನ ಅಭಿವೃದ್ಧಿಗೆ ಆಡಳಿತ ಮಂಡಳಿಯ ಸಹಕಾರದೊಂದಿಗೆ ಶ್ರಮಿಸುವದಾಗಿ ಹೇಳಿದರು. ಈ ಸಂದರ್ಭದಲ್ಲಿ ಆಡಳಿತ ಮಂಡಳಿ ನಿರ್ದೇಶಕರಾದ ಸುಭಾಸಚಂದ್ರ ಶೆ. ಕಾಡದವರ, ರಾಜಶೇಖರ ಗೊ. ತುಕ್ಕಾನಟ್ಟಿ, ಮಹಾದೇವ ಕಾ. ಬಟನೂರೆ, ಶ್ರೀಶೈಲ ಮ. ಮಗದುಮ್ಮ, ಸತೀಶ ಬೀ ಹತ್ತರವಾಟ, ಮಹಾವೀರ ಕಾ ಹುಲ್ಲೋಳಿ, ಶ್ರೀಮತಿ ರೇವಕ್ಕ ಶಂ. ಕಮತ, ಶ್ರೀಮತಿ ಶೃತಿ ಮಂ. ಮಟಗಾರ, ಆನಂದ ದುಂ. ಕಬಾಡಗಿ, ಕಲ್ಲೋಳೆಪ್ಪಾ ಹ. ಜಮಖಂಡಿ, ರಾಮಪ್ಪ ಬ. ನಾಯಿಕ, ವ್ಯವಸ್ಥಾಪಕರಾದ ರಮೇಶ ಮುರಗೋಡ ಸೇರಿದಂತೆ ಅನೇಕರು ಇದ್ದರು.

# ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿಗೆ ಚಾಲನೆ



ರಾಯಬಾಗ: ಮತಕ್ಷೇತ್ರದ ಎಲ್ಲ ತೋಟಪಟ್ಟಿಗಳ ರಸ್ತೆಗಳನ್ನು ಸುಧಾರಿಸುವುದರಿಂದ ರೈತರಿಗೆ ಅನುಕೂಲವಾಗಲಿದೆ ಎಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶನಿವಾರ ತಾಲೂಕಿನ ದಿಗ್ಗೆವಾಡಿ ಗ್ರಾಮದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ 5 ಲಕ್ಷ ರೂ. ಅನುದಾನದಲ್ಲಿ ದಿಗ್ಗೆವಾಡಿ–ಜಲಾಲಪುರ ಮುಖ್ಯ ರಸ್ತೆಯಿಂದ ಗಂಗಾಧರ ಮೈಶಾಳೆ ತೋಟದ ವರೆಗೆ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಬಾವನಸೌಂದತ್ತಿ ಗ್ರಾಮದ ಸವದತ್ತಿವಾಡಿಯಲ್ಲಿ ಜಿ.ಪಂ. ಇಲಾಖೆಯಡಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಂಜೂರಾದ 20 ಲಕ್ಷ ರೂ. ಅನುದಾನದಲ್ಲಿ ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾ–ರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಅವಶ್ಯವಿರುವ ಎಲ್ಲ ಕಡೆಗಳಲ್ಲಿ ಹೊಸ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ತಂದು ಇನ್ನುಳಿದ ಎಲ್ಲ ಕೆಲಸಗಳನ್ನು ಮಾಡಿಸಲಾಗುವುದು ಎಂದರು.

ಜಿ.ಪಂ.ಎಇಇ ರಾಜೇಶ ಡಂಗ, ಬಾವನಸೌಂದತ್ತಿ ಗ್ರಾ.ಪಂ. ಅಧ್ಯಕ್ಷ ರಾಮಚಂದ್ರ ಕಾಟೆ, ಉಪಾಧ್ಯಕ್ಷ ಅಝೂದ ತಾಶಿವಾಲೆ, ಪಿಡಿಒ ಸಂಗಮೇಶ ನ್ಯಾಮಗೌಡ, ಅನೀಲ ಹಂಜೆ, ಮಹೇಶ ಕರಮಡಿ, ಧರೆಪ್ಪಾ ಮಿರ್ಜೆ, ಅಪ್ಪಾಸಾಬ ಮೈಶಾಳೆ, ಪ್ರಕಾಶ ಮಿರ್ಜೆ, ಸಂಜೀವ ಮೈಶಾಳೆ, ಗಂಗಾಧರ ಮೈಶಾಳೆ, ಮುಸಾ ಜಮಾದಾರ, ಬೋಲಾ ಕಡಾಳೆ, ಪ್ರಕಾಶ ಸಗರೆ, ಶೇಖರ ಕಾಂಬಳೆ, ಮಹಾದೇವ ಕೋಳಿ, ಚಿದಾನಂದ ಸಲಗರೆ, ಅಶೋಕ ಮೈಶಾಳೆ, ವಜ್ರಮುನಿ ಕಾಂಬಳೆ, ಗಜೇಂದ್ರ ಜಲಾಲಪುರೆ, ಅಣ್ಣಪ್ಪ ಖೋತ, ಜಿನ್ನಪ್ಪ ಚಂಪೂ, ರಾಜು ಪಾಟೀಲ, ಶಾಂತಾ ಕಟ್ಟಿಮನಿ ಸೇರಿ ಅನೇಕರು ಇದ್ದರು.

# ಬಡ ವಿದ್ಯಾರ್ಥಿನಿಗೆ ಆರ್ಥಿಕ ನೆರವು ನೀಡಿ ಮಾನವೀಯತೆ ಮೆರೆದ ಮಲಗೌಡ ಪಾಟೀಲ



ಬೆಳಗಾವಿ: ತಂದೆಯನ್ನು ಕಳೆದುಕೊಂಡು ವಿದ್ಯಾಭ್ಯಾಸಕ್ಕೂ ಪರಿತಪಿಸುತ್ತಿದ್ದ ಪ್ರತಿಭಾನ್ವಿತ ವಿದ್ಯಾರ್ಥಿನಿ ಸಿಮ್ರನ್ ಆನಂದ ಕೋಲಕಾರಗೆ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರ ಆಪ್ತ ಸಹಾಯಕ ಮಲಗೌಡ ಪಾಟೀಲ ಆರ್ಥಿಕ ನೆರವು ನೀಡಿ ಮಾನವೀಯತೆ ಮೆರೆದಿದ್ದಾರೆ. ಮತ್ತು ಆ ಬಾಲಕಿಯ ಶೈಕ್ಷಣಿಕ ವಾಗಿ ದತ್ತು ತೆಗೆದುಕೊಂಡು ಕುಟುಂಬಕ್ಕೆ ಧೈರ್ಯ ತುಂಬಿದ್ದಾರೆ.

ತಾಲೂಕಿನ ಅಗಸಿಗೆ ಗ್ರಾಮದ ಅಂಬೇಡ್ಕರ ಗಲ್ಲಿ ನಿವಾಸಿ ಆನಂದ ನರಸು ಕೋಲಕಾರ ವರ್ಷದ ಹಿಂದೆ ಅಕಾಲಿಕ ನಿಧನ ಹೊಂದಿದ್ದರು. ಆನಂದ ಅವರ ಮೂವರು ಮಕ್ಕಳಲ್ಲಿ ಸಿಮ್ರನ್ ಪ್ರತಿಭಾನ್ವಿತ ವಿದ್ಯಾರ್ಥಿನಿ, ಕಡು ಬಡತನದಲ್ಲಿರುವ ಸಿಮ್ರನ್ ಓದಿಗೆ ಸಮಸ್ಯೆ ಎದುರಾಗಿದ್ದು, ಇದನ್ನು ಮನಗಂಡ ಮಲಗೌಡ ಪಾಟೀಲ ಅವರು ಆ ವಿದ್ಯಾರ್ಥಿನಿಯ ಶಿಕ್ಷಣ ನಿಲ್ಲಬಾರದು ಎಂಬ ಉದ್ದೇಶದಿಂದ ಖುದ್ದಾಗಿ ಮನೆಗೆ ಭೇಟಿ ನೀಡಿದ ಮಲಗೌಡ ಪಾಟೀಲ ಆರ್ಥಿಕ ಸಹಾಯ ಮಾಡಿದ್ದಾರೆ. ಜತೆಗೆ ಮೂವರು ಮಕ್ಕಳ ಓದು ಮುಗಿಯುವವರೆಗೂ ಆರ್ಥಿಕ ನೆರವಿನ ಭರವಸೆ ನೀಡಿದ್ದಾರೆ. ಸಿಮ್ರನ್‌ಳನ್ನು ಮಲಗೌಡ ಪಾಟೀಲ ಅವರು ಶೈಕ್ಷಣಿಕವಾಗಿ ದತ್ತು ತೆಗೆದುಕೊಂಡಿದ್ದಾರೆ.

ಆನಂದ ಕೋಲಕಾರ ಅವರು ಮಲಗೌಡ ಪಾಟೀಲ ಅವರ ಆಪ್ತ ಗೆಳೆಯರಾಗಿದ್ದರು. ಧೀರ್ಘಕಾಲ ಗೆಳೆಯ ಇಹಲೋಕ ತ್ಯಜಿಸಿದ್ದಾರೆ. ತಾಯಿಯೊಂದಿಗೆ ಮೂವರು ಮಕ್ಕಳು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದರು, ಆಪ್ತ ಗೆಳೆಯನ ಮಕ್ಕಳಿಗೆ ಆಸರೆಯಾಗಿ ನಿಲ್ಲುವ ಮೂಲಕ ಮಲಗೌಡ ಪಾಟೀಲ ಮಾನವೀಯತೆ ಮೆರೆದಿದ್ದಾರೆ. ಗ್ರಾಪಂ ಅಧ್ಯಕ್ಷ ಅಮೃತ ಮುದ್ದೆನ್ನವರ, ಸದಸ್ಯ ಅಪ್ಪಯ್ಯಗೌಡ ಪಾಟೀಲ, ಪಿಕೆಪಿ ಎಸ್ ಸದಸ್ಯ ಪರಶುರಾಮ ರೇಡೇಕರ, ನಿಂಗಪ್ಪ ಕೋಲಕಾರ, ಅಪ್ಪಯ್ಯ ಕೋಲಕಾರ, ಸೇಫ್ ವಾರ್ಡ್ ಸಂಸ್ಥೆ ಅಧ್ಯಕ್ಷ ಸಂತೋಷ ಮೇತ್ರಿ, ರಂಜನಾ ಕೋಲಕಾರ, ಮಸನವ್ವ ಕೋಲಕಾರ ಸೇರಿದಂತೆ ಇತರರು ಇದ್ದರು.

# ಲೋಕ ಅದಾಲತ್: ಒಂದಾದ ಮೂವರು ದಂಪತಿಗಳು




ರಬಕವಿ–ಬನಹಟ್ಟಿ,ಡಿ14: ಮೂವರು ದಂಪತಿಗಳು ಪರಸ್ಪರ ಒಂದಾಗುವಲ್ಲಿ ಬನಹಟ್ಟಿಯಲ್ಲಿ ನಡೆದ ರಾಷ್ಟ್ರೀಯ ಲೋಕ ಅದಾಲತ್ ಕಾರಣವಾಯಿತು.

ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಲಯದಲ್ಲಿ 295 ಪ್ರಕರಣಗಳಲ್ಲಿ 68 ಪ್ರಕರಣಗಳು ಇತ್ಯರ್ಥಗೊಂಡಿದ್ದು, ಒಟ್ಟು 1,49,72,694 ಪರಿಹಾರ ಮೊತ್ತವನ್ನು ನೀಡಲಾಯಿತು ಎಂದು ಹಿರಿಯ ಶ್ರೇಣಿಯ ನ್ಯಾಯಾಧೀಶ ಆಶಪ್ಪ ಸಣಮನಿ ತಿಳಿಸಿದರು.

ಕಿರಿಯ ಶ್ರೇಣಿಯ ಸಿವಿಲ್ ನ್ಯಾಯಾಲಯದಲ್ಲಿ 851 ಪ್ರಕರಣಗಳಲ್ಲಿ 600 ಪ್ರಕರಣಗಳು ಇತ್ಯಥ–ರ್ಗೊಂಡಿದ್ದು, ರೂ. 1,59,52,125 ಪರಿಹಾರ ಮೊತ್ತವನ್ನು ನೀಡಲಾಯಿತು ಎಂದು ಕಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶೆ ಶುಷ್ಮ ಟಿ.ಸಿ. ತಿಳಿಸಿದರು. ಮೂರು ಪ್ರಕರಣಗಳಲ್ಲಿ ದಂಪತಿಗಳು ಮತ್ತು ಮಕ್ಕಳು ಒಂದಾಗಿದ್ದು ವಿಶೇಷವಾಗಿತ್ತು. ನ್ಯಾಯಾಧೀಶ ಆಶಪ್ಪ ಸಣಮನಿ ಮಾತನಾಡಿ, ಲೋಕ್ ಅದಾಲತ್ ಯಶಸ್ವಿಗೆ ವಕೀಲರು ಮತ್ತು ಕಕ್ಷಿದಾರರ ಸಹಕಾರ ಬಹಳಷ್ಟು ಮುಖ್ಯವಾಗಿದೆ. ಲೋಕ್ ಅದಾಲತ್ ನಲ್ಲಿ ಪ್ರಕರಣಗಳನ್ನು ಇತ್ಯರ್ಥಗೊಳಿಸಿಕೊಂಡರೆ ಮುಂದಿನ ದಿನಗಳಲ್ಲಿ ಸಾಮರಸ್ಯದಿಂದ ಜೀವನವನ್ನು ಸಾಗಿಸಬಹುದಾಗಿದೆ ಎಂದು ತಿಳಿಸಿದರು. ಎಂ.ವೈ.ಪಾಟೀಲ ಮತ್ತು ಎನ್. ಎಂ.ತಳವಾರ ಸಂಧಾನಕಾರರಾಗಿದ್ದರು.

ವಕೀಲರ ಸಂಘದ ಅಧ್ಯಕ್ಷ ಶ್ರೀಕಾಂತ ಕುಲಕರ್ಣಿ, ಕಾರ್ಯದರ್ಶಿ ಎ.ಜಿ.ಸಲಬನ್ನವರ, ಸಹ ಕಾರ್ಯದರ್ಶಿ ಪಿ.ಜಿ.ಪಾಟೀಲ, ಬಸವರಾಜ ಭೂತಿ, ಬಸವರಾಜ ಪುಟಾಣಿ, ಮಹಾಂತೇಶ ಪದಮಗೊಂಡ, ಬಿ.ಎನ್ ಖಟಾವಕರ, ಬಿ.ಎಂ. ಕಾರ್ವೇಕರ, ಎಸ್.ಎ.ಪಾಟೀಲ, ಎಂ.ಸಿ.ಚೋಳಿ. ಎ.ಜಿ.ಗಾಡಬೋಲೆ ಸೇರಿದಂತೆ ವಕೀಲರು ಇದ್ದರು.

# ಹಿರಿಯಜ್ಜಿಗೆ ಬಂಗಾರದ ಹೂ ಹಾರಿಸಿದ ಮೊಮ್ಮಕ್ಕಳು

**ಶಿವಾನಂದ ಮುಧೋಳ ವರದಿ**

ಮೂಡಲಗಿ : ಇಂದಿನ ಹೈಬ್ರೀಡ್ ಯುಗದಲ್ಲಿ ಹಿರಿಯರಿಲ್ಲದ ಕುಟುಂಬಗಳೆಷ್ಟೋ? ಮುದಿ ವಯಸ್ಸಿನವ–ರಿಗೆ ಮಾನ್ಯತೆಯಿಲ್ಲದ ಮನೆಗಳೆಷ್ಟೋ? ವಯಸ್ಸಾದವರನ್ನು ನಿಷ್ಪ್ರಯೋಜಕರೆಂಬಂತೆ ಮೂಲೆ ಗುಂಪು ಮಾಡಿ ಕಡೆಗಣಿಸುವ ಇಂದಿನ ಕಲಿಕಾಲದಲ್ಲಿ ಕೊಂಚ ಸಮಾದಾನ ತರುವ ಕಳಕಳಿಯ ಕಾರ್ಯಕ್ರಮವೊಂದು ಮೂಡಲಗಿಯಲ್ಲಿ ಇತ್ತೀಚೆಗೆ ಜರುಗಿತು.

ವಂಶ ವೃಕ್ಷದ ಬೇರು ಎನಿಸಿರುವ ಹಿರಿಯ 102 ವರ್ಷದ ಅಜ್ಜಿಗೆ ಬಂಗಾರದ ಹೂವು ಹಾರಿಸುವ ಮೂಲಕ ಹಿರಿಯ ಜೀವಕ್ಕೆ ಗೌರವದ ಕಾಣಿಕೆ ಅರ್ಪಿಸುವ ವಿಶಿಷ್ಠ ಕಾರ್ಯಕ್ರಮ ಅದಾಗಿತ್ತು. ಮೂಡಲಗಿ ಪಟ್ಟಣದ ಶ್ರೀಮತಿ ಈರವ್ವ ಬಸಪ್ಪ ಕುದರಿ ಎಂಬುವರಿಗೆ ಮಕ್ಕಳು, ಮೊಮ್ಮಕ್ಕಳು ಸೇರಿ ಸಂಭ್ರಮದಿಂದ ಬಂಗಾರದ ಹೂವು

ಹಾರಿಸುವ ಕಾರ್ಯಕ್ರಮ ಇತ್ತೀಚೆಗೆ ಮಾಡಿ ಗಮನ ಸೆಳೆದರು.

ಶ್ರೀಮತಿ ಈರವ್ವ ಬಸಪ್ಪ ಕುದರಿ ಅವರಿಗೆ ನಾಲ್ವರು ಗಂಡು ಮಕ್ಕಳು, ಮೂವರು ಹೆಣ್ಣು ಮಕ್ಕಳು ಸೇರಿ 7 ಜನ ಮಕ್ಕಳು, ಮರಿಮಕ್ಕಳು, ಮರಿಮೊಮ್ಮಕ್ಕಳು ಒಟ್ಟು ಭರಪೂರ ತುಂಬು ಕುಟುಂಬವಿದೆ. ಎಲ್ಲರನ್ನೂ ಪ್ರೀತಿ, ಮಮತೆ, ವಾತ್ಸಲ್ಯದ ಧರೆಯೆರೆದು ಬೆಳೆಸಿದ್ದಾಳೆ. ಅವಳ ಪ್ರೀತಿಯ ಋಣ ತೀರಿಸುವ ಉದ್ದೇಶಕ್ಕಾಗಿ ಮಕ್ಕಳು ಮೊಮ್ಮಕ್ಕಳು ಮಮಕಾರದ ಬಂಗಾರದ ಹೂವು ಹಾರಿಸಿದರು.





ಆಕೆಯ ಮಕ್ಕಳಾದ ಗೂಳಪ್ಪ ಬಸಪ್ಪ ಕುದರಿ, ಮೊಮ್ಮಕ್ಕಳಾದ ಬಸವರಾಜ ಗೂಳಪ್ಪ ಕುದರಿ, ಕಿರಣ ಗೂಳಪ್ಪ ಕುದರಿ ಮರಿಮೊಮ್ಮಕ್ಕಳಾದ ಸಮಥ–ರ್ ಬಸವರಾಜ ಕುದರಿ, ಓಂಕಾರ ಕಿರಣ ಕುದರಿ ಕಾರ್ಯಕ್ರಮದಲ್ಲಿ ಮುದ್ದಿನ ಅಮ್ಮ ಮತ್ತು ಅಜ್ಜಿ ಎರಡೂ ಆಗಿರುವ ಹಿರಿಯ ಜೀವಿಗೆ ಸುವರ್ಣಪುಷ್ಪವೃಷ್ಟಿ ಮಾಡಿದರು. ಅದರಲ್ಲಿ ಅಜ್ಜಿಯ ಮರಿಮೊಮ್ಮಗ ಸಮರ್ಥ ಬಸವರಾಜ ಕುದರಿ ಅವರ ಮೊದಲ ಹುಟ್ಟು ಹಬ್ಬ ಕೂಡ ಜರುಗಿದ್ದು ವಿಶೇಷವಾಗಿತ್ತು.

ರಕ್ತ ಬಸಿದು ಜನ್ಮ ನೀಡಿ, ಜೀವ ತೇದು ಆರೈಕೆ ಮಾಡಿ, ಮುದ್ದು ಬಂಗಾರಾ ಎಂದು ಎತ್ತಿ ಆಡಿಸಿದ ನಿಸ್ವಾರ್ಥ ಪ್ರೀತಿಯ ದೇವತೆಗೆ ಪ್ರತಿಯಾಗಿ ಇನ್ನೇನು ನೀಡಲು ಸಾಧ್ಯ? ನಮ್ಮನ್ನು ಬಂಗಾರ ಮಾಡಿದ ಬಂಗಾರಕ್ಕೆ ಬಂಗಾರದ ಹೂವು ಹಾರಿಸುವ ಬಂಗಾರದ ಕೆಲಸ ಮಾಡಿದ್ದು ನೋಡುಗರಿಗೆ ಬಂಗಾರವೆನಿಸಿತು.

## ಎಸ್‌ಎಸ್‌ಎಲ್ ಸಿ ಮಾರ್ಗದರ್ಶಿ ಕೈಪಿಡಿ ಬಿಡುಗಡೆ ಮಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ : ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ನೇತೃತ್ವದಲ್ಲಿ ಹೊರ ತಂದಿರುವ ಎಸ್ ಎಸ್ ಎಲ್ ಸಿ ಮಾರ್ಗದರ್ಶಿ ಕೈಪಿಡಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಶನಿವಾರ ಬಿಡುಗಡೆಗೊಳಿಸಿದರು.

ಮಕ್ಕಳಿಗಾಗಿ ದಾನಿಗಳ ಮೂಲಕ ಆರು ವಿಷಯಗಳ ಸಂಪನ್ಮೂಲ ವ್ಯಕ್ತಿಗಳ ಪರಿಶ್ರಮದಿಂದ ಸಿದ್ಧವಾಗಿರುವ ಈ ಕೈಪಿಡಿಯ ಸದುಪಯೋಗವನ್ನು ಶಿಕ್ಷಕರು ಮಕ್ಕಳು ಪಡೆದುಕೊಳ್ಳಬೇಕು. ಮಕ್ಕಳಿಗೆ ನೆರವಾಗುವ ಈ ಯೋಜನೆಯನ್ನು ರೂಪಿಸಿದ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರಿಗೂ ಹಾಗೂ ಅದಕ್ಕೆ ನೆರವಾದ ಸಕಲರಿಗೂ ತುಂಬು ಹೃದಯದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದು ಸಚಿವರು ತಿಳಿಸಿದರು.

ಎಸ್‌ಎಸ್‌ಎಲ್ ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ವಿಜಯಪುರದ ಎಕ್ಸಲೆಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಬಸವರಾಜ ಕೌಲಗಿ ಅವರು ಕೈಪಿಡಿಯನ್ನು ಉಚಿತವಾಗಿ ಮುದ್ರಿಸಿ ಕೊಟ್ಟಿದ್ದಾರೆ. ಬೆಳಗಾವಿಯ ಗೃಹ ಕಚೇರಿಯಲ್ಲಿ ಸಚಿವರು ಕೈಪಿಡಿಯನ್ನು ಬಿಡುಗಡೆ ಮಾಡಿದರು.

ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಬೆಳಗಾವಿಯ ಅರ್ಚಕ ಶಂಕರಯ್ಯ ಶಾಸ್ತ್ರಿ ಹಿರೇಮಠರಿಗೆ "ವೀರಧರ್ಮ" ಪ್ರಶಸ್ತಿ

ಬೆಳಗಾವಿ –ಡಿ. 14– ನಿನ್ನೆ ನವದೆಹಲಿಯ ಪ್ರಗತಿ ಮೈದಾನದ ಭಾರತ ಮಂಡಪಂ ನಲ್ಲಿ ವೀರಶೈವ ಲಿಂಗಾಯುತ ಸಂಘಟನ ವೇದಿಕೆಯ ವತಿಯಿಂದ ಆಚರಿಸಲಾದ ವಿರಭದ್ರೇಶ್ವರ ಜಯಂತಿ, ವೀರಭದ್ರೇಶ್ವರ ಪ್ರಶಸ್ತಿ ಪ್ರಧಾನ ಮತ್ತು ರಾಷ್ಟ್ರಮಟ್ಟದ ಮಹಿಳಾ ಮಿಲನ್ ಕಾರ್ಯಕ್ರಮದಲ್ಲಿ ವೀರಶೈವ ಧರ್ಮ ಹಾಗೂ ಸಮಾಜ–ಕ್ಕೆ ಗಣನಿಯ ಸೇವೆ ಸಲ್ಲಿಸಿದ ಸಾಧಕರಿಗೆ ಸಂಭಂದಿಸಿದ ಪ್ರಶಸ್ತಿ ನೀಡಿ ಗೌರವಿಸಲಾಯಿತು, ಬೆಳಗಾವಿಯ ಜೆ ಎನ್ ಎಂ ಸಿ ಆವರಣದ ಶಿವಾಲಯದ ಅರ್ಚಕರಾಗಿರುವ ಶ್ರೀ ಶಂಕರಯ್ಯ ಶಾಸ್ತ್ರಿ ಹಿರೇಮಠ ಇವರು ಧಾರ್ಮಿಕ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆಯನ್ನ ಪರಿಗಣಿಸಿ ವೀರ ಧರ್ಮ ಪ್ರಶಸ್ತಿಯನ್ನ ನೀಡಿ ಗೌರವಿಸಲಾಯಿತು, ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷರಾದ ಪ್ರದೀಪ್ ಕಂಕಣವಾಡಿ ಮಾತ್ತು ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಸದ ಹಾಗೂ ಮಾಜಿ ಮುಖ್ಯ ಮಂತ್ರಿ ಜಗದೀಶ್ ಶೆಟ್ಟರ್ ಪ್ರಶಸ್ತಿ ಪ್ರಧಾನ ಮಾಡಿದರು, 2024 ಸಾಲಿನ ವೀರಭದ್ರೇಶ್ವರ ಪ್ರಶಸ್ತಿ ಪುರಸ್ಕೃತ ಹಾಗೂ ಕೇಂದ್ರ ಸಚಿವ ವಿ ಸೋಮಣ್ಣ, ನಾಡಿನ ಹಿರಿಯ ಮಠಾಧಿಶರು, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದರಾದ ಬಿ ವೈ ರಾಘವೇಂದ್ರ, ವಿಶ್ವೇಶ್ವರ ಹೆಗಡೆ ಕಾಗೇರಿ ಮಾತ್ತು ಅನೇಕ ರಾಜಕೀಯ ಧು–ರಿಣ ಗಣ್ಯ ಮಾನ್ಯರು ಉಪ್ಥಿತರಿದ್ದರು. ಶಂಕರಯ್ಯನವರು ಧರ್ಮಕ್ಕೆ ಸೇವೆಗಾಗಿ ಈಗಾಗಲೇ ಅನೇಕ ಪ್ರಶಸ್ತಿಗಳು ಬಂದಿವೆ.


**ಪಟ್ಟಣ ಪಂಚಾಯತ ಕಾರ್ಯಾಲಯ ಚನ್ನಮ್ಮನ ಕಿತ್ತೂರ**
**ತಾ : ಚ,ಕಿತ್ತೂರ ಜಿ : ಬೆಳಗಾವಿ**
ದೂ : 08288–286344 E-Mail : itstaff_ulb_chkittur@yahoo.in

ಕ್ರ:ಸಂ:ಪಪಂಚಕಿ:ಲೋಕೊ:ISWM/2024–25 ದಿನಾಂಕ: 10/12/2024

**ಟೆಂಡರ್ ಪ್ರಕಟಣೆ:**
**॥ಇ–ಪ್ರೋಕ್ಯೂರಮೆಂಟ್ ಮುಖಾಂತರ॥**

ಸನ್ 2024–25ನೇ ಸಾಲಿನ Integral Solid Waste Management (ISWM) DPR under SBM ಯೋಜನೆ, ಮೆಟೀರಿಯಲ್ ರಿಕವರಿ ಫೆಸಿಲಿಟಿ (ಎಮ್.ಆರ್.ಎಫ್) ಘಟಕ ಸ್ಥಾಪಿಸುವ ಅನುದಾನದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ ಬಿಡ್ ಡಾಕ್ಯುಮೆಂಟ್ ಕೆ.ಡಬ್ಲು–1,2, ಕೆ.ಜಿ–1 ನಿಯಮದನ್ವಯ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕಾರಣ ಇಚ್ಛೆಯುಳ್ಳ ಗುತ್ತಿಗೆದಾರರು ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ ಟೆಂಡರ ಸಲ್ಲಿಸಬಹುದು.

ಪ್ಯಾ. ಕ್ರ.ಸಂ:1:ಕಾಮಗಾರಿಗಳ ವಿವರ/ಇಂಡೆಂಟ್ ಸಂಖ್ಯೆ:DMA/2024-25/EL/WORK_INDENT33604, ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 5.80, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):14,500/–, ಪ್ಯಾ. ಕ್ರ.ಸಂ:2: ಕಾಮಗಾರಿಗಳ ವಿವರ/ಇಂಡೆಂಟ್ ಸಂಖ್ಯೆ:DMA/2024-25/OW/WORK_INDENT26478, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):8.00, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):20,000/–, ಪ್ಯಾ. ಕ್ರ.ಸಂ:3:ಕಾಮಗಾರಿಗಳ ವಿವರ/ಇಂಡೆಂಟ್ ಸಂಖ್ಯೆ:DMA/2024-25/OW/WORK_INDENT20074/CALL-2, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):30.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):60,000/–, ಪ್ಯಾ. ಕ್ರ.ಸಂ:4:ಕಾಮಗಾರಿಗಳ ವಿವರ / ಇಂಡೆಂಟ್ ಸಂಖ್ಯೆ:DMA/2024-25/OW/WORK_INDENT22758/CALL-2 (SC), ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):27.50,ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):34,375/–, ಪ್ಯಾ. ಕ್ರ.ಸಂ:5:ಕಾಮಗಾರಿಗಳ ವಿವರ / ಇಂಡೆಂಟ್ ಸಂಖ್ಯೆ:DMA/2024-25/BD/WORK_INDENT33655, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):9.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):22,500/–, ಪ್ಯಾ. ಕ್ರ.ಸಂ:6:ಕಾಮಗಾರಿಗಳ ವಿವರ/ಇಂಡೆಂಟ್ ಸಂಖ್ಯೆ:DMA/2024-25/IND3611, ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ):4.71, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):11,775/–, ಪ್ಯಾ. ಕ್ರ.ಸಂ:7:ಕಾಮಗಾರಿಗಳ ವಿವರ/ಇಂಡೆಂಟ್ ಸಂಖ್ಯೆ:DMA/2024-25/IND4085, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):1.45, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):3,625/–

ಟೆಂಡರ್ ಸಲ್ಲಿಸುವ ಮೊದಲು ಗುತ್ತಿಗೆದಾರರು ಅತ್ಯಂತ ಅವಶ್ಯಕವಾಗಿ ಟೆಂಡರುಗಳಿಗೆ ಸಂಬಂಧಿಸಿದಂತೆ ನಿಯಮ ನಿಭಂದಣೆಗಳನ್ನು ಓದಿ ಪಾಲಿಸಬೇಕು.

ಟೆಂಡರ ಪಾರ್ಮ ವೆಬ್ ಸೈಟನಿಂದ ಡೌನ್ ಲೋಡ ಮಾಡಿಕೊಳ್ಳುವ ಪ್ರಾರಂಭದ ದಿನಾಂಕ: 12–12–2024. ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ: 20–12–2024 ಸಾಯಂಕಾಲ:4:00 ಘಂಟೆಯವರೆಗೆ. ಟೆಂಡರಗಳನ್ನು ತೆರೆಯುವ ದಿನಾಂಕ:21–12–2024 ರ ಬೆಳಿಗ್ಗೆ 4:00 ಘಂಟೆಯ ನಂತರ ತೆರೆಯಲಾಗುವುದು. ಹೆಚ್ಚಿನ ಮಾಹಿತಿ ಮತ್ತು ಶರತ್ತುಗಳಿಗಾಗಿ Website: https://kppp.karnataka.gov.in ವೆಬ್‌ಸೈಟನಲ್ಲಿ ನೋಡಬಹುದು.

**ಸಹಿ/– ಮುಖ್ಯಾಧಿಕಾರಿಗಳು,**
**ಪಟ್ಟಣ ಪಂಚಾಯತ**
**ಚನ್ನಮ್ಮನ ಕಿತ್ತೂರ**

**ಸಹಿ/– ಆಡಳಿತಾಧಿಕಾರಿಗಳು**
**ಪಟ್ಟಣ ಪಂಚಾಯತ ಚ.ಕಿತ್ತೂರ**
**ಹಾಗೂ ತಹಶಿಲ್ದಾರರು, ಚ.ಕಿತ್ತೂರ**

DIPR/BGM/RO-NO-1305/KSMCA/2024-25


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 262, Postal Reg No. PMG/KA/NK/BM/135/22-24 / POST AT Vantamury Colony Post Office